ಸಂಪುಟ: 06 ಸಂಚಿಕೆ: 83 ಪುಟಗಳು: 08 ಶನಿವಾರ 06 ಜೂನ್ 2026

www.udayavahini.in epaper.udayavahini.in Udaya vahini news Udaya vahini news Udayavahini news you tube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಬದುಕಿನಲ್ಲಿ ಎಲ್ಲಾ ಯಶಸ್ಸಿಗೂ ಮೂರು ಔಷಧಗಳಿವೆ. ಒಂದು ವಿದ್ಯೆ, ಇನ್ನೊಂದು ದುಡಿಮೆ, ಮತ್ತೊಂದು ತಾಳ್ಮೆ.

## ಅಕ್ರಮ ಹಣ ವರ್ಗಾವಣೆ ಪ್ರಕರಣ : ಕ್ರಿಪ್ಟೊ ಕರೆನ್ಸಿ ಟ್ರೇಡರ್ ರಾಬಿನ್ ಬಂಧನ

• ಉದಯವಾಹಿನಿ, ಬೆಂಗಳೂರು

ಜಾರಿ ನಿರ್ದೇಶನಾಲಯ ನಡೆಸುತ್ತಿರುವ ಅಕ್ರಮ ಹಣ ವರ್ಗಾವಣೆ ತನಿಖೆಯ ಭಾಗವಾಗಿ ಕ್ರಿಪ್ಟೊ ಕರೆನ್ಸಿ ಟ್ರೇಡರ್ ರಾಬಿನ್ ಖಂಡೇಲ್ವಾಲ್‌ನನ್ನು ಬಂಧಿಸಲಾಗಿದೆ. ಈತ ಹ್ಯಾಕ್ ಮಾಡಿದ ಹಣವನ್ನು ಕ್ರಿಪ್ಟೊ ಕರೆನ್ಸಿ ನಗದು ರೂಪಕ್ಕೆ ಪರಿವರ್ತಿಸುವಲ್ಲಿ ಪ್ರಮುಖ ಪಾತ್ರವಹಿಸಿದ್ದಾನೆ ಎಂಬುದು ತನಿಖೆಯಲ್ಲಿ ಬೆಳಕಿಗೆ ಬಂದಿದೆ.

ಆರೋಪಿಗಳು ವಿವಿಧ ಕ್ರಿಪ್ಟೊ ಕರೆನ್ಸಿ ಪ್ಲಾಟ್‌ಫಾರ್ಮ್‌ಗಳನ್ನು ಬಳಸಿ ಹಣದ ಜಾಡನ್ನು ಮುಚ್ಚಿಹಾಕಲು ಪ್ರಯತ್ನಿಸುತ್ತಿದ್ದರು. ರಾಬಿನ್ ಖಂಡೇಲ್ವಾಲ್ ಈ ಅಕ್ರಮ ಹಣವನ್ನು ಹವಾಲ ಮಾರ್ಗಗಳ ಮೂಲಕ ಅಥವಾ ಇತರ ಬ್ಯಾಂಕಿಂಗ್ ವ್ಯವಹಾರಗಳ ಮೂಲಕ ವರ್ಗಾಯಿಸಲು ಸಹಾಯ ಮಾಡುತ್ತಿದ್ದನೆಂದು ಅಧಿಕಾರಿಗಳು ಆರೋಪಿಸಿದ್ದಾರೆ. ರಾಬಿನ್ ಅಪರಾಧದಿಂದ ಬಂದ ಹಣವನ್ನು ಹೊಂದಿಕೆ, ಸ್ವಾಧೀನ, ಮರೆಮಾಚುವಿಕೆ ಹಾಗೂ ವರ್ಗಾವಣೆಗೆ ನೇರವಾಗಿ ಸಹಕಾರ ನೀಡಿದ್ದಾನೆ.

## ಡಿಕೆಶಿ ಸರ್ಕಾರಕ್ಕೆ ಅಲ್ಪಾಯುಷ್ಯ

• ಉದಯವಾಹಿನಿ, ಬೆಂಗಳೂರು

ಕಾಂಗ್ರೆಸ್ ಹಿರಿಯ ನಾಯಕ ಹಾಗೂ ಜಲಸಂಪನ್ಮೂಲ ಸಚಿವ ರಾಮಲಿಂಗಾರೆಡ್ಡಿ ಅವರು ಖಾತೆ ಹಂಚಿಕೆ ವಿಚಾರದಲ್ಲಿ ಅಸಮಾಧಾನಗೊಂಡು ರಾಜೀನಾಮೆ ನೀಡಿರುವುದು ನೂತನ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದ ಸರ್ಕಾರಕ್ಕೆ ಅಲ್ಪಾಯುಷ್ಯ ಎಂಬುದನ್ನು ಸಾಬೀತು ಪಡಿಸುತ್ತಿದೆ ಎಂದು ಜೆಡಿಎಸ್ ಹಿರಿಯ ನಾಯಕ, ವಿಧಾನಪರಿಷತ್ ಹಿರಿಯ ಸದಸ್ಯ ಟಿ.ಎ.ಶರವಣ ಟೀಕಿಸಿದ್ದಾರೆ. ಶಿವಕುಮಾರ್ ಮತ್ತು ಅವರ ಸಂಪುಟ ಇಂದು ಹಿರಿಯ ಮಂತ್ರಿ ರಾಜೀನಾಮೆ ನೀಡುವ ಮಟ್ಟದ ಬಿಕ್ಕಟ್ಟಿಗೆ ಸಿಲುಕಿರುವುದನ್ನು ನೋಡಿದರೆ ಈ ಸರ್ಕಾರಕ್ಕೆ, ಕಾಂಗ್ರೆಸ್ ಪಕ್ಷಕ್ಕೆ ಭವಿಷ್ಯ ಇಲ್ಲ ಎನ್ನುವುದು ಆರಂಭದಲ್ಲೇ ಸಾಬೀತಾಗಿದೆ ಎಂದು ಅವರು ಗೇಲಿ ಮಾಡಿದ್ದಾರೆ. ಈ ಸಂಬಂಧ ಪತ್ರಿಕಾ ಹೇಳಿಕೆ ನೀಡಿರುವ ಅವರು, ಸಂಪುಟ ರಚನೆ, ಖಾತೆಗಳ ಹಂಚಿಕೆಯ ರೀತಿ ನೋಡಿದರೆ, ಶಿವಕುಮಾರ್ ಅವರಿಗೆ ಯಾವುದೇ ನಿಯಂತ್ರಣ ಇಲ್ಲ. ಯಾವುದೇ ಅಧಿಕಾರವನ್ನು ಹೈಕಮಾಂಡ್ ನೀಡಿಲ್ಲ. ಪ್ರತಿ ಹಂತದಲ್ಲೂ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಡಿ.ಕೆ.ಶಿವಕುಮಾರ್ ನಡುವಿನ ಜಟಾಪಟಿ ಸರ್ಕಾರ ಎಂಬುದು ಸಾಬೀತಾಗುತ್ತದೆ ಎಂದು ಅವರು ಆರೋಪಿಸಿದ್ದಾರೆ. ಶಿವಕುಮಾರ್ ಅವರ ಸಂಪುಟದಲ್ಲಿ ಸ್ಥಾನ ಸಿಗದಿರುವುದು ನೋಡಿದರೆ ಅವರೊಬ್ಬ ಸಿದ್ದರಾಮಯ್ಯ, ಹೈಕಮಾಂಡ್ ನಿಯಂತ್ರಣದ ರಿಮೋಟ್ ಕಂಟ್ರೋಲ್ ಎಂಬುದು ವ್ಯಕ್ತವಾಗುತ್ತದೆ. ಕಾಂಗ್ರೆಸ್ ಪಕ್ಷದ ಆಡಳಿತ ಬಗ್ಗೆ ಜನರ ನಂಬಿಕೆ ಹುಸಿಯಾಗಿದ್ದು, ರಾಮಲಿಂಗಾರೆಡ್ಡಿ ಅವರಷ್ಟೇ ಅಲ್ಲ, ಹಿರಿಯ ಸಚಿವ ಕೆ.ಎಚ್. ಮುನಿಯಪ್ಪ ಕೂಡ ಖಾತೆ ಬಗ್ಗೆ ಬೇಸರಗೊಂಡಿದ್ದು, ರಾಜೀನಾಮೆಗೆ ಚಿಂತನೆ ನಡೆಸಿರುವ ಬಗ್ಗೆ ಮಾಹಿತಿ ಬಂದಿದೆ.

## ಶೇ.50 ರಿಯಾಯಿತಿಯಲ್ಲಿ ದಂಡ ಪಾವತಿಸಲು ವಾಹನ ಸವಾರರಿಗೆ ಮತ್ತೊಂದು ಅವಕಾಶ

• ಉದಯವಾಹಿನಿ,ಬೆಂಗಳೂರು



ರಾಜ್ಯದಲ್ಲಿ ನೂತನವಾಗಿ ರಚನೆಯಾಗಿರುವ ಡಿ.ಕೆ. ಶಿವಕುಮಾರ್ ನೇತೃತ್ವದ ಸರ್ಕಾರ ವಾಹನ ಸವಾರರಿಗೆ ಸಿಹಿಸುದ್ದಿ ನೀಡಿದೆ. ಈ ಹಿಂದೆ ಜಾರಿಯಲ್ಲಿದ್ದ ಶೇ.50ರಷ್ಟು ಸಂಚಾರ ದಂಡ ರಿಯಾಯಿತಿಯನ್ನು ಮತ್ತೆ ಪುನಃಸ್ಥಾಪಿಸಲಾಗಿದೆ. ರಾಜ್ಯ ಸರ್ಕಾರವು ಈ ಬಗ್ಗೆ ಮಹತ್ವದ ಘೋಷಣೆ ಮಾಡಿ ಆದೇಶ ಹೊರಡಿಸಿದೆ.ರಾಜ್ಯ ಸರ್ಕಾರದ ನಿರ್ಧಾರದ ಪ್ರಕಾರ, ವಾಹನ ಸವಾರರು ಬಾಕಿ ಉಳಿದಿರುವ ಸಂಚಾರ ದಂಡದ ಮೇಲೆ ಶೇ.50 ರಿಯಾಯಿತಿ ಪಡೆದುಕೊಳ್ಳಲು ಮತ್ತೆ ಅವಕಾಶ ದೊರೆತಿದೆ. ಈ ಹಿಂದೆ ಸರ್ಕಾರ ನೀಡಿದ್ದ ಈ ರಿಯಾಯಿತಿಗೆ ವಾಹನ ಸವಾರರಿಂದ ಭರ್ಜರಿ ಪ್ರತಿಕ್ರಿಯೆ ವ್ಯಕ್ತವಾಗಿತ್ತು.

ಆ ಯಶಸ್ಸಿನ ಹಿನ್ನೆಲೆಯಲ್ಲಿ ಮತ್ತೊಮ್ಮೆ ಈ ಯೋಜನೆಯನ್ನು ಜಾರಿಗೆ ತರಲಾಗಿದೆ ಎಂದು ಸರ್ಕಾರ ಹೇಳಿದೆ. ಈ ರಿಯಾಯಿತಿ ಯೋಜನೆಯಡಿ ವಾಹನ ಸವಾರರು ತಮ ಬಾಕಿ ದಂಡವನ್ನು ಶೇ.50 ರಿಯಾಯಿತಿಯೊಂದಿಗೆ ಪಾವತಿಸಲು 20 ದಿನಗಳ ಕಾಲಾವಕಾಶ ನೀಡಲಾಗಿದೆ. ಈ ಅವಧಿಯಲ್ಲಿ ದಂಡ ಪಾವತಿಸಿದರೆ ಅರ್ಧದಷ್ಟು ಮೊತ್ತವನ್ನು ಉಳಿಸಿಕೊಳ್ಳಬಹುದು. ಇದು ವಾಹನ ಸವಾರರಿಗೆ ದೊಡ್ಡ ಆರ್ಥಿಕ ಸಹಾಯವಾಗುವ ನಿರೀಕ್ಷೆ ಇದೆ.

ಮೂರು ದಿನಗಳ ಹಿಂದೆ ಅಧಿಕಾರಕ್ಕೆ ಬಂದ ಡಿಕೆ ಶಿವಕುಮಾರ್ ನೇತೃತ್ವದ ಕಾಂಗ್ರೆಸ್ಸಿಗೆ ಆರಂಭಿಕ ಕಂಟಕ ಎದುರಾಗಿದೆ. ಸಚಿವ ಸ್ಥಾನದ ಅಸಮಾಧಾನದ ಹಿನ್ನೆಲೆಯಲ್ಲಿ ರಾಮಲಿಂಗಾ ರೆಡ್ಡಿ ರಾಜೀನಾಮೆಯನ್ನು ನೀಡಿದ್ದರು. ಈಗ, ಅವರ ಬೆನ್ನಲ್ಲೇ, ಮತ್ತೊರ್ವ ಹಿರಿಯ ಸಚಿವ ಕೆಎಚ್ ಮುನಿಯಪ್ಪ, ತಮಗೆ ಸಿಕ್ಕ ಖಾತೆಗೆ ಬೇಸರ ವ್ಯಕ್ತ ಪಡಿಸಿದ್ದಾರೆ.

### ಕೈ ಖಾತೆ ಕ್ಯಾತೆ

# ಸಚಿವರು ರೆಬೆಲ್ ಸಿಎಂ ಟ್ರಬಲ್

### ಕಾಂಗ್ರೆಸ್‌ನಲ್ಲೇ ಇರುತ್ತೇನೆ

ನಾನು ಕಾಂಗ್ರೆಸ್‌ನಲ್ಲೇ ಇರುತ್ತೇನೆ. 53 ವರ್ಷ ಕಾಂಗ್ರೆಸ್‌ಗೆ ಕೆಲಸ ಮಾಡಿದ್ದೇನೆ, ಇನ್ನು ಮುಂದೆಯೂ ಶಾಸಕನಾಗಿಯೇ ಮುಂದುವರಿಯುತ್ತೇನೆ. ಯಾರ ಮೇಲೂ ಬೇಸರ ಇಲ್ಲ. ಹೈಕಮಾಂಡ್ ಮೇಲೂ ಇಲ್ಲ, ಡಿಕೆ ಶಿವಕುಮಾರ್ ಮೇಲೂ ಬೇಸರ ಇಲ್ಲ ಎಂದಿದ್ದಾರೆ. ನಾನು ಈ ಹಿಂದೆ ಸಿದ್ದರಾಮಯ್ಯ ಅವರತ್ರ, ಡಿಕೆಶಿವಕುಮಾರ್ ಅವರ ಬಳಿ, ಅಥವಾ ಹೈಕಮಾಂಡ್ ಹತ್ರನೂ ಸಚಿವ ಮಾಡಿ ಎಂದು ಕೇಳಿರಲಿಲ್ಲ, ಅವರೇ ಬೆಂಗಳೂರು ನಗರಾಭಿವೃದ್ಧಿ ಕೊಡುತ್ತೇವೆ ಎಂದಿದ್ದರು ಎಂಬುದಾಗಿ ಸಚಿವರು ಹೇಳಿದ್ದಾರೆ.





### ಮುನಿಯಪ್ಪ ಅಸಮಾಧಾನ

ತಾವು ಬಯಸಿದ್ದ ಖಾತೆ ಸಿಗದ ಹಿನ್ನೆಲೆಯಲ್ಲಿ, ಸಭೆಯಿಂದಲೇ ರಾಮಲಿಂಗಾ ರೆಡ್ಡಿ ನಿರ್ಗಮಿಸಿದ್ದರು. ಶುಕ್ರವಾರ ತಮ್ಮ ಸ್ಥಾನಕ್ಕೆ ಒತ್ತಡದ ನಡುವೆಯೂ ರಾಜೀನಾಮೆಯನ್ನು ನೀಡಿದ್ದಾರೆ. ಅಧಿಕಾರಕ್ಕೆ ಬಂದ ಮೂರೇ ದಿನದಲ್ಲಿ ಆದ ಈ ವಿದ್ಯಮಾನ, ರಾಜ್ಯ ಕಾಂಗ್ರೆಸ್ಸಿಗೆ ಶಾಕ್ ನೀಡಿತ್ತು.

ಈಗ, ಕೆಎಚ್ ಮುನಿಯಪ್ಪ ಅಸಮಾಧಾನ ಉರಿಯುವ ಬೆಂಕಿಗೆ ತುಪ್ಪ ಸುರಿದಂತಾಗಿದೆ.

**ಕಾಂಗ್ರೆಸ್ಸಿಗೆ ಮತ್ತೊಂದು ಶಾಕ್**

### ರಾಮಲಿಂಗಾ ರೆಡ್ಡಿ ರಾಜೀನಾಮೆ

ಸಚಿವ ರಾಮಲಿಂಗಾ ರೆಡ್ಡಿ ಬೆಂಗಳೂರು ನಗರಾಭಿವೃದ್ಧಿ ಖಾತೆಗೆ ಪಟ್ಟು ಹಿಡಿದಿದ್ದರು. ಆದರೆ, ಅವರಿಗೆ ಜಲಸಂಪನ್ಮೂಲ ಇಲಾಖೆ ನೀಡಲು ತೀರ್ಮಾನಿಸಲಾಗಿದೆ. ಗುರುವಾರ ಈ ಸಂಬಂಧ ಸಿಎಂ ಬಳಿ ಮಾತನಾಡಿದ್ದ ಸಚಿವ ರೆಡ್ಡಿ ತನಗೇ ಬೆಂಗಳೂರು ನಗರಾಭಿವೃದ್ಧಿ ಖಾತೆನೇ ಬೇಕು ಎಂದು ಪಟ್ಟು ಹಿಡಿದಿದ್ದರು. ಅದಿಲ್ಲವಾದರೇ ನನಗೆ ಸಚಿವ ಸ್ಥಾನವೇ ಬೇಡ ಎಂದು ಸ್ಪಷ್ಟವಾಗಿ ಹೇಳಿದ್ದರು. ಜಲಸಂಪನ್ಮೂಲ ಖಾತೆ ನೀಡಿದರೆ ಅದನ್ನು ನಿಭಾಯಿಸುವುದು, ಪ್ರವಾಸ ಮಾಡುವುದು ಕಷ್ಟವಾಗಲಿದೆ. ಹಾಗಾಗಿ ನನಗೆ ಬೆಂಗಳೂರು ನಗರಾಭಿವೃದ್ಧಿ ಖಾತೆನೇ ಬೇಕು. ಇಲ್ಲವಾದರೆ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡುವುದಾಗಿ ಸಿಎಂ ಬಳಿ ತಮ್ಮ ಸ್ಪಷ್ಟ ನಿಲುವು ತಿಳಿಸಿದ್ದರು.ಇತ್ತ ಖಾತೆ ಹಂಚಿಕೆ ಬಿಕ್ಕಟ್ಟು ಸಂಬಂಧ ಸಿಎಂ ಡಿಕೆಶಿ ಮಾಜಿ ಸಿಎಂ ಸಿದ್ದರಾಮಯ್ಯ ಜೊತೆ ಸುದೀರ್ಘ ಚರ್ಚೆ ನಡೆಸಿದ್ದರು. ಆದರೆ, ಹೈಕಮಾಂಡ್ ಬದಲಾವಣೆಗೆ ಒಪ್ಪಿರಲಿಲ್ಲ ಎನ್ನಲಾಗಿದೆ. ಕೊನೆಗೆ ಸಚಿವ ರಾಮಲಿಂಗಾ ರೆಡ್ಡಿಗೆ ಜಲಸಂಪನ್ಮೂಲ ಖಾತೆ ಹಂಚಿಕೆ ಮಾಡಿ ಅಧಿಸೂಚನೆ ಹೊರಡಿಸಲಾಯಿತು. ಇದರಿಂದ ಅಸಮಾಧಾನಗೊಂಡಿರುವ ಸಚಿವ ರಾಮಲಿಂಗಾ ರೆಡ್ಡಿ ರಾಜೀನಾಮೆ ಪತ್ರವನ್ನು ರವಾನಿಸಿದ್ದಾರೆ.

**1** ರಾಜೀನಾಮೆ ಘೋಷಿಸಿದ ಸಚಿವ ರಾಮಲಿಂಗಾ ರೆಡ್ಡಿ

**2** ರಾಜೀನಾಮೆ ಪತ್ರವನ್ನು ಸಿಎಂ ಡಿಕೆ ಶಿವಕುಮಾರ್‌ಗೆ ರವಾನೆ

**3** ಡಿಕೆ ಶಿವಕುಮಾರ್ ಸರಕಾರದ ಮೊದಲ ವಿಕೆಟ್ ಪತನ,

**4** ಮಂತ್ರಿಯಾದ 42 ಗಂಟೆಗಳಲ್ಲಿ ರಾಮಲಿಂಗಾ ರೆಡ್ಡಿ ರಾಜೀನಾಮೆ

**ಆರಂಭದಲ್ಲೇ ಸಿಎಂ ಡಿಕೆಶಿಗೆ ಬಿಕ್ಕಟ್ಟು**

• ಉದಯವಾಹಿನಿ, ಬೆಂಗಳೂರು

ಬೆಂಗಳೂರು ನಗರಾಭಿವೃದ್ಧಿ ಖಾತೆ ತಪ್ಪಿದ್ದಕ್ಕೆ ಅಸಮಾಧಾನಗೊಂಡಿರುವ ಸಚಿವ ರಾಮಲಿಂಗಾ ರೆಡ್ಡಿ ರಾಜೀನಾಮೆ ಪತ್ರವನ್ನು ಸಿಎಂ ಡಿಕೆಶಿವಕುಮಾರ್‌ಗೆ ರವಾನಿಸಿದ್ದಾರೆ. ಆ ಮೂಲಕ ಸಿಎಂ ಡಿಕೆಶಿ ನೂತನ ಸರ್ಕಾರದಲ್ಲಿ ಬಿಕ್ಕಟ್ಟು ಉಂಟಾಗಿದೆ. ಈ ಸಂಬಂಧ ತಮ್ಮ ಕೋರಮಂಗಲ ನಿವಾಸದಲ್ಲಿಂದು ಸುದ್ದಿಗೋಷ್ಠಿ ನಡೆಸಿದ ಅವರು, ಈಗಿನ ಸಿಎಂ ಡಿಕೆ ಶಿವಕುಮಾರ್, ಡಿಕೆ ಸುರೇಶ್ ಅವರು 2023ರಲ್ಲಿ ನಮ್ಮ ಮನೆಗೆ ಬಂದಿದ್ರು. ಮುಂದೆ ನಾನೇ ಸಿಎಂ ಆಗುತ್ತೇನೆ. ನಿಮಗೆ ಬೆಂಗಳೂರು ನಗರಾಭಿವೃದ್ಧಿ ಕೊಡ್ತೇನೆ ಎಂದಿದ್ರು. ಪ್ರಮಾಣ ವಚನಕ್ಕೂ ಮುನ್ನ ಅವರನ್ನು ಭೇಟಿಯಾದಾಗಲೂ ಕೂಡಾ ಬೆಂಗಳೂರು ನಗರಾಭಿವೃದ್ಧಿ ನಿಮಗೆ ಕೊಡ್ತೇನೆ ಅಂದಿದ್ರು. ಆದರೀಗ ಜಲಸಂಪನ್ಮೂಲ ಖಾತೆ ಕೊಟ್ಟಿದ್ದಾರೆ. ನಮ್ಮ ಆತ್ಮಸಾಕ್ಷಿಯಾಗಿ ಕೆಲಸ ಮಾಡಲು ಆಗಲ್ಲ. ಹೀಗಾಗಿ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡುತ್ತಿದ್ದೇನೆ ಎಂದರು.

ನಾನು 53 ವರ್ಷಗಳಿಂದ ಕಾಂಗ್ರೆಸ್ ಪಕ್ಷದಲ್ಲಿ ಕೆಲಸ ಮಾಡಿದ್ದೇನೆ. ಕಾಂಗ್ರೆಸ್ ಪಕ್ಷ ಸಾಕಷ್ಟು ಅವಕಾಶ ನೀಡಿದೆ. 9 ಬಾರಿ ಶಾಸಕನಾಗಲು ಅವಕಾಶ ನೀಡಿದೆ. ವೀರಪ್ಪ ಮೊಯ್ಲಿ ಅವರೇ ಕರೆದು ನನಗೆ ಟಿಕೆಟ್ ನೀಡಿದ್ದರು. ವೀರಪ್ಪ ಮೊಯ್ಲಿ, ಎಸ್.ಎಂ.ಕೃಷ್ಣ, ಧರಂಸಿಂಗ್, ಸಿದ್ದರಾಮಯ್ಯ ಸರ್ಕಾರಗಳಲ್ಲಿ ಸಚಿವನಾಗಿರುವೆ. ನಾನು ಯಾರಲ್ಲೂ ಸಚಿವ ಸ್ಥಾನ ಕೇಳಿರಲಿಲ್ಲ ಎಂದು ಹಳೆಯ ಘಟನೆಗಳನ್ನು ಸ್ಮರಿಸಿದರು. 2023ರಲ್ಲಿ ಸಿದ್ದರಾಮಯ್ಯ ಅವರು ಕಳೆದ ಬಾರಿ ಸಚಿವ ಸ್ಥಾನ ನೀಡಿದ್ದರು. ಆವತ್ತು ಬೈರತಿ ಸುರೇಶ್ ನನಗೆ ಕರೆ ಮಾಡಿ ಕರೆದು ಸಿದ್ದರಾಮಯ್ಯ ನಿಮ್ಮ ಜೊತೆ ಮಾತನಾಡಬೇಕು ಎಂದು ಕರೆಸಿ ಸಭೆ ಮಾಡಿದ್ದರು. ನಿಮಗೆ ಬೆಂಗಳೂರು ನಗರಾಭಿವೃದ್ಧಿ ಖಾತೆ ನೀಡ್ತೇವೆ ಎಂದು ಹೇಳಿದ್ದರು.

ನಾನೇನು ಆ ಖಾತೆಯನ್ನು ಆವತ್ತು ಕೇಳಿರಲಿಲ್ಲ. ಆದರೆ, ಬಳಿಕ ಖಾತೆ ಹಂಚಿಕೆ ವೇಳೆ ಸಾರಿಗೆ ಇಲಾಖೆ ಕೊಟ್ಟಿದ್ರು. ಆಗ ಮತ್ತೆ ಬೈರತಿ ಸುರೇಶ್ ಕರೆ ಮಾಡಿ ಸ್ವಲ್ಪ ಬದಲಾವಣೆ ಆಯಿತು ಎಂದಿದ್ರು ಎಂದು ವಿವರಿಸಿದ್ದಾರೆ. ನಾನು ಶಾಸಕನಾಗಿ ಮುಂದುವರೆಯುತ್ತೇನೆ. ಕಾಂಗ್ರೆಸ್ ಪಕ್ಷದಲ್ಲೇ ಇರುತ್ತೇನೆ. ಕೈಯಲ್ಲಿ ಹೋಗಿ ರಾಜೀನಾಮೆ ಕೊಟ್ಟು ಬರಲು ನನಗೆ ಇಷ್ಟ ಇಲ್ಲ. ಸಿಎಂ ಕಾರ್ಯದರ್ಶಿ ತುಷಾರ್ ಗಿರಿನಾಥ್‌ಗೆ ನಮ್ಮ ಕಚೇರಿ ಸಿಬ್ಬಂದಿ ರಾಜೀನಾಮೆ ಪತ್ರ ಕೊಟ್ಟು ಬರುತ್ತಾರೆ. ನಾನು ಖಾತೆಗಾಗಿ ರಾಜೀನಾಮೆ ಕೊಡುತ್ತಿಲ್ಲ. ಯಾಕೆ ರಾಜೀನಾಮೆ ಕೊಡುತ್ತಿದ್ದೇನೆ ಅಂತಾ ಮಾಧ್ಯಮದ ಮುಂದೆ ಬಂದು ಹೇಳುತ್ತಿರುವೆ. ಎಸ್.ಎಂ ಕೃಷ್ಣ ಅವರು ತಮ್ಮ ಸಂಪುಟದಲ್ಲಿ ಒಂದೇ ವರ್ಷ ಬೆಂಗಳೂರು ನಗರಾಭಿವೃದ್ಧಿ ಖಾತೆ ನೀಡಿದ್ದರು. ನಾನು ಎಲ್ಲಾ ಇಲಾಖೆಗಳಲ್ಲಿ ಚೆನ್ನಾಗಿ ಕೆಲಸ ಮಾಡಿದ್ದೇನೆ ಎಂದರು.


**ರಾಜೀನಾಮೆ ಪತ್ರದಲ್ಲೇನಿದೆ?:** ನನಗೆ ತಮ್ಮ ಸಚಿವ ಸಂಪುಟದಲ್ಲಿ ಸಚಿವ ಸ್ಥಾನ ನೀಡಿದ್ದಕ್ಕೆ ತಮಗೂ ಹಾಗೂ ಕಾಂಗ್ರೆಸ್ ಪಕ್ಷಕ್ಕೆ ನನ್ನ ಧನ್ಯವಾದಗಳು. ನಾನು ನನ್ನ ಆತ್ಮಸಾಕ್ಷಿ ವಿರುದ್ಧವಾಗಿ ಕಾರ್ಯನಿರ್ವಹಿಸಲು ಸಾಧ್ಯವಾಗದ ಕಾರಣ ಈ ಸಚಿವ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸುತ್ತಿದ್ದೇನೆ. ನನ್ನ ರಾಜೀನಾಮೆಯನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ. ನಾನು ಶಾಸಕನಾಗಿ ಹಾಗೂ ಕಾಂಗ್ರೆಸ್ ಪಕ್ಷದ ಕಾರ್ಯಕರ್ತನಾಗಿ ಮುಂದುವರಿಯುತ್ತೇನೆ ಎಂದು ಪತ್ರದಲ್ಲಿ ತಿಳಿಸಿದ್ದಾರೆ.

**ಮುಖಂಡರಿಂದ ಮನವೊಲಿಸಲು ಯತ್ನ:**

ಇತ್ತ ರಾಮಲಿಂಗಾ ರೆಡ್ಡಿ ರಾಜೀನಾಮೆ ನೀಡುತ್ತಿರುವ ಸುದ್ದಿ ಕೇಳಿ ಕಾಂಗ್ರೆಸ್ ಮುಖಂಡರಾದ ಮನೋಹರ್ ಕೋರಮಂಗಲ ನಿವಾಸಕ್ಕೆ ಬಂದು ಮನವೊಲಿಸಲು ಯತ್ನಿಸಿದರು. ರಾಜೀನಾಮೆ ನೀಡಬೇಡಿ ಸರ್... ಕೆಪಿಸಿಸಿ ಅಧ್ಯಕ್ಷರೊಂದಿಗೆ ಮಾತನಾಡುತ್ತೇನೆ.


ನೀವು ನಮಗೆ ಬೇಕು. ದಯವಿಟ್ಟು ರಾಜೀನಾಮೆ ನೀಡಬೇಡಿ ಎಂದು ಮನವಿ ಮಾಡಿದರು.

ಈ ವೇಳೆ ರಾಮಲಿಂಗಾ ರೆಡ್ಡಿ, ನಾನು ಯಾರ ಮಾತು ಕೇಳುವುದಿಲ್ಲ. ಕೋಪ ಬರಿಸಬೇಡಿ ಎಂದು ಖಡಾಖಂಡಿತವಾಗಿ ಪ್ರತಿಕ್ರಿಯಿಸಿದರು. ಕಾಂಗ್ರೆಸ್ ಮುಖಂಡರು ಎಷ್ಟೇ ಮನವಿ ಮಾಡಿದರೂ ಅದಕ್ಕೆ ರಾಮಲಿಂಗಾ ರೆಡ್ಡಿ ಕಿವಿ ಕೊಡಲಿಲ್ಲ.




**ಸಚಿವರ ಮನವೊಲಿಸಲು ಮುಂದಾದ ಸಿಎಂ**

### ಬೆಂಗಳೂರಿಗೆ ಆಗಮಿಸಿರುವ ರಾಹುಲ್



ಲೋಕಸಭಾ ವಿಪಕ್ಷ ನಾಯಕ ರಾಹುಲ್ ಗಾಂಧಿ ಅವರು ಶುಕ್ರವಾರ ಬೆಂಗಳೂರಿಗೆ ಆಗಮಿಸಿದ್ದು, ಪಕ್ಷದಲ್ಲಿ ಒಂದೆಡೆ ಹಿರಿಯ ಸಚಿವರ ರಾಜೀನಾಮೆ, ಖಾತೆ ಬದಲಾವಣೆಗೆ ಪಟ್ಟು ದೊಡ್ಡ ತಲೆನೋವಾಗಿ ಪರಿಣಮಿಸಿದ್ದು, ಮುಂದಿನ ಕಂತಿನಲ್ಲಿ ಸಂಪುಟಕ್ಕೆ ಸೇರಲು ಮುಂದಾಗಿರುವ ಮಾಜಿ ಸಚಿವರು ಮತ್ತು ಶಾಸಕರ ಪಟ್ಟಿಯನ್ನು ಅಂತಿಮಗೊಳಿಸುವುದು ದೊಡ್ಡ ಸವಾಲಾಗಿದೆ.

"ಡಿಕೆಶಿ ಸಿಎಂ, ಸಿದ್ದರಾಮಯ್ಯ ಅವರ ಸಚಿವ ಸಂಪುಟ. ಮೊದಲ ವಿಕೆಟ್ ಪತನ ಆಗಿದೆ. ರಾಮಲಿಂಗಾರೆಡ್ಡಿ ಅವರು ಹಿರಿಯರು ಅವರ ಬಗ್ಗೆ ಮಾತಾಡಲ್ಲ. ವಾಸ್ತವ ಅಂದರೆ ರಾಜ್ಯದ ಬಗ್ಗೆ ಕಾಂಗ್ರೆಸ್‌ಗೆ ಕಾಳಜಿಯಿಲ್ಲ. ಮೂರು ವರ್ಷದಿಂದ ಹಗ್ಗಜಗ್ಗಾಟ ನಡೀತಿದೆ. ಈಗಲೂ ಮುಂದುವರಿದಿದೆ. ಯಾವ ಖಾತೆ, ಯಾವ ಸ್ಥಾನಮಾನ ಅನ್ನೋ ಕಿತ್ತಾಟದಲ್ಲಿ ರಾಮಲಿಂಗಾರೆಡ್ಡಿ ರಾಜೀನಾಮೆ ಕೊಟ್ಟಿದ್ದಾರೆ. ಸರ್ಕಾರದ ರೀತಿ ನೋಡಿದ್ರೆ ಮಧ್ಯಂತರ ಚುನಾವಣೆ ಯಾವಾಗ ಬೇಕಾದರೂ ಬರಬಹುದು. ಮಧ್ಯಂತರ ಚುನಾವಣೆ ಯಾವಾಗ ಬಂದರೂ ನಾವು ಸಿದ್ಧ ಇದ್ದೇವೆ. ವಿಜಯೇಂದ್ರ, ಬಿಜೆಪಿ ರಾಜ್ಯಾಧ್ಯಕ್ಷ



"ಕಾಂಗ್ರೆಸ್ ಒಡೆದ ಮನೆ, ಮುಂದೆ ಸರ್ಕಾರದಲ್ಲಿ ಜ್ವಾಲಾಮುಖಿ ಏಳುತ್ತೆ. ಸಿಎಂ ಡಿಕೆಶಿ ಅವರ ಹಳೇ ಸಿನಿಮಾ ಹೊಸ ಪೋಸ್ಟರ್ ರಿಲೀಸ್ ಆಗೋ ಮುನ್ನದಂಗೆ ಶುರು. ಪ್ರಮಾಣ ವಚನ ಆದ ಮೂರೇ ದಿನದಲ್ಲಿ ಮೂರು ಪಾಡಾಗಿದೆ. ಸಿಎಂ ಆಗೋವರೆಗೂ ಸುಮ್ಮನಿದ್ದು ಈಗ ರಾಮಲಿಂಗಾರೆಡ್ಡಿ ಅವರಿಗೆ ಡಿಕೆಶಿ ಕೈಕೊಟ್ಟಿದ್ದಾರೆ. ರಾಮಲಿಂಗಾರೆಡ್ಡಿ ಹಿರಿಯರು, ಅವರು ಬೆಂಗಳೂರು ಖಾತೆ ಕೇಳೋದ್ರಲ್ಲಿ ತಪ್ಪಿಲ್ಲ ಎಂದರು. ಮೂರೇ ದಿನದಲ್ಲಿ ಡಿಕೆಶಿ ಮಾತು ತಪ್ಪಿದ್ದಾರೆ. ಇನ್ಯಾರ್ಯಾರಿಗೆ ಏನೇನು ಮಾತು ಕೊಟ್ಟು ತಪ್ಪಿದ್ದಾರೋ?. ಸರ್ಕಾರದಲ್ಲಿ ವಿಪಕ್ಷಗಳಿಗೆ ಉತ್ತರ ಕೊಡಲು ಯಾರೂ ಗತಿ ಇಲ್ಲ. ವಿಪಕ್ಷಗಳ ಜತೆ ಚರ್ಚೆ ಮಾಡಲು ಯಾರೂ ಇಲ್ಲ. ಡಿಕೆಶಿಗೆ ಸರ್ಕಾರದ ಮೇಲೆ ಹಿಡಿತ ಹೋಗಿದೆ. ರೌಡಿ ನಿಗ್ರಹ ದಳ ಮಾಡ್ತಾರಂತೆ. ಇದನ್ನು ಕೇಳಿ ರಾಜ್ಯಾದ್ಯಂತ ಜನ ನಗ್ತಿದ್ದಾರೆ. ಅದೂ ಯಾರಿಂದ, ಡಿಕೆಶಿ, ಹರಿಪ್ರಸಾದ್ ಅವರಿಂದ ಅಂತೆ. ಇದೆಲ್ಲ ಸಾಕಾರ ಆಗಲ್ಲ. ರಾಹುಲ್ ಗಾಂಧಿ ವಸೂಲಿಗೆ ಬಂದಿದ್ದಾರೆ ಅಷ್ಟೇ. ಅವರು ವಸೂಲಿ ಮಾಡಿ ಹೋಗ್ತಾರೆ ಎಂದು ದೂರಿದರು. ಆರ್.ಅಶೋಕ್ ವಿಪಕ್ಷ ನಾಯಕ



### ಕಾಂಗ್ರೆಸ್ ಸರ್ಕಾರವೇ ಅಲ್ಲೋಲ ಕಲ್ಲೋಲ

- ಬೆಂಗಳೂರು ನಗರಾಭಿವೃದ್ಧಿ ಖಾತೆ ನೀಡದ್ದಕ್ಕೆ ಮುನಿಸು:
- ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ ರಾಮಲಿಂಗಾ ರೆಡ್ಡಿ
- ಖಾತೆ ಕ್ಯಾತೆ: ಡಿಕೆಶಿ ಸರ್ಕಾರದ ವಿರುದ್ಧ ರಾಜ್ಯ ಬಿಜೆಪಿ ನಾಯಕರ ವಾಗ್ದಾಳಿ

ರಾಜ್ಯ ಕಾಂಗ್ರೆಸ್ ಸರ್ಕಾರದಲ್ಲಿ 'ಖಾತೆ ಕ್ಯಾತೆ' ಹೆಚ್ಚಾಗುತ್ತಿದ್ದು, ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಹಾಗೂ ವರಿಷ್ಠರಿಗೆ ತಲೆನೋವಾಗಿ ಪರಿಣಮಿಸುತ್ತಿದೆ. ಬೆಂಗಳೂರು ಅಭಿವೃದ್ಧಿ ಖಾತೆ ಮೇಲೆ ಕಳೆದ ಎರಡು ವರ್ಷಗಳಿಂದ ಕಣ್ಣಿಟ್ಟಿದ್ದ ರಾಮಲಿಂಗಾರೆಡ್ಡಿ, ಇದೀಗ ಆ ಖಾತೆ ದೊರೆಯದೆ ಅಸಮಾಧಾನಗೊಂಡು ಸಚಿವ ಖಾತೆಗೆ ರಾಜೀನಾಮೆ ನೀಡಿದ್ದಾರೆ. ಅವರ ಬೆಂಬಲಿಗರು ಕೂಡಾ ಸಾಮೂಹಿಕವಾಗಿ ರಾಜೀನಾಮೆ ನೀಡುವ ಮೂಲಕ ಹೈಕಮಾಂಡ್ ಮೇಲೆ ಒತ್ತಡ ಹಾಕುತ್ತಿದ್ದಾರೆ. ರಾಮಲಿಂಗಾರೆಡ್ಡಿ ಬಳಿಕ ಸಚಿವ ಮುನಿಯಪ್ಪ ಕೂಡಾ ರಾಜೀನಾಮೆಗೆ ಚಿಂತನೆ ನಡೆಸಿದ್ದಾರೆ ಎನ್ನಲಾಗುತ್ತಿದೆ. ಈ ಹಿಂದೆ ಸಿದ್ದರಾಮಯ್ಯ ಸಂಪುಟದಲ್ಲಿ ಆಹಾರ ಮತ್ತು ಗ್ರಾಹಕ ವ್ಯವಹಾರಗಳ ಖಾತೆ ನಿರ್ವಹಿಸಿದ್ದ ಕೆ. ಹೆಚ್. ಮುನಿಯಪ್ಪ ಅವರಿಗೆ ಈ ಬಾರಿಯೂ ಅದೇ ಖಾತೆ ನೀಡಲಾಗಿದೆ. ಆದರೆ, ಈ ಖಾತೆ ಬೇಡ ಎನ್ನುತ್ತಿರುವ ಮುನಿಯಪ್ಪ, ಇನ್ನೂ ಯಾರಿಗೂ ಹಂಚಿಕೆಯಾಗದ ಸಮಾಜ ಕಲ್ಯಾಣ ಅಥವಾ ಕೃಷಿ ಖಾತೆ ಮೇಲೆ ಒತ್ತಡ ಹಾಕುತ್ತಿದ್ದಾರೆ. ಖಾತೆ ಹಂಚಿಕೆಯಲ್ಲಿ ಹಿರಿತನ ಕಾಪಾಡಿಲ್ಲ.

## ಸರ್ಕಾರ ವಿರುದ್ಧ ಛಲವಾದಿ ನಾರಾಯಣಸ್ವಾಮಿ ವಾಗ್ದಾಳಿ



• ಉದಯವಾಹಿನಿ,ಬೆಂಗಳೂರು

ಭಾರತ್ ಜೋಡೋ ಯುವ ಸಂಘಕ್ಕೆ ಸರ್ಕಾರದಿಂದ ಹಣ ಕೊಡಬಾರದು ಎಂದು ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಸರ್ಕಾರಕ್ಕೆ ಒತ್ತಾಯಿಸಿದ್ದಾರೆ. ವಿಧಾನಸೌಧದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಭಾರತ್ ಜೋಡೋ ಯುವ ಸಂಘಕ್ಕೆ ಹಣ ಎಲ್ಲಿಂದ ಕೊಡ್ತೀರಾ? ಸರ್ಕಾರ ಈ ಸಂಘಕ್ಕೆ ಹಣ ಕೊಡಬಾರದು. ನಿಮ್ಮ ಪಕ್ಷದಿಂದ ಬೇಕಾದ್ರೆ ಹಣ ನೀಡಲಿ. ಸರ್ಕಾರದ ಬೊಕ್ಕಸದಿಂದ ಹಣ ಕೊಡಬಾರದು. ಸಮಾಜ ಕಲ್ಯಾಣ ಇಲಾಖೆಗೆ ಪೈಪೋಟಿ ಶುರುವಾಗಿದೆ. ಸಮಾಜ ಕಲ್ಯಾಣ ಇಲಾಖೆಯನ್ನ ಪರಿಶಿಷ್ಟ ಜಾತಿಯವರಿಗೆ ಕೊಡಬಾರದು. ಬೇರೆಯವರಿಗೆ ಕೊಡಿ. ಪರಿಶಿಷ್ಟ ಜಾತಿ ಅವರಿಗೆ ಕೊಟ್ಟರೆ ಅವರ ಸಮುದಾಯ ಪರ ಲಾಬಿ ಮಾಡ್ತಾರೆ. ಹೀಗಾಗಿ, ಬೇರೆ ಸಮುದಾಯದವರಿಗೆ ಕೊಡಬೇಕು ಎಂದು ಆಗ್ರಹಿಸಿದರು.ಗೃಹಲಕ್ಷ್ಮೀ ಹಣ 5,000 ಕೋಟಿ ಇನ್ನೂ ಬಾಕಿ ಇದೆ. ಜನ ಇನ್ಮುಂದೆಯೂ ಸರ್ಕಾರದ ಘೋಷಣೆಗಳಿಗೆ ಸೊಪ್ಪು ಹಾಕಲ್ಲ. ಈ ಸರ್ಕಾರ ಪ್ರಥಮದಲ್ಲೇ ಮುಗ್ಗರಿಸಿ ಬಿಟ್ಟಿದೆ. ಸಿದ್ದರಾಮಯ್ಯ ಮೊದಲ ಬಾರಿಗೆ ಮಗನನ್ನು ದೆಹಲಿಗೆ ಕರೆದುಕೊಂಡು ಹೋಗಿ ರಾಹುಲ್ ಗಾಂಧಿಗೆ ಪರಿಚಯಿಸಿ ಮಂತ್ರಿ ಮಾಡಿದ್ದಾರೆ. ಇದು ಅನುಕಂಪದ ಆಧಾರದಲ್ಲಿ ಸರ್ಕಾರಿ ನೌಕರಿ ಸಿಕ್ಕಿದ ಹಾಗೆ, ಅನುಕಂಪದಲ್ಲಿ ಮಂತ್ರಿ ಮಾಡಿದ್ದಾರೆ. ಅನುಕಂಪದ ನಾಯಕತ್ವದ ಆಯ್ಕೆಯಾಗಿ ರಾಹುಲ್ ಅನನುಭವ ದೇಶದ ಮುಂದೆ ಪ್ರದರ್ಶಿಸಿದಂತೆ ಇದು ಕೂಡಾ ಆಗುತ್ತದೆ ಎಂದು ವಾಗ್ದಾಳಿ ನಡೆಸಿದರು.

## ಬಿಎಂಟಿಸಿ ಪ್ರಯಾಣಿಕರಿಗೆ ಮೆಟ್ರೋ ಮಾದರಿಯಲ್ಲಿ ಆನ್‌ಲೈನ್ ಟಿಕೆಟ್ ವ್ಯವಸ್ಥೆ ಜಾರಿಗೆ ಪ್ಲ್ಯಾನ್

• ಉದಯವಾಹಿನಿ, ಬೆಂಗಳೂರು

**ಮಹಿಳೆಯರು ಉಚಿತವಾಗಿ ಪ್ರಯಾಣ**

ಶಕ್ತಿ ಯೋಜನೆಯ ಅಭೂತಪೂರ್ವ ಯಶಸ್ಸಿನ ಬೆನ್ನಲ್ಲೇ ಬಿಎಂಟಿಸಿ ಬಸ್‌ಗಳಲ್ಲಿ ಟಿಕೆಟ್ ಪಡೆಯಲು ಪಡುತ್ತಿರುವ ಪ್ರಯಾಣಿಕರ ಕಷ್ಟಕ್ಕೆ ಮುಕ್ತಿ ಹಾಡಲು ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯು ನಮ್ಮ ಮೆಟ್ರೋ ಮಾದರಿಯಲ್ಲೇ ಆನ್‌ಲೈನ್ ಕ್ಯೂಆರ್ ಟಿಕೆಟ್ ಖರೀದಿಸುವ ಹೊಸ ಪ್ಲ್ಯಾನ್ ಜಾರಿಗೆ ಮುಂದಾಗಿದೆ. ಇದಕ್ಕೆ ಪ್ರಯಾಣಿಕರು ಸಂತಸ ವ್ಯಕ್ತಪಡಿಸುತ್ತಿದ್ದಾರೆ. ಸುಮಾರು 20 ಲಕ್ಷದಷ್ಟು ಮಹಿಳೆಯರು ಉಚಿತವಾಗಿ ಪ್ರಯಾಣ ಮಾಡುತ್ತಿದ್ದರೆ, ಉಳಿದ ಪುರುಷ ಪ್ರಯಾಣಿಕರು ಹಣವನ್ನು ಕೊಟ್ಟು ಪ್ರಯಾಣ ಮಾಡುತ್ತಿದ್ದಾರೆ.






**ಈ ದಿನದ ದರ** ಪೆಟ್ರೋಲ್: 110.97 ₹/L ಡೀಸೆಲ್ : 98.87₹/L ಬಂಗಾರ: ₹ 15,573/Gram 24ct ₹14,275 /Gram 22ct ಬೆಳ್ಳಿ: ₹275.00/Gram

# ಬೆಂಗಳೂರು ನಗರವನ್ನು ಮತ್ತಷ್ಟು ಬಲಪಡಿಸುವ ಅಗತ್ಯವಿದೆ: ಪರೋಕ್ಷವಾಗಿ ಖಾತೆ ಬಿಟ್ಟುಕೊಡಲ್ಲ ಎಂದ ಕೃಷ್ಣಬೈರೇಗೌಡ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಸಚಿವ ಸಂಪುಟ ಪುನರ್‌ರಚನೆ ಬಳಿಕ ಬೆಂಗಳೂರು ಅಭಿವೃದ್ಧಿ ಖಾತೆ ಪಡೆದಿರುವ ಸಚಿವ ಕೃಷ್ಣ ಬೈರೇಗೌಡ ಈ ಜವಾಬ್ದಾರಿ ಸುಲಭವಾಗಿಲ್ಲ ಎಂದು ಹೇಳಿದ್ದಾರೆ. ಬೆಂಗಳೂರಿನ ಜನರ ಜೀವನಮಟ್ಟ ಸುಧಾರಿಸುವುದೇ ತಮ್ಮ ಮೊದಲ ಗುರಿ ಎಂದು ತಿಳಿಸಿದ್ದಾರೆ. ಖಾತೆ ಹಂಚಿಕೆ ಕುರಿತು ಪ್ರತಿಕ್ರಿಯಿಸಿದ ಅವರು, ತಾವು ಕಂದಾಯ ಇಲಾಖೆಯಲ್ಲಿ ಆರಂಭಿಸಿರುವ ಕೆಲಸಗಳನ್ನು ಪೂರ್ಣಗೊಳಿಸಲು ಅವಕಾಶ ನೀಡುವಂತೆ ಮನವಿ ಮಾಡಿದ್ದೆ. ಆದರೆ ಪಕ್ಷದ ನಾಯಕತ್ವ ಬೆಂಗಳೂರು ಅಭಿವೃದ್ಧಿ ಖಾತೆ ನೀಡಿದೆ ಎಂದು ಹೇಳಿದರು. ಬೆಂಗಳೂರು ಅಭಿವೃದ್ಧಿ ಇಲಾಖೆ ದೊಡ್ಡ ಸವಾಲಿನ ಜವಾಬ್ದಾರಿ. ನಗರ ಹಲವು ಜಟಿಲ ಸಮಸ್ಯೆಗಳನ್ನು ಎದುರಿಸುತ್ತಿದೆ. ಎಲ್ಲಾ ಸಮಸ್ಯೆಗಳನ್ನು ಪರಿಹರಿಸುತ್ತೇವೆ ಎಂದು ಈಗಲೇ ಭರವಸೆ ನೀಡಲು ಸಾಧ್ಯವಿಲ್ಲ ಎಂದು ಅವರು ಸ್ಪಷ್ಟಪಡಿಸಿದರು. ಉಪ ಮುಖ್ಯಮಂತ್ರಿಯಾಗಿದ್ದಾಗ ಡಿ.ಕೆ.ಶಿವಕುಮಾರ್ ಅವರು ಬೆಂಗಳೂರು ಅಭಿವೃದ್ಧಿಗೆ ಹಲವು ಮಹತ್ವಾಕಾಂಕ್ಷಿ ಯೋಜನೆಗಳಿಗೆ ಅಡಿಪಾಯ ಹಾಕಿದ್ದಾರೆ. ಟನಲ್ ರಸ್ತೆ, ಎಲಿವೇಟೆಡ್ ಕಾರಿಡಾರ್ ಸೇರಿದಂತೆ ಹಲವು ಯೋಜನೆಗಳ ಕೆಲಸ ಆರಂಭಿಸಿದ್ದಾರೆ. ಕೆಲವೊಂದು ಕೆಲಸಗಳನ್ನು ಡಿ.ಕೆ. ಶಿವಕುಮಾರ್ ಅವರಿಂದ ಮಾತ್ರ ಮುನ್ನಡೆಸಲು ಸಾಧ್ಯವಾಗಿದೆ ಎಂದು ಕೃಷ್ಣ ಬೈರೇಗೌಡ ಮೆಚ್ಚುಗೆ ವ್ಯಕ್ತಪಡಿಸಿದರು. ಬೆಂಗಳೂರು ನಗರದ ಕಸ ನಿರ್ವಹಣೆ, ಟ್ರಾಫಿಕ್ ಸಮಸ್ಯೆ ಹಾಗೂ ಖಾತೆ ಸಮಸ್ಯೆಗಳಂತಹ ದಿನನಿತ್ಯದ ಸಮಸ್ಯೆಗಳ ಕಡೆ ಹೆಚ್ಚು ಗಮನ ಹರಿಸಲಾಗುವುದು ಎಂದು ಹೇಳಿದರು. ಬೆಂಗಳೂರು ಬಹಳಷ್ಟು ಹದಗೆಟ್ಟಿದೆ. ಎಲ್ಲವನ್ನೂ ಒಂದೇ ರಾತ್ರಿ ಸರಿಪಡಿಸಲು ಸಾಧ್ಯವಿಲ್ಲ. ಕೆಲವೊಂದು ಕಠಿಣ ನಿರ್ಧಾರಗಳನ್ನು ತೆಗೆದುಕೊಳ್ಳಬೇಕಾಗುತ್ತದೆ. ಜನರೂ ಸರ್ಕಾರಕ್ಕೆ ಸಹಕಾರ ನೀಡಬೇಕು ಎಂದು ಮನವಿ ಮಾಡಿದರು. ಬೆಂಗಳೂರು ರಾಜ್ಯದ ಆರ್ಥಿಕ ಶಕ್ತಿ ಕೇಂದ್ರ. ಚಿನ್ನದ ಮೊಟ್ಟೆ ಇಡುವ ಕೋಳಿಯಂತೆ ಈ ನಗರವನ್ನು ಮತ್ತಷ್ಟು ಬಲಪಡಿಸುವ ಅಗತ್ಯವಿದೆ.

ಅಭಿವೃದ್ಧಿ ಯೋಜನೆಗಳ ಜೊತೆಗೆ ಜನರ ದೈನಂದಿನ ಸಮಸ್ಯೆಗಳಿಗೂ ಪರಿಹಾರ ಕಂಡುಕೊಳ್ಳುವುದು ನಮ್ಮ ಗುರಿ ಎಂದು ಕೃಷ್ಣ ಬೈರೇಗೌಡ ಹೇಳಿದರು. ಇದೇ ವೇಳೆ ಬೆಂಗಳೂರು ಅಭಿವೃದ್ಧಿ ಇಲಾಖೆ ನೀಡದ ಕಾರಣ ಸಚಿವ ಸ್ಥಾನಕ್ಕೆ ರಾಮಲಿಂಗಾ ರೆಡ್ಡಿ ರಾಜೀನಾಮೆ ನೀಡಿರುವ ಬಗ್ಗೆ ಪ್ರಶ್ನಿಸಿದಾಗ ಕೃಷ್ಣ ಬೈರೇಗೌಡ ಪ್ರತಿಕ್ರಿಯೆ ನೀಡಲು ನಿರಾಕರಿಸಿದ್ದಾರೆ.

## ಕರ್ನಾಟಕದಿಂದ ನಾಮಪತ್ರ ಸಲ್ಲಿಸಿದ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಕರ್ನಾಟಕದಿಂದ ರಾಜ್ಯಸಭೆಗೆ ಎಐಸಿಸಿ ಮುಖ್ಯಸ್ಥ ಮಲ್ಲಿಕಾರ್ಜುನ ಖರ್ಗೆ ಸ್ಪರ್ಧಿಸಲಿದ್ದು, ಕರ್ನಾಟಕ ವಿಧಾನಸಭೆಯ ಕಾರ್ಯದರ್ಶಿಯಾಗಿರುವ ಚುನಾವಣಾಧಿಕಾರಿ ವಿಶಾಲಾಕ್ಷಿ ಅವರಿಗೆ ಶುಕ್ರವಾರ ನಾಮಪತ್ರ ಸಲ್ಲಿಸಿದ್ದಾರೆ. ಮಲ್ಲಿಕಾರ್ಜುನ ಖರ್ಗೆ ಅವರೊಂದಿಗೆ ಎಐಸಿಸಿ ಮಾಧ್ಯಮ ಘಟಕದ ಅಧ್ಯಕ್ಷ ಪವನ್ ಖೇರಾ, ಎಐಸಿಸಿ ಕಾರ್ಯದರ್ಶಿ ಮನ್ಸೂರ್ ಆಲಿ ಖಾನ್ ಕೂಡ ನಾಮಪತ್ರ ಸಲ್ಲಿಸಿದ್ದಾರೆ ಎನ್ನಲಾಗಿದೆ.

ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಕರ್ನಾಟಕದ ಮುಖ್ಯಮಂತ್ರಿ ಡಿಕೆ ಶಿವಕುಮಾರ್, ಮಾಜಿ ಸಿಎಂ ಸಿದ್ದರಾಮಯ್ಯ, ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿಗಳಾದ ರಣದೀಪ್ ಸಿಂಗ್ ಸುರ್ಜೇವಾಲ, ಕೆಸಿ ವೇಣುಗೋಪಾಲ್ ಮತ್ತು ಹಲವಾರು ಸಚಿವರು ಈ ವೇಳೆ ಇದ್ದರು.

ಖರ್ಗೆ ಅವರು ರಾಜ್ಯಸಭೆಯಲ್ಲಿ ವಿರೋಧ ಪಕ್ಷದ ನಾಯಕರಾಗಿದ್ದು, ಕರ್ನಾಟಕವನ್ನು ಪ್ರತಿನಿಧಿಸುತ್ತಿದ್ದಾರೆ. ಸಂಸತ್ತಿನ ಮೇಲ್ಮನೆಯಲ್ಲಿ ಅವರ ಅವಧಿ ಜೂನ್ 25 ರಂದು ಕೊನೆಗೊಳ್ಳಲಿದೆ.

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ , ಜೆಡಿಎಸ್ ವರಿಷ್ಠ ಎಚ್‌ಡಿ ದೇವೇಗೌಡ, ನಾರಾಯಣ ಕೊರಗಪ್ಪ, ಈರಣ್ಣ ಕಡಾಡಿ ಅವರ ಅವಧಿ ಮುಕ್ತಾಯವಾಗಲಿದ್ದು, ಕರ್ನಾಟಕದಿಂದ ಆಯ್ಕೆಯಾಗಬೇಕಾದ ರಾಜ್ಯಸಭೆಯ ಈ ನಾಲ್ಕು ಸ್ಥಾನಗಳು ಸೇರಿ ರಾಜ್ಯಸಭೆಯ ಒಟ್ಟು 24 ಸ್ಥಾನಗಳಿಗೆ ಇದೇ 18 ರಂದು ಚುನಾವಣೆ ನಡೆಯಲಿದೆ.

## ಪೊಲೀಸರ ತಲೆ ತಂಪಾಗಿಸಲು ಎಸಿ ಹೆಲ್ಮೆಟ್!



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ನಗರದಲ್ಲಿ ಹೆಚ್ಚುತ್ತಿರುವ ಉಷ್ಣಾಂಶದಲ್ಲಿ ಸುರಕ್ಷಿತವಾಗಿ ಕಾರ್ಯನಿರ್ವಹಿಸಲು ಅನುವಾಗುವಂತೆ ಸಂಚಾರ ಪೊಲೀಸರಿಗೆ ಹೀಟ್ ಹೆಲ್ತ್ ಪ್ರೋಟೋಕಾಲ್ ಯೋಜನೆಯಡಿ ಕೂಲಿಂಗ್ ಕಿಟ್ ನೀಡಲಾಗಿದೆ.

ಬೆಂಗಳೂರು ಉತ್ತರ ನಗರ ಪಾಲಿಕೆಯ ಆಯುಕ್ತ ಪೊಮ್ಮಲ ಸುನೀಲ್ ಕುಮಾರ್ ನೇತೃತ್ವದಲ್ಲಿ ನಡೆದ ಕಾರ್ಯಕ್ರಮದಲ್ಲಿ, ಸಂಚಾರ ಪೊಲೀಸ್ ಸಿಬ್ಬಂದಿಗೆ ಬಿಸಿಲಿನ ಪರಿಣಾಮಗಳು, ಆರೋಗ್ಯದ ಮೇಲೆ ಉಂಟಾಗುವ ತೊಂದರೆಗಳು ಹಾಗೂ ಅಗತ್ಯ ಮುನ್ನೆಚ್ಚರಿಕಾ ಕ್ರಮಗಳ ಕುರಿತು ಅರಿವು ಮೂಡಿಸಿ, ಆರೋಗ್ಯ ರಕ್ಷಣೆಗಾಗಿ ಎಸಿ ಹೆಲ್ಮೆಟ್‌ಗಳನ್ನು ವಿತರಿಸಲಾಯಿತು. ಸಿ40, ಸೆನ್ಸಿಂಗ್ ಲೋಕಲ್ ಹಾಗೂ ಹಸಿರು ದಳ ಸಂಸ್ಥೆಗಳ ಸಹಯೋಗದಲ್ಲಿ 'ಹೀಟ್‌ಹೆಲ್ತ್ ಪ್ರೋಟೋಕಾಲ್ ಯೋಜನೆ ಆರಂಭಿಸಲಾಗಿದೆ. ಹವಾಮಾನ ಬದಲಾವಣೆ ಹಾಗೂ ಹೆಚ್ಚುತ್ತಿರುವ ಉಷ್ಣಾಂಶದ ಪರಿಣಾಮವಾಗಿ ಹೊರಾಂಗಣದಲ್ಲಿ ಕಾರ್ಯನಿರ್ವಹಿಸುವ ಸಿಬ್ಬಂದಿಯ ಆರೋಗ್ಯ ರಕ್ಷಣೆ ಅಗತ್ಯವಾಗಿದೆ ಎಂದು ಆಯುಕ್ತರು ಹೇಳಿದರು. ಉತ್ತರ ನಗರ ಪಾಲಿಕೆಯ ಪೌರಕಾರ್ಮಿಕರಿಗೆ ಇದೇ ಮಾದರಿಯ ಆರೋಗ್ಯ ರಕ್ಷಣಾ ಕಿಟ್‌ಗಳನ್ನು ವಿತರಿಸಲಾಗಿದೆ. ಇದೀಗ ಸಂಚಾರ ಪೊಲೀಸ್ ಸಿಬ್ಬಂದಿಗೂ ವಿತರಿಸಲಾಗುತ್ತಿದೆ. ಕಿಟ್‌ಗಳ ಬಳಕೆ ಮತ್ತು ಪರಿಣಾಮಕಾರಿತ್ವದ ಕುರಿತು ಅಭಿಪ್ರಾಯಗಳನ್ನು ಸಂಗ್ರಹಿಸಿ, ಮುಂದಿನ ದಿನಗಳಲ್ಲಿ ಹೆಚ್ಚಿನ ಸಂಖ್ಯೆಯ ಸಿಬ್ಬಂದಿಗೆ ಈ ಸೌಲಭ್ಯವನ್ನು ವಿಸ್ತರಿಸುವ ಕುರಿತು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

## ಶಾಲಾ, ಕಾಲೇಜು ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್ ವಿತರಣೆಗೆ ಆದೇಶ ಹೊರಡಿಸಿದ ಸರ್ಕಾರ

• ಉದಯವಾಹಿನಿ, ಬೆಂಗಳೂರು

ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ಅಧಿಕಾರ ವಹಿಸಿಕೊಂಡ ನಂತರ ನಡೆದ ಮೊದಲ ಸಚಿವ ಸಂಪುಟ ಸಭೆಯಲ್ಲಿ ಘೋಷಿಸಲಾದ ಎಲ್ಲಾ ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್ ಯೋಜನೆಯನ್ನು ಜಾರಿಗೆ ತರುವಂತೆ ಕರ್ನಾಟಕ ಸರ್ಕಾರ ಶುಕ್ರವಾರ ಆದೇಶ ಹೊರಡಿಸಿದೆ. ಬುಧವಾರ ನಡೆದ ಸಚಿವ ಸಂಪುಟ ಸಭೆಯಲ್ಲಿ ರಾಜ್ಯದಾದ್ಯಂತ ಶಾಲಾ ಕಾಲೇಜುಗಳಲ್ಲಿ ಓದುತ್ತಿರುವ ಎಲ್ಲಾ ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್ ಸೌಲಭ್ಯವನ್ನು ವಿಸ್ತರಿಸಲು ನಿರ್ಧರಿಸಲಾಯಿತು. ರಾಜ್ಯದಲ್ಲಿ ಇನ್ಮುಂದೆ ವಿದ್ಯಾರ್ಥಿನಿಯರಂತೆ ಎಲ್ಲಾ ಶಾಲಾ, ಕಾಲೇಜು ವಿದ್ಯಾರ್ಥಿಗಳಿಗೂ ಕೂಡ ಉಚಿತ ಬಸ್ ಪಾಸ್ ನೀಡಲಾಗುವುದು. ಶೈಕ್ಷಣಿಕ ವರ್ಷ ಆರಂಭವಾಗಿದ್ದು, ಇದಕ್ಕಾಗಿ ಅರ್ಜಿ ವಿತರಣೆ ಬಗ್ಗೆ ಸಾರಿಗೆ ಇಲಾಖೆ ಶೀಘ್ರದಲ್ಲಿಯೇ ಕ್ರಮ ಕೈಗೊಳ್ಳಲಿದೆ ಎಂದು ಮುಖ್ಯಮಂತ್ರಿ ತಿಳಿಸಿದರು. ಎಲ್ಲಾ ಶಾಲಾ ಮತ್ತು ಕಾಲೇಜು ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್ ಸೌಲಭ್ಯ ವಿಸ್ತರಿಸಲು ಸರ್ಕಾರ ತಾತ್ವಿಕವಾಗಿ ಅನುಮೋದನೆ ನೀಡಿದೆ ಎಂದು ಹೇಳಿಕೆ ತಿಳಿಸಿದೆ.

## ಅಣ್ಣಮ್ಮ ದೇವಿ ದೇವಸ್ಥಾನಕ್ಕೆ ಡಿಕೆ.ಶಿವಕುಮಾರ್ ಭೇಟಿ, ಹರಕೆ ತೀರಿಸಿದ ಸಿಎಂ

• ಉದಯವಾಹಿನಿ, ಬೆಂಗಳೂರು

ಬೆಂಗಳೂರು ನಗರ ಕಾಯುವ ಅಧಿದೇವತೆ ಶ್ರೀ ಅಣ್ಣಮ್ಮ ದೇವಿ ದೇವಸ್ಥಾನಕ್ಕೆ ಮುಖ್ಯಮಂತ್ರಿ ಡಿಕೆ.ಶಿವಕುಮಾರ್ ಅವರು ಶುಕ್ರವಾರ ಭೇಟಿ ನೀಡಿದ್ದು, ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿದರು.

ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಿದ್ದ ಡಿಕೆ.ಶಿವಕುಮಾರ್ ಅವರು ಮೊದಲಿಗೆ ಅಜ್ಜಯ್ಯನ ದೇವಸ್ಥಾನಕ್ಕೆ ಭೇಟಿ ನೀಡಿ ಪೂಜಾಕೈಂಕರ್ಯ ನೆರವೇರಿಸಿದ್ದರು. ನಗರ ದೇವತೆ ಅಣ್ಣಮ್ಮ ದೇವಿ ದೇವಸ್ಥಾನಕ್ಕೆ ಭೇಟಿ ನೀಡಿದ ಅವರು, ವಿಶೇಷ ಪೂಜೆ ಸಲ್ಲಿಸಿ, ಹರಕೆ ತೀರಿಸಿದ್ದಾರೆ.

ರಾಜ್ಯದ ಮುಖ್ಯಮಂತ್ರಿಯಾದರೆ, ಅಣ್ಣಮ್ಮದೇವಿ ಸನ್ನಿಧಾನಕ್ಕೆ ಬಂದು ಹರಕೆ ತೀರಿಸುವುದಾಗಿ ಹರಕೆ ಹೊತ್ತಿದ್ದ ಡಿಕೆಶಿ ಇಂದು ಹರಕೆ ತೀರಿಸಿದ್ದಾರೆ. ಉಪ್ಪು, ಮೊಸರು ಹಾಕಿ, ಸುಃಖ, ಶಾಂತಿ, ನೆಮ್ಮದಿ ನೀಡುವಂತೆ ಪ್ರಾರ್ಥಿಸಿದ್ದಾರೆ. ತಾಯಿ ಅಣ್ಣಮಗೆ ನಮಿಸಿ ಆಶೀರ್ವಾದ ಪಡೆದುಕೊಂಡಿದ್ದಾರೆ. ಇದೇ ವೇಳೆ ಬಿಸಿಲು ಮಾರಮ್ಮನಿಗೂ ಉಪ್ಪು, ಮೊಸರು ಹಾಕಿ ನಮಿಸಿದ್ದಾರೆ.

# ಜನರ ಅಹವಾಲು, ಎನ್‌ಆರ್‌ಐಗಳಿಗೆ ಹೊಸ ಸಚಿವಾಲಯ ಸ್ಥಾಪನೆ

### ವಿಶೇಷ ಮತದಾರರ ಪರಿಶೀಲನೆ

• ಉದಯವಾಹಿನಿ, ಬೆಂಗಳೂರು

ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಜನರ ಸಮಸ್ಯೆಗಳ ಪರಿಹಾರಕ್ಕಾಗಿ ಹೊಸ ಸಚಿವಾಲಯ ಸ್ಥಾಪಿಸುವುದಾಗಿ ಘೋಷಿಸಿದ್ದಾರೆ. ಹೆಚ್ಚುವರಿ ಮುಖ್ಯ ಕಾರ್ಯದರ್ಶಿಗಳು, ಪ್ರಧಾನ ಕಾರ್ಯದರ್ಶಿಗಳು, ಎಡಿಜಿಪಿಗಳು ಹಾಗೂ ಹಿರಿಯ ಪೊಲೀಸ್ ಅಧಿಕಾರಿಗಳನ್ನು ಒಳಗೊಂಡ ಉನ್ನತ ಮಟ್ಟದ ಸಭೆಯ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜನರ ಅಹವಾಲುಗಳನ್ನು ಆಲಿಸಲು ಹೊಸ ಸಚಿವಾಲಯವನ್ನು ರಚಿಸಲಾಗುವುದು.

**1** ಎನ್‌ಆರ್‌ಐಗಳಿಗಾಗಿ ಪ್ರತ್ಯೇಕ ಸಚಿವಾಲಯ
**2** ಮತದಾರರ ಹಕ್ಕು ಕಳೆದುಕೊಳ್ಳದಂತೆ ಸೂಚನೆ
**3** ನಿಧಿಗಳ ಬಳಕೆ ಕುರಿತು ಮಾಹಿತಿ ಕೊರತೆ
**4** ಪಾರದರ್ಶಕ ಮತ್ತು ಭ್ರಷ್ಟಾಚಾರ ಮುಕ್ತ ಆಡಳಿತಕ್ಕೆ ಒತ್ತು

ಜನರ ಮನವಿ ಸ್ವೀಕರಿಸಿ, ಅವರ ಭಾವನೆಗಳು ಹಾಗೂ ಸಮಸ್ಯೆಗಳನ್ನು ಆಲಿಸಲು ಪ್ರತ್ಯೇಕ ಸಚಿವರನ್ನು ನೇಮಿಸಲಾಗುವುದು ಎಂದು ಹೇಳಿದರು. ಪ್ರತಿದಿನ 2-3 ಪ್ರತಿಭಟನೆಗಳು ನಡೆಯುತ್ತಿದ್ದು, ಅವುಗಳ ಬೇಡಿಕೆಗಳಲ್ಲಿ ಯಾವುದು ಕಾನೂನುಬದ್ಧ ಮತ್ತು ಯಾವುದು ಅಲ್ಲ ಎಂಬುದನ್ನು ಪರಿಶೀಲಿಸುವ ಅಗತ್ಯವಿದೆ ಎಂದು ಮುಖ್ಯಮಂತ್ರಿ ಹೇಳಿದರು.

ವಿದೇಶಗಳಲ್ಲಿ ನೆಲೆಸಿರುವ ಭಾರತೀಯರ ಸಮಸ್ಯೆಗಳನ್ನು ಪರಿಹರಿಸಲು ಪ್ರತ್ಯೇಕ ಸಚಿವಾಲಯವನ್ನೂ ಸ್ಥಾಪಿಸಲಾಗುವುದು ಎಂದು ಡಿ ಕೆ ಶಿವಕುಮಾರ್ ಘೋಷಿಸಿದರು. ವಿಶೇಷ ಮತದಾರರ ಪರಿಶೀಲನೆ ವೇಳೆ ಯಾವುದೇ ಅರ್ಹ ಮತದಾರರು ತಮ್ಮ ಮತದಾನದ ಹಕ್ಕು ಕಳೆದುಕೊಳ್ಳದಂತೆ ನೋಡಿಕೊಳ್ಳುವಂತೆ ಅಧಿಕಾರಿಗಳಿಗೆ ಮುಖ್ಯಮಂತ್ರಿ ಸೂಚನೆ ನೀಡಿದರು.

ಇತರ ರಾಜ್ಯಗಳಲ್ಲಿ ಲಕ್ಷಾಂತರ ಜನರು ತಮ್ಮ ಮತದಾನದ ಹಕ್ಕು ಕಳೆದುಕೊಂಡಿದ್ದಾರೆ. ಕರ್ನಾಟಕದಲ್ಲಿ ಅದು ನಡೆಯಬಾರದು. ಅಗತ್ಯವಿರುವ ಕಡೆಗಳಲ್ಲಿ ಸಹಾಯ ಕೇಂದ್ರಗಳನ್ನು ಸ್ಥಾಪಿಸಬೇಕು ಎಂದರು.

### ಸಿಎಂ ಡಿ ಕೆ ಶಿವಕುಮಾರ್ ಘೋಷಣೆ



### ಅಗತ್ಯ ಸಿದ್ಧತೆಗಳನ್ನು ಮಾಡುವಂತೆ ಸೂಚನೆ

**ಮುಖ್ಯಮಂತ್ರಿಯಿಂದ ಹಿಡಿದು ಉಪ ಮುಖ್ಯಮಂತ್ರಿ ಹಾಗೂ ಎಲ್ಲಾ ಮತದಾರರೂ ಗಣತಿ ನಮೂನೆಯನ್ನು ಭರ್ತಿ ಮಾಡಿ, ಸಹಿ ಮಾಡಿ ಅಗತ್ಯ ದಾಖಲೆಗಳನ್ನು ಸಲ್ಲಿಸಬೇಕು. ಇಲ್ಲವಾದರೆ ಅವರು ಮತದಾನದ ಹಕ್ಕು ಕಳೆದುಕೊಳ್ಳುವ ಸಾಧ್ಯತೆ ಇದೆ ಎಂಬ ಅರಿವು ಮೂಡಿಸಬೇಕು. ಇದಕ್ಕಾಗಿ ಅಗತ್ಯ ಸಿದ್ಧತೆಗಳನ್ನು ಮಾಡುವಂತೆ ನಾನು ಸೂಚಿಸಿದ್ದೇನೆ.**

ಅಧಿಕಾರಿಗಳಿಗೆ ಪಾರದರ್ಶಕತೆ ಮತ್ತು ಸಕಾರಾತ್ಮಕ ಮನೋಭಾವದಿಂದ ಕಾರ್ಯನಿರ್ವಹಿಸುವಂತೆ ಸೂಚಿಸಿದ ಮುಖ್ಯಮಂತ್ರಿ, ಶಾಸಕರು, ಸಚಿವರು ಅಥವಾ ತಮ್ಮ ಕಚೇರಿಯಿಂದಲೂ ಯಾವುದೇ ಒತ್ತಡ ಬಂದರೂ ಅದಕ್ಕೆ ಮಣಿಯಬಾರದು ಎಂದು ಹೇಳಿದರು.

ನಮ್ಮ ಸರ್ಕಾರ ಜಾತಿ, ಧರ್ಮ ಅಥವಾ ಇತರ ಯಾವುದೇ ಆಧಾರದ ಒತ್ತಡಗಳಿಗೆ ಮಣಿಯುವುದಿಲ್ಲ. ಆಡಳಿತ ಪಾರದರ್ಶಕ ಹಾಗೂ ಭ್ರಷ್ಟಾಚಾರ ಮುಕ್ತವಾಗಿರಬೇಕು. ಎಲ್ಲಾ ಇಲಾಖೆಗಳು 15 ದಿನಗಳೊಳಗೆ ಕಾರ್ಯಯೋಜನೆ ಸಿದ್ಧಪಡಿಸಬೇಕು ಎಂದು ಸೂಚಿಸಿದರು. ಕರ್ನಾಟಕದಲ್ಲಿ ವರ್ಷಕ್ಕೆ ಸುಮಾರು 8,000 ಕೋಟಿ ಯಿಂದ 8,500 ಕೋಟಿ ವರೆಗೆ ಲಭ್ಯವಾಗುವ ಸಾಂಸ್ಥಿಕ ಸಾಮಾಜಿಕ ಹೊಣೆಗಾರಿಕೆ ನಿಧಿಗಳನ್ನು ಹೇಗೆ ಬಳಸಲಾಗುತ್ತಿದೆ ಎಂಬುದರ ಕುರಿತು ಸರ್ಕಾರದ ಬಳಿ ಸಮಗ್ರ ಮಾಹಿತಿ ಇಲ್ಲ ಎಂದು ಮುಖ್ಯಮಂತ್ರಿ ಹೇಳಿದರು. ಈ ನಿಧಿಗಳನ್ನು ಹೇಗೆ ಬಳಸಲಾಗುತ್ತಿದೆ ಎಂಬ ಮಾಹಿತಿ ಸರ್ಕಾರಕ್ಕೆ ಅಗತ್ಯವಾಗಿದೆ.

### ರಾಜ್ಯದಲ್ಲಿ ರೌಡಿಸಂ ನಿಯಂತ್ರಣ

ಈಗಾಗಲೇ ಪ್ರತಿ ಮೂರು ಗ್ರಾಮ ಪಂಚಾಯಿತಿಗಳಿಗೆ ಒಂದು ಕೆಪಿಎಸ್ ಶಾಲೆ ನಿರ್ಮಿಸುವುದಾಗಿ ಘೋಷಿಸಿದ್ದೇವೆ. ಪ್ರಾಥಮಿಕ ಶಿಕ್ಷಣಕ್ಕೆ ಸರ್ಕಾರ ವಿಶೇಷ ಒತ್ತು ನೀಡುತ್ತಿದೆ. ಈ ನಿಟ್ಟಿನಲ್ಲಿ ಹೆಚ್ಚಿನ ಸಹಕಾರ ಕೋರಲು ಪತ್ರಗಳನ್ನು ಕಳುಹಿಸಲಾಗುವುದು ಎಂದರು.

ರಾಜ್ಯದಲ್ಲಿ ರೌಡಿಸಂ ನಿಯಂತ್ರಣಕ್ಕಾಗಿ ಪ್ರತಿಯೊಂದು ತಾಲ್ಲೂಕು ಮಟ್ಟದಲ್ಲೂ ವಿಶೇಷ ಪೊಲೀಸ್ ತಂಡಗಳನ್ನು ರಚಿಸಲಾಗುವುದು ಎಂದು ಡಿ ಕೆ ಶಿವಕುಮಾರ್ ಘೋಷಿಸಿದರು.

> **ಪ್ರತಿ ತಾಲ್ಲೂಕಿನಲ್ಲಿ ರೌಡಿಸಂ ತಡೆಗಟ್ಟಲು ವಿಶೇಷ ಪೊಲೀಸ್ ತಂಡಗಳು ಇರಬೇಕು. ಸಮಾಜಘಾತುಕ ಅಂಶಗಳು ಅಪರಾಧ ಚಟುವಟಿಕೆಗಳಲ್ಲಿ ತೊಡಗದಂತೆ ಈ ತಂಡಗಳು ನಿಗಾ ವಹಿಸಬೇಕು. ಹಳೆಯ ಮತ್ತು ಹೊಸ ರೌಡಿಗಳ ಚಲನವಲನಗಳ ಮೇಲೂ ಕಣ್ಣಿಡುವಂತೆ ಸೂಚಿಸಿದ್ದೇನೆ .**
> ಡಿ ಕೆ ಶಿವಕುಮಾರ್ ಮುಖ್ಯಮಂತ್ರಿ



## ಬಡಭೂಮಾಲೀಕರ ಹಿತಾಸಕ್ತಿಗೆ ಧಕ್ಕೆ ತಂದು ಸರ್ಕಾರ ಭೂಮಿ ಸ್ವಾಧೀನಪಡಿಸಿಕೊಳ್ಳಲು ಸಾಧ್ಯವಿಲ್ಲ: ಹೈಕೋರ್ಟ್

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ಲಾಭಗಳಿಸುವ ಖಾಸಗಿ ಸಂಸ್ಥೆಯ ವಿಸ್ತರಣೆಗೆ ಭೂಮಿ ಸ್ವಾಧೀನಪಡಿಸಿಕೊಳ್ಳುವುದು ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ ಕಾಯ್ದೆಯ ಉದ್ದೇಶಕ್ಕೆ ವಿರುದ್ಧವಾಗಿದ್ದು, ಅಲ್ಪ ಪರಿಹಾರ ನೀಡಿ ಜನರ ಭೂಮಿಯನ್ನು ಕಸಿದುಕೊಳ್ಳಲು ಅಧಿಕಾರಿಗಳು ಕಾನೂನಿನ ಮೇಲೆ ನಡೆಸಿದ ವಂಚನೆಯಾಗಿದೆ ಎಂದು ಹೈಕೋರ್ಟ್ ಛೀಮಾರಿ ಹಾಕಿದೆ. ಇಂತಹ ಅಧಿಕಾರ ಬಳಕೆ ಕಾನೂನುಬದ್ಧ ಹಾಗೂ ಸಂವಿಧಾನಾತ್ಮಕ ವಂಚನೆಯಾಗಿದ್ದು, ಈ ಹಿನ್ನೆಲೆಯಲ್ಲಿ ಬೆಂಗಳೂರು ಅಂತಾರಾಷ್ಟ್ರೀಯ ಪ್ರದರ್ಶನ ಕೇಂದ್ರ ದ ಪಾರ್ಕಿಂಗ್ ವಲಯಕ್ಕಾಗಿ ಸ್ವಾಧೀನಪಡಿಸಿಕೊಂಡಿದ್ದ ಭೂಮಿಯ ಸ್ವಾಧೀನ ಪ್ರಕ್ರಿಯೆಯನ್ನು ಹೈಕೋರ್ಟ್ ರದ್ದುಗೊಳಿಸಿದೆ. ನ್ಯಾಯಮೂರ್ತಿಗಳಾದ ಡಿ ಕೆ ಸಿಂಗ್ ಮತ್ತು ಟಿ ಎಂ ನಡಾಫ್ ಅವರಿದ್ದ ವಿಭಾಗೀಯ ಪೀಠ ಮಹತ್ವದ ತೀರ್ಪು ನೀಡಿದೆ. ಅಂತಾರಾಷ್ಟ್ರೀಯ ಪ್ರದರ್ಶನ ಕೇಂದ್ರದ ಪಾರ್ಕಿಂಗ್ ಪ್ರದೇಶಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾಗಿತ್ತು. ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳುವ ಸಂಪೂರ್ಣ ಪ್ರಕ್ರಿಯೆಯು ಸಂವಿಧಾನಾತ್ಮಕ ವ್ಯವಸ್ಥೆಗೆ ವಿರುದ್ಧವಾಗಿದೆ ಎಂದು ನ್ಯಾಯಪೀಠ ಹೇಳಿದೆ. 2013ರಲ್ಲಿ ಭೂಮಾಲೀಕರು ಸಲ್ಲಿಸಿದ್ದ ಮೇಲ್ಮನವಿಗಳನ್ನು ಅಂಗೀಕರಿಸಿದ ನ್ಯಾಯಪೀಠವು, ಮತ್ತು ಸಲ್ಲಿಸಿದ್ದ ಮೇಲ್ಮನವಿಗಳನ್ನು ವಜಾಗೊಳಿಸಿದೆ.

## ಇನ್ಮುಂದೆ ಎಲ್ಲಾ ಸರ್ಕಾರಿ ಅಧಿಕಾರಿಗಳು, ಸಿಬ್ಬಂದಿ 10 ಗಂಟೆಯೊಳಗೆ ಹಾಜರಾಗಬೇಕು: ಶಾಲಿನಿ ರಜನೀಶ್ ಆದೇಶ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ರಾಜ್ಯದ ಸರ್ಕಾರಿ ಕಚೇರಿಗಳಲ್ಲಿ ಪಾರದರ್ಶಕ ಆಡಳಿತ ತರುವ ಉದ್ದೇಶದೊಂದಿಗೆ ಬಯೋಮೆಟ್ರಿಕ್ ವ್ಯವಸ್ಥೆ ಬದಲಾಗಿ ಕೃತಕ ಬುದ್ಧಿಮತ್ತೆ ಮತ್ತು ಜಿಪಿಎಸ್ ಆಧರಿತ ಹಾಜರಾತಿಯನ್ನ ಕಡ್ಡಾಯಗೊಳಿಸಿದೆ. ಈ ಸಂಬಂಧ ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ಅವರು ಅಧಿಕೃತ ಆದೇಶ ಹೊರಡಿಸಿದ್ದಾರೆ. ಪ್ರತಿಯೊಬ್ಬ ಸರ್ಕಾರಿ ಅಧಿಕಾರಿ, ಸಿಬ್ಬಂದಿ ಇನ್ಮುಂದೆ ಬೆಳಗ್ಗೆ 10 ಗಂಟೆಯೊಳಗೆ ಕಡ್ಡಾಯವಾಗಿ ಕಚೇರಿಗೆ ಹಾಜರಾಗಬೇಕು ಎಂದು ಶಾಲಿನಿ ರಜನೀಶ್ ಆದೇಶದಲ್ಲಿ ತಿಳಿಸಿದ್ದಾರೆ. ಸಿಎಂ ಡಿ.ಕೆ ಶಿವಕುಮಾರ್ ಅವರ ಸೂಚನೆ ಮೇರೆ ಆದೇಶ ಹೊರಡಿಸಿದ್ದಾರೆ.

ಮುಖ್ಯಮಂತ್ರಿಗಳು ಜೂನ್ 4 ರಂದು ನಡೆದ ಸಭೆಯಲ್ಲಿ, ರಾಜ್ಯ ಸರ್ಕಾರದ ಪ್ರತಿಯೊಬ್ಬ ಅಧಿಕಾರಿ ಮತ್ತು ಸಿಬ್ಬಂದಿಯು ಪ್ರತಿದಿನ ಬೆಳಗ್ಗೆ 10 ಗಂಟೆಯೊಳಗೆ ಕಡ್ಡಾಯವಾಗಿ ಕಚೇರಿಗೆ ಹಾಜರಾಗಬೇಕೆಂದು ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.


ಪ್ರಸ್ತುತ ಇ-ಆಡಳಿತ ಇಲಾಖೆಯು ಸಿದ್ಧಪಡಿಸಿರುವ ಎಲ್ಲಾ ಅಧಿಕಾರಿಗಳು ಹಾಗೂ ವರ್ಗದ ಮಾಹಿತಿಯನ್ನ ನೋಂದಾಯಿಸಲಾಗಿದೆ. ಆದ್ರೆ ಬಳಷ್ಟು ಅಧಿಕಾರಿ/ಸಿಬ್ಬಂದಿಗಳು ಈ ತಂತ್ರಾಂಶವನ್ನ ನಿರಂತರವಾಗಿ ಬಳಸುತ್ತಿಲ್ಲದಿರುವುದು ಕಂಡುಬಂದಿದೆ. ಆದ್ದರಿಂದ ಈ ನಿರ್ದೇಶನ ತಪ್ಪದೇ ಪಾಲಿಸಲು ಸೂಚಿಸಲಾಗಿದೆ. ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು, ಪ್ರಧಾನ ಕಾರ್ಯದರ್ಶಿಗಳು ಹಾಗೂ ಜಿಲ್ಲಾಮಟ್ಟದ ಹಿರಿಯ ಅಧಿಕಾರಿಗಳು ಸೇರಿದಂತೆ ಎಲ್ಲಾ ಅಧಿಕಾರಿಗಳು ಹಾಗೂ ಸಿಬ್ಬಂದಿ ಬೆಳಗ್ಗೆ 10 ಗಂಟೆಗೆ ಕರ್ತವ್ಯ ಆ್ಯಪ್‌ನಲ್ಲಿ ಹಾಜರಾತಿಯನ್ನು ಹಾಗೂ ಕಚೇರಿಯಿಂದ ನಿರ್ಗಮಿಸುವಾಗ ಕರ್ತವ್ಯ ಆಯಪ್ ಬಳಸುವ ವಿಧಾನಗಳನ್ನ ವೀಕ್ಷಣೆ ಮಾಡುವುದು.

ಇ-ಆಡಳಿತ ಇಲಾಖೆಯು ಪ್ರತಿದಿನ ಬೆಳಗ್ಗೆ 10 ಗಂಟೆಗೆ ಹಾಜರಾತಿ ದಾಖಲಿಸಿದ ಅಧಿಕಾರಿ ಮತ್ತು ಸಿಬ್ಬಂದಿ ಜಿಲ್ಲಾವಾರು ಹಾಗೂ ಕಚೇರಿವಾರು ಮಾಹಿತಿಯನ್ನ (ಕೃತಕ ಬುದ್ಧಿಮತ್ತೆ) ಆ್ಯಪ್ ಮೂಲಕ ಆಯಾ ಇಲಾಖಾ ಮುಖ್ಯಸ್ಥರಿಗೆ ಸ್ವಯಂಚಾಲಿತವಾಗಿ ವರದಿ ಕಳುಹಿಸುವಂತೆ ನಿರ್ದೇಶನ ನೀಡಿದ್ದಾರೆ.

ಈಗಾಗಲೇ ಶಿಕ್ಷಣ ಇಲಾಖೆಯು ನೂತನ ತಂತ್ರಜ್ಞಾನವುಳ್ಳ ಆ್ಯಪ್ ಆಧರಿತ ಹಾಜರಾತಿ ನಿರ್ವಹಣೆ ಅಳವಡಿಸಿಕೊಂಡಿದೆ. ಇದೀಗ ರಾಜ್ಯ ಸರ್ಕಾರ ಎಲ್ಲಾ ಇಲಾಖೆಗಳಿಗೂ ಈ ವ್ಯವಸ್ಥೆಯನ್ನ ವಿಸ್ತರಣೆ ಮಾಡಿದೆ.

## ಜರ್ಮನಿ ನಿಯೋಗದ ಜೊತೆ ಸಿಎಂ ಡಿಕೆಶಿ, ಸಚಿವ ಎಂಬಿಪಿ ಸಭೆ: ಹೂಡಿಕೆ ಕುರಿತು ಚರ್ಚೆ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಪರಸ್ಪರ ಆರ್ಥಿಕ ಸಹಕಾರ ಬಲವರ್ಧನೆಯ ಉದ್ದೇಶದಿಂದ ಆಗಮಿಸಿರುವ ಜರ್ಮನಿಯ ತುರಿಂಜಿಯಾ ಪ್ರಾಂತ್ಯದ ಮಂತ್ರಿಮಂಡಲದ ಮುಖ್ಯಸ್ಥ(ಮಿನಿಸ್ಟರ್ ಪ್ರೆಸಿಡೆಂಟ್) ಮಾರಿಯೋ ವಾಯ್ಟ್ ನೇತೃತ್ವದ ಉನ್ನತ ಮಟ್ಟದ ನಿಯೋಗದ ಜೊತೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಶುಕ್ರವಾರ ಇಲ್ಲಿನ ಖಾಸಗಿ ಹೋಟೆಲ್‌ನಲ್ಲಿ ಮಾತುಕತೆ ನಡೆಸಿದರು. ಈ ಸಂದರ್ಭದಲ್ಲಿ ಬೃಹತ್ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ಕೂಡ ಇದ್ದರು.

ಎರಡೂ ಕಡೆಯವರಿಗೂ ಇರುವ ಅತ್ಯುತ್ತಮ ಅವಕಾಶಗಳನ್ನು ಗುರುತಿಸಲು ನಾವು ಪರಸ್ಪರ ನಿಕಟವಾಗಿ ಕೆಲಸ ಮಾಡಲಿದ್ದೇವೆ. ಇದರಲ್ಲಿ ಜಂಟಿ ಸಹಭಾಗಿತ್ವ, ತಂತ್ರಜ್ಞಾನ ವರ್ಗಾವಣೆ, ಕೌಶಲ್ಯ ಮತ್ತು ಪ್ರತಿಭಾ ವಿನಿಮಯ ಮುಂತಾದವು ಸೇರಿವೆ. ಈ ನಿಟ್ಟಿನಲ್ಲಿ ಕರ್ನಾಟಕ ಮತ್ತು ತುರಿಂಜಿಯಾ ಪ್ರಾಂತೀಯ ಸರ್ಕಾರಗಳು ಜೊತೆಗೂಡಿ ನಾವೀನ್ಯತೆ ಮತ್ತು ಮುಂದಿನ ತಲೆಮಾರಿನ ತಂತ್ರಜ್ಞಾನಗಳತ್ತ ಗಮನ ಹರಿಸಲಿವೆ ಎಂದು ಸಿಎಂ ಡಿ.ಕೆ.ಶಿವಕುಮಾರ್ ಹೇಳಿದರು.

ನಿಯೋಗವನ್ನು ಬರಮಾಡಿಕೊಂಡ ಸಚಿವ ಎಂ.ಬಿ.ಪಾಟೀಲ ಮಾತನಾಡಿ, ಕರ್ನಾಟಕ ಮತ್ತು ತುರಿಂಜಿಯಾ ನಡುವೆ ಆಪ್ಟಿಕ್ಸ್ ಮತ್ತು ಫೋಟಾನಿಕ್ಸ್, ಸೆಮಿಕಂಡಕ್ಟರ್, ಬಯೋಟೆಕ್, ವಿದ್ಯುಚ್ಚಾಲಿತ ವಾಹನ ತಯಾರಿಕೆ, ಮರುಬಳಕೆ ಇಂಧನ, ಆಧುನಿಕ ತಯಾರಿಕಾ ಕ್ಷೇತ್ರಗಳಲ್ಲಿ ಉಜ್ವಲ ಅವಕಾಶಗಳಿವೆ. ಆದ್ದರಿಂದ ತುರಿಂಜಿಯಾ ಪ್ರಾಂತ್ಯದ ಕಂಪನಿಗಳು ರಾಜ್ಯದಲ್ಲಿ ಈ ವಲಯಗಳಲ್ಲಿ ಹೆಚ್ಚಾಗಿ ಹೂಡಿಕೆ ಮಾಡಬೇಕು. ನಮ್ಮ ಕೈಗಾರಿಕಾ ನೀತಿಯಲ್ಲೂ ಈ ಕ್ಷೇತ್ರಗಳಿಗೆ ಒತ್ತು ಕೊಡಲಾಗಿದೆ ಎಂದು ತಿಳಿಸಿದರು.

ರಾಜ್ಯದ ಎಲ್ಲಾ ಕಡೆಗಳಲ್ಲೂ ಕೈಗಾರಿಕೆಗಳು ನೆಲೆಯೂರಬೇಕು ಎನ್ನುವುದು ಸರ್ಕಾರದ ಒತ್ತಾಸೆ. ನಾವು ಈಗ ಸೇವಾವಲಯದಿಂದ ಉತ್ಪಾದನಾ ವಲಯದತ್ತ ಬದಲಾಗುತ್ತಿದ್ದೇವೆ. ತುರಿಂಜಿಯಾ ಪ್ರಾಂತ್ಯದ ಕಂಪನಿಗಳು ಇದರ ಸದ್ಬಳಕೆ ಮಾಡಿಕೊಳ್ಳಬೇಕು ಎಂದು ಅವರು ಅಭಿಪ್ರಾಯಪಟ್ಟರು.

ಇದಕ್ಕೆ ಸ್ಪಂದಿಸಿದ ಮಾರಿಯೋ ವಾಯ್ಟ್ ಅವರು, ರಾಜ್ಯದಲ್ಲಿರುವ ಆರ್‌ಡಿ ಕಾರ್ಯಪರಿಸರ, ಡಿಜಿಟಲ್ ಪ್ರತಿಭಾ ಸಂಪನ್ಮೂಲ, ಇಂಜಿನಿಯರಿಂಗ್, ವಿಶ್ವದರ್ಜೆಯ ನವೋದ್ಯಮ ಕಾರ್ಯ ಪರಿಸರ, ಕ್ವಾಂಟಂ ತಂತ್ರಜ್ಞಾನ, ಏರೋಸ್ಪೇಸ್ ವಲಯಗಳಲ್ಲಿ ಇರುವ ಮೂಲಸೌಕರ್ಯ ಇತ್ಯಾದಿಗಳನ್ನು ಪ್ರಶಂಸಿಸಿದರು. ಮುಖ್ಯಮಂತ್ರಿಯವರ ಆರ್ಥಿಕ ಸಲಹೆಗಾರ ಎಲ್.ಕೆ.ಅತೀಕ್, ಕೈಗಾರಿಕಾ ಇಲಾಖೆಯ ಪ್ರಧಾನ ಕಾರ್ಯದರ್ಶಿ ಎಸ್.ಸೆಲ್ವಕುಮಾರ್ ಉಪಸ್ಥಿತರಿದ್ದರು.

## ಗೃಹಲಕ್ಷ್ಮಿ ಯೋಜನೆ ರೀತಿ ನಮಗೂ 2000 ರೂ. ಕೊಡಿ; ಸಿಎಂ ಡಿಕೆಶಿಗೆ ಬಾಲಕನ ಮನವಿ, ವಿಡಿಯೋ ವೈರಲ್!

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ಶಾಲಾ-ಕಾಲೇಜುಗಳ ವಿದ್ಯಾರ್ಥಿನಿಯರಿಗೆ ನೀಡಿದಂತೆ ವಿದ್ಯಾರ್ಥಿಗಳಿಗೂ ಉಚಿತ ಬಸ್ ಪಾಸ್ ನೀಡುವುದಾಗಿ ಮೊದಲ ಸಚಿವ ಸಂಪುಟ ಸಭೆಯಲ್ಲೇ ನೂತನ ಸಿಎಂ ಡಿ.ಕೆ.ಶಿವಕುಮಾರ್ ಅವರು ಘೋಷಿಸಿದ್ದರು. ಇದಕ್ಕೆ ಸಂಬಂಧಿಸಿ ಸರ್ಕಾರದಿಂದ ಅಧಿಕೃತ ಆದೇಶ ಕೂಡ ಹೊರಡಿಸಲಾಗಿದೆ. ಈ ನಡುವೆ ಗೃಹಲಕ್ಷ್ಮಿ ಯೋಜನೆಯಲ್ಲಿ ಮಹಿಳೆಯರಿಗೆ ಪ್ರತಿ ತಿಂಗಳು 2000 ರೂ. ನೀಡುತ್ತಿರುವಂತೆ ತಮಗೂ ಸೌಲಭ್ಯ ವಿಸ್ತರಿಸಬೇಕು ಎಂದು ಮುಖ್ಯಮಂತ್ರಿಗಳಿಗೆ ಬಾಲಕನೊಬ್ಬ ಮನವಿ ಮಾಡಿರುವುದು ಕಂಡುಬಂದಿದೆ. ಸದ್ಯ ಈ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗುತ್ತಿದೆ. ಸುದ್ದಿ ವಾಹಿನಿಯೊಂದರ ಜತೆ ಬಾಲಕ ಪ್ರತಿಕ್ರಿಯಿಸಿ, ವಿದ್ಯಾರ್ಥಿನಿಯರಿಗೆ ನೀಡಿದಂತೆ ನಮಗೂ ಬಸ್ ಫ್ರೀ ಮಾಡಿದ್ದಾರೆ. ಅದಕ್ಕೆ ಸಿಎಂ ಡಿ.ಕೆ. ಶಿವಕುಮಾರ್ ಅವರಿಗೆ ಧನ್ಯವಾದ ತಿಳಿಸ್ತೀವಿ. ಸಾರಿಗೆ ಬಸ್‌ಗಳಲ್ಲಿ ಮಹಿಳೆಯರಿಗೆ ಉಚಿತ ಪ್ರಯಾಣ ಇರುವುದರಿಂದ ಯಾವಾಗಲೂ ಜನಜಂಗುಳಿ ಇರುತ್ತದೆ.

# ಪಶ್ಚಿಮ ಘಟ್ಟಗಳನ್ನು ರಕ್ಷಿಸಲು ರಾಷ್ಟ್ರೀಯ ನೀತಿ ರೂಪಿಸಿ: ಸಮಿತಿ ಪ್ರಸ್ತಾಪ

• ಉದಯವಾಹಿನಿ, ಬೆಂಗಳೂರು

ಕರ್ನಾಟಕ ಸೇರಿದಂತೆ ಇತರ ರಾಜ್ಯಗಳಲ್ಲಿ ವ್ಯಾಪಿಸಿರುವ ಯುನೆಸ್ಕೋ ವಿಶ್ವ ಪರಂಪರೆ ತಾಣವಾದ ಪಶ್ಚಿಮ ಘಟ್ಟಗಳ ಸಂರಕ್ಷಣೆಗಾಗಿ ರಾಷ್ಟ್ರೀಯ ನೀತಿಯನ್ನು ರೂಪಿಸುವಂತೆ ಪಶ್ಚಿಮ ಘಟ್ಟಗಳ ಸಂರಕ್ಷಣಾ ಕಾರ್ಯಪಡೆ ಸಮಿತಿ ಪ್ರಸ್ತಾಪಿಸಿದೆ.

ಈ ಕುರಿತು ಸಮಿತಿಯು ಕೇಂದ್ರದ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯಕ್ಕೆ, ಕರ್ನಾಟಕ ಸರ್ಕಾರಕ್ಕೆ ಹಾಗೂ ಪಶ್ಚಿಮ ಘಟ್ಟಗಳು ಸುಮಾರು 1,600 ಕಿ.ಮೀ. ವ್ಯಾಪ್ತಿಯಲ್ಲಿ ಹರಡಿರುವ ಕೇರಳ, ತಮಿಳುನಾಡು, ಗೋವಾ, ಮಹಾರಾಷ್ಟ್ರ ಮತ್ತು ಗುಜರಾತ್ ರಾಜ್ಯಗಳಿಗೆ ಪತ್ರ ಬರೆದಿದೆ. ಆದರೆ, ಪಶ್ಚಿಮ ಘಟ್ಟಗಳ ಪರ್ವತ ಪ್ರದೇಶದ ಸುಮಾರು ಶೇಕಡಾ 75 ಭಾಗ ಕರ್ನಾಟಕದಲ್ಲಿದೆ.

ಇದು ಸಣ್ಣ ಸಮಸ್ಯೆಯಂತೆ ಕಂಡರೂ, ಆಳವಾದ ಅಧ್ಯಯನದಲ್ಲಿ ಇದು ಗಂಭೀರ ಸಮಸ್ಯೆಯಾಗಿದೆ ಎಂಬುದು ಗೊತ್ತಾಗಿದೆ. ವಿವಿಧ ಗಾತ್ರದ ಜಾಗಗಳನ್ನು ರಿಸಾರ್ಟ್‌ಗಳು ಮತ್ತು ಹೋಂಸ್ಟೇಗಳಾಗಿ ಪರಿವರ್ತಿಸಲಾಗುತ್ತಿದೆ. ಅವುಗಳಲ್ಲಿ ಕೆಲವು ಕಾನೂನುಬದ್ಧವಾಗಿದ್ದರೆ, ಕೆಲವು ಅಕ್ರಮವಾಗಿವೆ. ಎಷ್ಟು ಹೋಂಸ್ಟೇಗಳು ಮತ್ತು ರೆಸಾರ್ಟ್‌ಗಳಿಗೆ ಅನುಮತಿ ನೀಡಬೇಕು ಎಂಬುದರ ಕುರಿತು ಸ್ಪಷ್ಟ ಮಾರ್ಗಸೂಚಿಗಳು ಇಲ್ಲ. ಹೊಸ ನೀತಿಯು ಸೂಕ್ತ ನಿಯಂತ್ರಣ ಮತ್ತು ಮೇಲ್ವಿಚಾರಣಾ ವ್ಯವಸ್ಥೆಯನ್ನು ಒದಗಿಸಲಿದೆ ಎಂದರು.

ಕರ್ನಾಟಕದಲ್ಲಿ ವಿಶೇಷವಾಗಿ ಚಿಕ್ಕಮಗಳೂರು, ಕೊಡಗು ಹಾಗೂ


ಉದಯವಾಹಿನಿ ಚಿತ್ರ

ಸುತ್ತಮುತ್ತಲಿನ ಪ್ರದೇಶಗಳಲ್ಲಿ ರಿಸಾರ್ಟ್‌ಗಳು ಮತ್ತು ಹೋಂಸ್ಟೇಗಳ ಸಂಖ್ಯೆ ಗಣನೀಯವಾಗಿ ಹೆಚ್ಚಾಗಿದೆ. ದೊಡ್ಡ ಜಮೀನುಗಳನ್ನು ಸಣ್ಣ ತುಂಡುಗಳಾಗಿ ವಿಭಜಿಸಿ, ವಿಲ್ಲಾಗಳು ಅಥವಾ ಸ್ವತಂತ್ರ ಮನೆಗಳ ನಿರ್ಮಾಣಕ್ಕಾಗಿ ಮಾರಾಟ ಮಾಡಲಾಗುತ್ತಿದೆ. ನಂತರ ಅವುಗಳನ್ನು ಗುತ್ತಿಗೆ, ಉಪಗುತ್ತಿಗೆ ಅಥವಾ ಬಾಡಿಗೆಗೆ ನೀಡಲಾಗುತ್ತಿದೆ.

ಇವು ತಳಮಟ್ಟದಲ್ಲಿ ಸಣ್ಣ ಬೆಳವಣಿಗೆಯಂತೆ ಕಂಡರೂ, ಪಶ್ಚಿಮ ಘಟ್ಟಗಳ ನೈಸರ್ಗಿಕ ಭೂದೃಶ್ಯವನ್ನು ತುಂಡರಿಸುತ್ತಿದ್ದು, ಮಾನವ-ವನ್ಯಜೀವಿ ಸಂಘರ್ಷಕ್ಕೂ ಕಾರಣವಾಗುತ್ತಿವೆ ಎಂದು ಅವರು ಹೇಳಿದರು. ರಾಜ್ಯ ಅರಣ್ಯ ಇಲಾಖೆ ಅಧಿಕಾರಿಗಳು ಹಾಗೂ ಕಾರ್ಯಪಡೆ ಸಮಿತಿಯ ಪ್ರಕಾರ, ಅರಣ್ಯ ಪ್ರದೇಶಗಳು ಮತ್ತು ಪಶ್ಚಿಮ ಘಟ್ಟಗಳ ಸುತ್ತಮುತ್ತ ಎಷ್ಟು ಹೋಟೇಲ್, ರೆಸಾರ್ಟ್‌ಗಳು ಮತ್ತು ಹೋಂಸ್ಟೇಗಳಿವೆ ಎಂಬುದರ ಕುರಿತು ಒಟ್ಟಾರೆ ಸಮಗ್ರ ಅಂಕಿಅಂಶಗಳು ಲಭ್ಯವಿಲ್ಲ. ಸಮಿತಿಯು 2026ರ ಸೆಪ್ಟೆಂಬರ್‌ನಿಂದ ನೀತಿ ರೂಪಿಸುವ ಕಾರ್ಯ ಆರಂಭಿಸಿ, 2027ರ ಜನವರಿಯೊಳಗೆ ಪೂರ್ಣಗೊಳಿಸಿ ಸಚಿವಾಲಯಕ್ಕೆ ಸಲ್ಲಿಸುವ ಗುರಿ ಹೊಂದಿದೆ. ಈ ಸಂಬಂಧ ಸದಸ್ಯರು ಇತರ ರಾಜ್ಯಗಳ ಅಧಿಕಾರಿಗಳೊಂದಿಗೆ ಸಭೆ ನಡೆಸುತ್ತಿದ್ದು, ವರದಿ ಸಿದ್ಧಪಡಿಸುತ್ತಿದ್ದಾರೆ.

### ಹಲವು ಬಾರಿ ಎಚ್ಚರಿಕೆ

**ಸಹ್ಯಾದ್ರಿ ಪರ್ವತ ಶ್ರೇಣಿಯ ಸಂರಕ್ಷಣೆಯಲ್ಲಿ ತೊಡಗಿರುವ ತಜ್ಞರು, ಕೇವಲ ದೊಡ್ಡ ಮೂಲಸೌಕರ್ಯ ಯೋಜನೆಗಳಷ್ಟೇ ಅಲ್ಲದೆ, ಹೆಚ್ಚುತ್ತಿರುವ ರಿಸಾರ್ಟ್‌ಗಳು ಮತ್ತು ಹೋಂಸ್ಟೇಗಳಂತಹ ವಾಣಿಜ್ಯ ಅಭಿವೃದ್ಧಿಗಳಿಂದಲೂ ಈ ಪ್ರದೇಶ ತುಂಡಾಗುತ್ತಿದ್ದು, ಅದರ ಪರಿಸರ ಸಮತೋಲನಕ್ಕೆ ಧಕ್ಕೆ ಉಂಟಾಗುತ್ತಿದೆ ಎಂದು ಹಲವು ಬಾರಿ ಎಚ್ಚರಿಕೆ ನೀಡಿದ್ದಾರೆ.**

### ಸಮಗ್ರ ನೀತಿ ಅಗತ್ಯ


**ಪಶ್ಚಿಮ ಘಟ್ಟಗಳ ಧಾರಣಾ ಸಾಮರ್ಥ್ಯ ಅಧ್ಯಯನ ನಡೆಸಿದ ಮೊದಲ ರಾಜ್ಯ ಕರ್ನಾಟಕವಾಗಿದೆ. ಅಲ್ಲದೆ, ಸಂಪೂರ್ಣ ಪಶ್ಚಿಮ ಘಟ್ಟ ಪ್ರದೇಶವನ್ನು ಒಳಗೊಂಡಂತೆ ಇಂತಹ ಅಧ್ಯಯನವನ್ನು ಆರಂಭಿಸುವ ಮೊದಲ ರಾಜ್ಯವೂ ಕರ್ನಾಟಕವೇ ಆಗಲಿದೆ. ಈ ಸಂಪೂರ್ಣ ಪರಿಸರ ವ್ಯವಸ್ಥೆಯನ್ನು ರಕ್ಷಿಸಲು ಆರು ರಾಜ್ಯಗಳನ್ನೊಳಗೊಂಡ ಸಮಗ್ರ ನೀತಿ ಅಗತ್ಯವಾಗಿದೆ. ಆದ್ದರಿಂದ ರಾಷ್ಟ್ರೀಯ ನೀತಿಯನ್ನು ಪ್ರಸ್ತಾಪಿಸಲಾಗಿದೆ ಎಂದು ಸಮಿತಿಯ ಅಧ್ಯಕ್ಷ ಮೊಹಮ್ಮದ್ ತಬ್ರೇಜ್ ಆಲಂ ಶರೀಫ್ ತಿಳಿಸಿದ್ದಾರೆ.**

# ಸಿಎಂ ಡಿಕೆಶಿ ಒಳಿತಿಗಾಗಿ ಪೂಜೆ ಸಲ್ಲಿಕೆ; 15 ಗ್ರಾಮಗಳಿಗೆ ಸಿಹಿ ವಿತರಣೆ

• **ಉದಯವಾಹಿನಿ, ಕನಕಪುರ**

ಮುಖ್ಯ ಮಂತ್ರಿ ಡಿ.ಕೆ. ಶಿವಕುಮಾರ್‌ರವರು ರಾಜ್ಯದ ಜನತೆಗೆ ಉತ್ತಮ ಆಡಳಿತ ನೀಡುವ ಶಕ್ತಿಯನ್ನು ದೇವರು ನೀಡಲಿ ಎಂದು ಮರಳೆಗವಿ ಮಠದಲ್ಲಿ ಪೂಜೆ ಸಲ್ಲಿಸಿ 15 ಗ್ರಾಮಗಳಿಗೆ ಸಿಹಿ ವಿತರಣೆ ಮಾಡಲಾಗುತ್ತಿದೆ ಎಂದು ಕಾಂಗ್ರೆಸ್ ಮುಖಂಡ ಕಪನಿಗೌಡನ ದೊಡ್ಡಿಯ ಕೆ.ಟಿ. ನಂಜುಂಡೇಗೌಡ ಹೇಳಿದರು.

ತಾಲ್ಲೂಕಿನ ಉಯ್ಯಂಬಳ್ಳಿ ಹೋಬಳಿಗೆ ಸೇರಿದ ಮರಳೆಗವಿಮಠದಲ್ಲಿ ಮುಖ್ಯಮಂತ್ರಿಯಾಗಿ ಡಿ.ಕೆ. ಶಿವಕುಮಾರ್‌ರವರು ಅಧಿಕಾರದ ಗದ್ದುಗೆ ಏರಿದ ಹಿನ್ನೆಲೆಯಲ್ಲಿ ಮರಳೆಬೇಕುಪ್ಪೆ ಗ್ರಾಮ ಪಂಚಾಯತಿ ವ್ಯಾಪ್ತಿಯ ಪ್ರತಿ ಗ್ರಾಮಗಳಿಗೆ ಮನೆ ಮನೆಗೆ ಸಿಹಿ ಪೊಟ್ಟಣ ಹಂಚಿ



ಉದಯವಾಹಿನಿ ಚಿತ್ರ

ಮಾತನಾಡಿದರು. ನಮ್ಮ ತಂದೆ ಮತ್ತು ಡಿ.ಕೆ. ಶಿವಕುಮಾರ್‌ರವರು ಆತ್ಮೀಯ ಸ್ನೇಹಿತರಾಗಿದ್ದು ನಾವು ಸಹ ಅವರೊಡನೆ ಉತ್ತಮ ಭಾಂದವ್ಯವನ್ನು ಹೊಂದಿದ್ದೇವೆ ಈ ರಾಜ್ಯದ 25ನೇ ಮುಖ್ಯಮಂತ್ರಿಯಾಗಿ ಅವರು ಅಧಿಕಾರ ವಹಿಸಿಕೊಂಡಿದ್ದು ಉತ್ತಮವಾಗಿ ಆಡಳಿತ ನಡೆಸಿ ಯಶಸ್ವಿಯಾಗಿ ಮುಂದಿನ ಚುನಾವಣೆಯಲ್ಲಿ ಮತ್ತೆ ಗೆದ್ದು ಮುಖ್ಯಮಂತ್ರಿಯಾಗಲಿ ಎಂದು ಪೂಜೆ ಸಲ್ಲಿಸಿದ್ದೇವೆ ಎಂದರು.

ಮರಳೆಗವಿ ಮಠದ ಡಾ. ಮುಮ್ಮಡಿ ಶಿವರುದ್ರಮಹಾಸ್ವಾಮಿಗಳು ಮಾತನಾಡಿ ಎಲ್ಲಿ ಶ್ರಮವಿದೆಯೋ ಅಲ್ಲಿ ತಕ್ಕ ಪ್ರತಿಫಲ ಇದೆ ಎನ್ನುವುದಕ್ಕೆ ಡಿ.ಕೆ. ಶಿವಕುಮಾರ್ ರವರಿಗೆ ಸಿಕ್ಕಿರುವಸ್ಥಾನವೇ ಕಾರಣವಾಗಿದೆ ಅವರು ಕಾಂಗ್ರೆಸ್ ಪಕ್ಷಕ್ಕಾಗಿ ತಮ್ಮ ತನುಮನ ದನವನ್ನು ಮುಡುಪಾಗಿಟ್ಟು ತಾಳ್ಮೆಯಿಂದ ಕಾಲ ಬರುವವರೆಗೆ ಕಾಯ್ದ ಹಿನ್ನೆಲೆಯೇ ಕಾರಣವೆಂದಿದಾರೆ.

> ಡಿ.ಕೆ. ಶಿವಕುಮಾರ್‌ರವರು ಮುಖ್ಯಮಂತ್ರಿಯಾಗಿ ಅಧಿಕಾರವಹಿಸಿಕೊಂಡಿರುವ ಸಂದರ್ಭದಲ್ಲಿ ನಾವೆಲ್ಲರೂ ಸಹ ಅವರ ಹೆಸರಿನಲ್ಲಿ ಈ ದಿನ ಪೂಜೆಸಲ್ಲಿಸುವ ಮೂಲಕ ಉತ್ತಮ ಆರೋಗ್ಯ ಆಯುಸ್ಸು ನೀಡುವುದರ ಜೊತೆ ಹೆಚ್ಚಿನ ಅಭಿವೃದ್ಧಿ ಕೆಲಸ ಮಾಡುವಂತೆ ಪೂಜೆ ಸಲ್ಲಿಸಿದ್ದೇವೆ ಜೊತೆ ಕ್ಷೇತ್ರದಲ್ಲಿ ಮೇಕೆದಾಟು ಯೋಜನೆ, ಪ್ರತಿ ಹೋಬಳಿಗೆ ವ್ಯಾಪ್ತಿಯಲ್ಲಿ ಉತ್ತಮ ಆಸ್ಪತ್ರೆಯನ್ನು ತೆರೆಯಬೇಕೆಂದು ಒತ್ತಾಯಿಸಿದರು. -ಕೆ.ಟಿ. ನಾರಾಯಣ್

# ತಂಬಾಕು ಸೇವನೆ ವಿರುದ್ಧ ಅರಿವು



ಉದಯವಾಹಿನಿ ಚಿತ್ರ

• **ಉದಯವಾಹಿನಿ, ಕೆಜಿಎಫ್**

ತಂಬಾಕು ಮತ್ತು ನಶೆ ಮುಕ್ತ ರಾಜ್ಯವನ್ನಾಗಿ ಮಾಡಲು ಎಲ್ಲರೂ ಸಹಕರಿಸಬೇಕೆಂದು ಕೆಜಿಎಫ್ ಡೆಂಟಲ್ ಸೈನ್ಸ್ ಕಾಲೇಜಿನ ವಿದ್ಯಾರ್ಥಿಗಳು ರಾಬರ್ಟಸನ್‌ಪೇಟೆಯ ಬಸ್ ನಿಲ್ದಾಣದಲ್ಲಿ ಅರಿವು ಮೂಡಿಸಿದರು. ಭಿತ್ತಿ ಪತ್ರ ಹಿಡಿದು ವಿದ್ಯಾರ್ಥಿಗಳು ಘೋಷಣೆ ಕೂಗಿದರು.

ತಂಬಾಕಿನಿಂದ ವೈಯಕ್ತಿಕ ಜೀವನ ಹಾಳಾಗುವುದಲ್ಲದೆ, ಸಂಕಷ್ಟಕ್ಕೆ ದೂಡಲಿದೆ. ತಂಬಾಕು ಸೇವನೆ ಮಾಡುವವರು ತಮ್ಮ ಪಕ್ಕದಲ್ಲಿರುವವರಿಗೂ ಸಹ ರೋಗ ಹರಡುತ್ತಾರೆ. ಬೇರೆಯವರ ಜೀವನದೊಂದಿಗೆ ಕೂಡ ಚೆಲ್ಲಾಟವಾಡುತ್ತಾರೆ.

ತಂಬಾಕು ಸೇರಿದಂತೆ ಎಲ್ಲಾ ನಶೆ ವಸ್ತುಗಳನ್ನು ತ್ಯಜಿಸಬೇಕೆಂದು ಕಾಲೇಜಿನ ಉಪನ್ಯಾಸಕರು ಮನವಿ ಮಾಡಿದರು. ತಂಬಾಕು ಸೇವನೆಗೆ ಅಂಟಿಕೊಂಡಿರುವವರು ಡೆಂಟಲ್ ಸೈನ್ಸ್ ಆಸ್ಪತ್ರೆಗೆ ಬಂದರೆ ಉಚಿತವಾಗಿ ಚಿಕಿತ್ಸೆ ಕೊಡಲಾಗುವುದು. ಚಿಕಿತ್ಸೆ ಪಡೆದವರು ಮುಂದಿನ ದಿನಗಳಲ್ಲಿ ನಶೆಯಿಂದ ಮುಕ್ತರಾಗುತ್ತಾರೆಂದು ತಿಳಿಸಿದರು.

## ಜೂ.10ರಂದು ಕಾಂಗ್ರೆಸ್ ಭವನದಲ್ಲಿ ಕೇಕ್ ಕಟಿಂಗ್, ಬಿರಿಯಾನಿ ಊಟ

# ಕಾಂಗ್ರೆಸ್ ಶಕ್ತಿ ಪ್ರದರ್ಶನಕ್ಕೆ ವೇದಿಕೆ ಸಜ್ಜು

• **ಉದಯವಾಹಿನಿ, ಶಿಡ್ಲಘಟ್ಟ**

ಇದು ಕೇವಲ ಸಂಭ್ರಮಾಚರಣೆಯ ಕಾರ್ಯಕ್ರಮವಲ್ಲ, ಕಾಂಗ್ರೆಸ್ ಪಕ್ಷದ ಒಗ್ಗಟ್ಟು, ಶಕ್ತಿ ಮತ್ತು ಕಾರ್ಯಕರ್ತರ ಉತ್ಸಾಹದ ಪ್ರತೀಕವಾಗಿದೆ. ಪ್ರತಿಯೊಬ್ಬ ಕಾಂಗ್ರೆಸ್ ಕಾರ್ಯಕರ್ತರೂ ಈ ಐತಿಹಾಸಿಕ ಕಾರ್ಯಕ್ರಮದಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕು ಎಂದು ಕೆಪಿಸಿಸಿ ಕೋ-ಆರ್ಡಿನೇಟರ್ ಹಾಗೂ ಕಾಂಗ್ರೆಸ್ ಮುಖಂಡ ರಾಜೀವ್ ಗೌಡ ಹೇಳಿದರು.

ನಗರದ ಕಾಂಗ್ರೆಸ್ ಭವನದಲ್ಲಿ ನಡೆದ ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದ ಅವರು, ರಾಜ್ಯದ ನೂತನ ಮುಖ್ಯಮಂತ್ರಿಯಾಗಿ ಡಿ.ಕೆ. ಶಿವಕುಮಾರ್ ಅಧಿಕಾರ ಸ್ವೀಕರಿಸಿರುವ ಹಿನ್ನೆಲೆಯಲ್ಲಿ ಜೂನ್ 10ರಂದು ಶಿಡ್ಲಘಟ್ಟದಲ್ಲಿ ಅದ್ದೂರಿ ಸಂಭ್ರಮಾ ಚರಣೆ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಸಾಮಾನ್ಯ ಕಾರ್ಯಕರ್ತನಾಗಿ ರಾಜಕೀಯ ಜೀವನ ಆರಂಭಿಸಿದ ಡಿ.ಕೆ. ಶಿವಕುಮಾರ್ ಅವರು ಇಂದು ಮುಖ್ಯಮಂತ್ರಿ ಸ್ಥಾನಕ್ಕೇರಿರುವುದು ಪಕ್ಷದ ಪ್ರತಿಯೊಬ್ಬ ಕಾರ್ಯಕರ್ತನಿಗೂ ಹೆಮ್ಮೆಯ ಸಂಗತಿಯಾಗಿದೆ.

ಅವರ ಹೋರಾಟ, ಸಂಘಟನಾ ಶಕ್ತಿ ಮತ್ತು ಪಕ್ಷದ ಮೇಲಿನ ನಿಷ್ಠೆಗೆ ದೊರೆತ ಗೌರವ ಇದಾಗಿದೆ.

ಆದ್ದರಿಂದ ಈ ಸಂತಸದ ಕ್ಷಣವನ್ನು ಜನರೊಂದಿಗೆ ಹಾಗೂ ಕಾರ್ಯಕರ್ತ ರೊಂದಿಗೆ ಹಂಚಿಕೊಳ್ಳಲು ವಿಶೇಷ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಹೇಳಿದರು.

ಜೂ.10ರಂದು ಶಿಡ್ಲಘಟ್ಟ ನಗರದ ಕಾಂಗ್ರೆಸ್ ಭವನದಲ್ಲಿ ಕೇಕ್ ಕಟಿಂಗ್, ಸಿಹಿ ವಿತರಣೆ, ಬಿರಿಯಾನಿ ಊಟ ಸೇರಿದಂತೆ ವಿವಿಧ ಕಾರ್ಯಕ್ರಮಗಳು ನಡೆಯಲಿದ್ದು, ತಾಲ್ಲೂಕಿನ ಎಲ್ಲಾ ಗ್ರಾಮಗಳು ಹಾಗೂ ನಗರ ಪ್ರದೇಶಗಳಿಂದ ಕಾಂಗ್ರೆಸ್ ಕಾರ್ಯಕರ್ತರು, ಮುಖಂಡರು ಮತ್ತು ಅಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲಿದ್ದಾರೆ ಎಂದು ತಿಳಿಸಿದರು್ಲ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷೆ ಸಹನಾ ರಾಜೀವ್ ಗೌಡ, ಚಿಲಕಲನೇರ್ಪು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಅನಂಪಲ್ಲಿ ಕೃಷ್ಣಾರೆಡ್ಡಿ ಡಾಲ್ಫಿನ್ ನಾಗರಾಜು, ರಾಯಪ್ಪಲ್ಲಿ ಅಶ್ವಥ್, ನಾರಾಯಣರೆಡ್ಡಿ, ಅಪ್ಸರ್ ಪಾಷ, ಕಂಪನಿ ದೇವರಾಜು, ಬ್ಯಾಟರಾಯಶೆಟ್ಟಿ, ಡಿ.ಪಿ.ನಾಗರಾಜು , ಗೋಪಾಲ ರೆಡ್ಡಿ, ಮೇಲೂರು ಮಂಜುನಾಥ್, ಸಾದಲಿ ಗೋವಿಂದ ರಾಜು, ಸಮಿವುಲ್ಲಾ, ನಾಗನರಸಿಂಹ, ಮೌಲಾ, ರಿಯಾಜ್ ಪಾಷ ಸೇರಿದಂತೆ ಕಾಂಗ್ರೆಸ್ ಪಕ್ಷದ ಮುಖಂಡರು ಮತ್ತು ನೂರಾರು ಕಾರ್ಯಕರ್ತರು ಮುಂತಾದವರು ಹಾಜರಿದ್ದರು.



ಉದಯವಾಹಿನಿ ಚಿತ್ರ

ನೂತನ ಮುಖ್ಯಮಂತ್ರಿಯಾಗಿ ಡಿ.ಕೆ. ಶಿವಕುಮಾರ್ ಅಧಿಕಾರ ಸ್ವೀಕರಿಸಿರುವ ಹಿನ್ನೆಲೆ ಜೂನ್ 10ರಂದು ಶಿಡ್ಲಘಟ್ಟದಲ್ಲಿ ಅದ್ದೂರಿ ಸಂಭ್ರಮಾ ಚರಣೆ

### ಹೊಸ ಅಧ್ಯಾಯ ಆರಂಭ

ಡಿ.ಕೆ.ಶಿವಕುಮಾರ್ ಅವರ ನಾಯಕತ್ವದಲ್ಲಿ ರಾಜ್ಯದಲ್ಲಿ ಅಭಿವೃದ್ಧಿ ಮತ್ತು ಜನಪರ ಆಡಳಿತಕ್ಕೆ ಹೊಸ ಅಧ್ಯಾಯ ಆರಂಭವಾಗಲಿದೆ.

ಕಾಂಗ್ರೆಸ್ ಪಕ್ಷದ ಶಕ್ತಿ ಕಾರ್ಯಕರ್ತರೇ ಆಗಿದ್ದು, ಅವರ ಉತ್ಸಾಹ ಮತ್ತು ಒಗ್ಗಟ್ಟಿನ ಪ್ರತೀಕವಾಗಿ ಈ ಕಾರ್ಯಕ್ರಮವನ್ನು ಐತಿಹಾಸಿಕವಾಗಿ ಆಚರಿಸ ಲಾಗುತ್ತಿದೆ ಎಂದು ರಾಜೀವ್ ಗೌಡ ಹೇಳಿದರು.

### ಕಾರ್ಯಕರ್ತರ ಸಭೆ

### ಯಶಸ್ಸಿಗೆ ಕೈಜೋಡಿಸುವುದಾಗಿ ಭರವಸೆ

ಸಭೆಯಲ್ಲಿ ಉಪಸ್ಥಿತರಿದ್ದ ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರು ಕಾರ್ಯಕ್ರಮದ ಯಶಸ್ಸಿಗೆ ಕೈಜೋಡಿಸುವುದಾಗಿ ಭರವಸೆ ನೀಡಿದರು. ಕಾರ್ಯಕ್ರಮದ ಸಿದ್ದತೆಗಳು ಈಗಾಗಲೇ ಆರಂಭಗೊಂಡಿದ್ದು, ಶಿಡ್ಲಘಟ್ಟದಲ್ಲಿ ಕಾಂಗ್ರೆಸ್ ಕಾರ್ಯಕರ್ತರ ಉತ್ಸಾಹ ಮನೆಮಾಡಿದೆ. ಜೂ.10 ರಂದು ನಡೆಯಲಿರುವ ಈ ಸಂಭ್ರಮಾಚರಣೆ ಕ್ಷೇತ್ರದ ರಾಜಕೀಯ ವಲಯದಲ್ಲಿ ವಿಶೇಷ ಗಮನ ಸೆಳೆದಿದೆ.

# ಹಗಲಿರುಳು ಶ್ರಮಿಸುತ್ತಿರುವ ಹೆಮ್ಮೆಯ ಆಶಾ ಕಾರ್ಯಕರ್ತೆಯರ ಕಾರ್ಯಕ್ಕೆ ಮೆಚ್ಚುಗೆ

• **ಉದಯವಾಹಿನಿ, ಚಿಕ್ಕಬಳ್ಳಾಪುರ**

ಮಂಚೇನಹಳ್ಳಿ ತಾಲ್ಲೂಕು ಪ್ರಾಥಮಿಕ ಆರೋಗ್ಯ ಕೇಂದ್ರದ ಆವರಣದಲ್ಲಿ, ಗ್ರಾಮೀಣ ಆರೋಗ್ಯ ರಕ್ಷಣೆಯ ಬೆನ್ನೆಲುಬಾಗಿ ನಿಂತು ಹಗಲಿರುಳು ಶ್ರಮಿಸುತ್ತಿರುವ ಹೆಮ್ಮೆಯ ಆಶಾ ಕಾರ್ಯಕರ್ತೆಯರನ್ನು ಖುದ್ದಾಗಿ ಭೇಟಿ ಮಾಡಿ ಅವರ ಕರ್ತವ್ಯ ಪಾಲನೆಯನ್ನು ಜಿಲ್ಲೆಯ ಪ್ರತಿಷ್ಠಿತ ಸಮಾಜ ಸೇವಾ ಸಂಸ್ಥೆ ಜೈ ಫೌಂಡೇಶನ್ ಸಂಸ್ಥೆಯ ಅಧ್ಯಕ್ಷ ಹಾಗೂ ಬಿಜೆಪಿ ಯುವ ಮುಖಂಡ ಡಾ. ಜಯ ಕುಮಾರ ಪ್ರಶಂಶಿಸಿದರು. ಅವರು



ಉದಯವಾಹಿನಿ ಚಿತ್ರ

ಮಂಚೇನಹಳ್ಳಿ ತಾಲ್ಲೂಕು ವ್ಯಾಪ್ತಿಯ ಹಾಗೂ ಜಿಲ್ಲೆಯಲ್ಲಿ ಇತರೆ ಕಡೆ ಆಶಾ ಕಾರ್ಯಕರ್ತೆಯರು ಎದುರಿಸುತ್ತಿರುವ ವಿವಿಧ ವೃತ್ತಿಪರ ಸವಾಲುಗಳು ಹಾಗೂ ಕುಂದುಕೊರತೆಗಳ ಕುರಿತು ಸುದೀರ್ಘವಾಗಿ ಚರ್ಚಿಸಿ, ಅವರಿಂದ ಮನವಿಯನ್ನು ಸ್ವೀಕರಿಸಿದರು. ಇದೇ ಸಂದರ್ಭದಲ್ಲಿ ಸದಾ ಕಾಲ ಜನರ ಆರೋಗ್ಯ ಕಾಯುವ ಈ ನಿಷ್ಠಾವಂತ ಆರೋಗ್ಯ ಕಾರ್ಯಕರ್ತೆಯರ ನ್ಯಾಯಯುತ ಬೇಡಿಕೆಗಳನ್ನು ಸಂಬಂಧಪಟ್ಟ ಅಧಿಕಾರಿಗಳ ಗಮನಕ್ಕೆ ತಂದು ಸೂಕ್ತ ಪರಿಹಾರ ಒದಗಿಸಲು ಪ್ರಾಮಾಣಿಕವಾಗಿ ಶ್ರಮಿಸಲಾಗುವುದು ಎಂದು ಆಶಾ ಕಾರ್ಯಕರ್ತೆಯರಿಗೆ ಭರವಸೆ ನೀಡಿದರು. ಇದೇ ವೇಳೆ, ಯಾವುದೇ ಪ್ರತಿಫಲಾಪೇಕ್ಷೆಯಿಲ್ಲದೆ ಜನರ ಸೇವೆ ಮಾಡುವ ಇವರ ನಿಸ್ವಾರ್ಥ ಶ್ರಮವನ್ನು ಶ್ಲಾಘಿಸಿ, ನಮ್ಮ ಜೈ ಫೌಂಡೇಶನ್ ವತಿಯಿಂದ ಕಿರುಕಾಣಿಕೆ ನೀಡಿ ಗೌರವಿಸಿದರು.

ಸಮಾಜದ ಕಾವಲುಗಾರರಂತಿರುವ ಈ ಹೆಣ್ಣುಮಕ್ಕಳ ಕೈ ಬಲಪಡಿಸುವುದು ಹಾಗೂ ಕಷ್ಟಕಾಲದಲ್ಲಿ ಅವರ ಬೆನ್ನಿಗೆ ನಿಲ್ಲುವುದು ನಮ್ಮ ಸಂಸ್ಥೆಯ ನಿರಂತರ ಜವಾಬ್ದಾರಿ ಎಂದು ಅವರು ಅಭಿಪ್ರಾಯ ವ್ಯಕ್ತಪಡಿಸಿದರು.

## ಐದು ಲಕ್ಷ ಸಸಿ ಬೆಳೆಸಲು ಸಹಕಾರಕ್ಕೆ ನ್ಯಾ. ಹಂಚಾಟೆ ಸಂಜೀವಕುಮಾರ ಮನವಿ

• **ಉದಯವಾಹಿನಿ, ಚಿಕ್ಕಬಳ್ಳಾಪುರ**

ಜಿಲ್ಲೆಯಲ್ಲಿ ಐದು ಲಕ್ಷ ಸಸಿಗಳನ್ನು ನೆಡುವ ಸಂಬಂಧ ಹೈಕೋರ್ಟ್ ನ್ಯಾ.ಹಂಚಾಟೆ ಸಂಜೀವಕುಮಾರ ಅವರ ಅಧ್ಯಕ್ಷತೆಯಲ್ಲಿ ಜಿಲ್ಲಾ ನ್ಯಾಯಾಲಯದಲ್ಲಿ ಸಭೆ ನಡೆಯಿತು.

ಜಿಲ್ಲೆಯ ಎಲ್ಲಾ ಕೈಗಾರಿಕೆಗಳ ವ್ಯವಸ್ಥಾಪಕರು, ಬ್ಯಾಂಕುಗಳ ವ್ಯವಸ್ಥಾಪಕರು, ಸರ್ಕಾರೇತರ ಸ್ವಯಂ ಸೇವಾ ಸಂಸ್ಥೆಗಳ ಮುಖ್ಯಸ್ಥರು, ಸಮಾಜ ಸೇವಕರು, ಕಾರ್ಮಿಕ ಸಂಘಟನೆಗಳು ಹಾಗೂ ವಿವಿಧ ಸಂಘ ಸಂಸ್ಥೆಗಳ ಮುಖ್ಯಸ್ಥರು ಸಭೆಯಲ್ಲಿ ಪಾಲ್ಗೊಂಡು ಅಭಿಪ್ರಾಯ ಹಂಚಿಕೊಂಡರು. ಈ ವೇಳೆ ಮಾತನಾಡಿ ಜಿಲ್ಲೆಯಾದ್ಯಂತ 5 ಲಕ್ಷ ಗಿಡಗಳನ್ನು ನೆಡಲು ಯೋಜನೆ ರೂಪಿಸಲಾಗಿದೆ. ಈ ಯೋಜನೆಯಿಂದ ಜಿಲ್ಲೆಯಲ್ಲಿ ಉತ್ತಮ ಹಾಗೂ ಅಂತರ್ಜಲ ವೃದ್ಧಿ ಆಗುತ್ತದೆ. ಪರಿಸರ ಕಾಳಜಿಯುಳ್ಳ ಎಲ್ಲರೂ ಕೈ ಜೋಡಿಸಬೇಕು.

# ಅನುದಾನ ನೀಡುವಾಗ ಸಮಾನ ಪ್ರಾತಿನಿಧ್ಯ ನೀಡಬೇಕು: ಶಾಸಕ ಮಂಜು

• **ಉದಯವಾಹಿನಿ, ಕೆ.ಆರ್.ಪೇಟೆ**

ರಾಜ್ಯದ ನೂತನ ಮುಖ್ಯಮಂತ್ರಿಗಳಾಗಿ ಅಧಿಕಾರವಹಿಸಿಕೊಂಡಿರುವ ಡಿ.ಕೆ.ಶಿವಕುಮಾರ್ ಅವರಿಗೆ ಅಭಿನಂದನೆಗಳನ್ನು ತಿಳಿಸಿರುವ ಶಾಸಕ ಹೆಚ್.ಟಿ.ಮಂಜು ಡಿ.ಕೆ.ಶಿ ಆಯ್ಕೆ ಸ್ವಾಗತಾರ್ಹ ಆದರೆ ಅವರು ಹಿಂದಿನ ಸರಕಾರದಂತೆ ವಿರೋಧ ಪಕ್ಷಗಳ ಶಾಸಕರ ಬಗ್ಗೆ ಸಂಕುಚಿತ ಮನಸ್ಸು ಹೊಂದದೆ ವಿಶಾಲ ಮನೋಭಾವನೆಯಲ್ಲಿ ರಾಜ್ಯದ ಸಮಗ್ರ ಅಭಿವೃದ್ದಿಗೆ ಶ್ರಮಿಸಲಿ ಎಂದು ಕಿವಿಮಾತು ಹೇಳಿದರು.

ಅವರು ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ ರಸ್ತೆ ಅಭಿವೃದ್ದಿ ಕಾಮಗಾರಿಗೆ ಗುದ್ದಲಿ ಪೂಜೆ ನೆರವೇರಿಸಿ ಮಾತನಾಡಿದರು.



ಉದಯವಾಹಿನಿ ಚಿತ್ರ

ಸಾರ್ವಜನಿಕ ಜೀವನದಲ್ಲಿ ಕೆಲಸ ಮಾಡುವವರು ಸಮಾನ ಮನಸ್ಸು ಹೊಂದಿರಬೇಕು. ಕಾಂಗ್ರೆಸ್ ಪಕ್ಷದ ಶಾಸಕರಂತೆಯೇ ನಾವು ನಮ್ಮ ಕ್ಷೇತ್ರದ ಮತದಾರರಿಗೆ ಹಾಗೂ ರೈತ ಸಮುದಾಯಕ್ಕೆ ಆಶ್ವಾಸನೆ ನೀಡಿ ಮತ ಪಡೆದು ಆಯ್ಕೆಯಾಗಿರುತ್ತೇವೆ. ಅಭಿವೃದ್ದಿ ಅನುದಾನದಲ್ಲಿ ನಮಗೂ ಸಮಾನ ಪ್ರಾತಿನಿಧ್ಯ ನೀಡಬೇಕು. ವಿರೋಧ ಪಕ್ಷಗಳ ಬಗ್ಗೆ ಹಿಂದಿನ ಮುಖ್ಯಮಂತ್ರಿಗಳು ತಾರತಮ್ಯ ನೀತಿ ಅನುಸರಿಸುತ್ತಿದ್ದರು. ಕಾಂಗ್ರೆಸ್ ಶಾಸಕರಿಗೆ 50 ಕೋಟಿ ನೀಡಿದರೆ ನಮಗೆ 25 ಕೋಟಿ ನೀಡಿದ್ದರು. ಶಾಸಕರ ಅನುದಾನ ನೀಡಿಕೆಯಲ್ಲಿ ತಾರತಮ್ಯ ಸಲ್ಲದು ಎಂದ ಶಾಸಕ ಹೆಚ್.ಟಿ.ಮಂಜು ನೂತನ ಮುಖ್ಯಮಂತ್ರಿಗಳು ಸಂಕುಚಿತ ಮನಸ್ಸಿನಿಂದ ಹೊರಬರುತ್ತಾರೆಂಬ ನಿರೀಕ್ಷೆ ನನ್ನದು.

ಅಧಿಕಾರ ಸ್ವೀಕಾರಕ್ಕೂ ಮುನ್ನ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ, ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಮುಂತಾದವರನ್ನು ಭೇಟಿ ಮಾಡಿ ಆಶೀರ್ವಾದ ಪಡೆಯುವ ಮೂಲಕ ಡಿ.ಕೆ.ಶಿವಕುಮಾರ್ ಸಮನ್ವಯ ಆಡಳಿತದತ್ತ ಹೆಜ್ಜೆಯಿಟ್ಟಿದ್ದಾರೆ. ಇದು ಒಳ್ಳೆಯ ಬೆಳವಣಿಗೆ. ಮಂಡ್ಯ ಜಿಲ್ಲೆಯ ಏಕೈಕ ಜೆಡಿಎಸ್ ಶಾಸಕ ನಾನು. ನೂತನ ಮುಖ್ಯಮಂತ್ರಿಗಳ ಬಗ್ಗೆ ನನಗೆ ಭರವಸೆ ಇದೆ ಎಂದಿದ್ದಾರೆ.

# ಕೊಡಗಿನಲ್ಲಿ ಕಾಡಾನೆ ದಾಳಿ: ಹಿರಿಯ ಅಧಿಕಾರಿ ಸುನಿಲ್ ಅಚಾಯ ಪತ್ನಿ ಸಾಂಧ್ಯಾ ಅಚಾಯ ದುರ್ಮರಣ..!

• **ಉದಯವಾಹಿನಿ ,ಕೊಡಗು**

ಕೊಡಗು ಜಿಲ್ಲೆಯಲ್ಲಿ ನಡೆದ ಕಾಡಾನೆ ದಾಳಿಯಿಂದಾಗಿ ಹಿರಿಯ ಐಪಿಎಸ್ ಅಧಿಕಾರಿ ಸುನಿಲ್ ಅಚಾಯ ಅವರ ಪತ್ನಿ ಸಂಧ್ಯಾ ಅಚಾಯ ಅವರು ಮೃತಪಟ್ಟಿರುವ ದುರ್ಘಟನೆ ಶುಕ್ರವಾರ ನಡೆದಿದೆ.

ದಕ್ಷಿಣ ಕೊಡಗಿನ ಗೋಣಿಕೊಪ್ಪಲು ಸಮೀಪದ ಕೋನನಕಟ್ಟೆಯಲ್ಲಿರುವ ಅವರ ಸ್ವಂತ ತೋಟದಲ್ಲಿ ಈ ದುರ್ಘಟನೆ ಸಂಭವಿಸಿದೆ. ಐವತ್ತರ ಹರೆಯದ ಸಾಂಧ್ಯಾ ಅಚಾಯ ಅವರು ತಮ್ಮ ಎಸ್ಟೇಟ್‌ಗೆ ಮ್ಯಾನೇಜರ್ ಹಾಗೂ ಚಾಲಕರೊಂದಿಗೆ ತೆರಳಿದ್ದ ವೇಳೆ ಏಕಾಏಕಿ ಕಾಡಾನೆ ದಾಳಿ ನಡೆಸಿದೆ ಎಂದು ತಿಳಿದುಬಂದಿದೆ.

ಆನೆ ದಾಳಿ ನಡೆಸುತ್ತಿದ್ದಂತೆ ಸ್ಥಳದಲ್ಲಿ ಆತಂಕದ ವಾತಾವರಣ ನಿರ್ಮಾಣವಾಗಿದ್ದು, ಎಸ್ಟೇಟ್ ಮ್ಯಾನೇಜರ್ ಮತ್ತು ಚಾಲಕ ಅಲ್ಲಿಂದ ತಪ್ಪಿಸಿಕೊಳ್ಳುವಲ್ಲಿ ಯಶಸ್ವಿಯಾಗಿದ್ದಾರೆ. ಆದರೆ, ಸಾಂಧ್ಯಾ ಅವರಿಗೆ ತಪ್ಪಿಸಿಕೊಳ್ಳಲು ಸಾಧ್ಯವಾಗದೆ ಆನೆ ದಾಳಿಗೊಳಗಾಗಿ ಗಂಭೀರವಾಗಿ



ಉದಯವಾಹಿನಿ ಚಿತ್ರ

ಗಾಯಗೊಂಡಿದ್ದಾರೆ. ಗಾಯಗೊಂಡಿದ್ದ ಅವರನ್ನು ತಕ್ಷಣ ಆಸ್ಪತ್ರೆಗೆ ಸಾಗಿಸಲಾಯಿತಾದರೂ ಚಿಕಿತ್ಸೆ ಫಲಕಾರಿಯಾಗದೆ ಶುಕ್ರವಾರ ಬೆಳಗ್ಗೆ ಸುಮಾರು 10.10ರಿಂದ 10.15ರ ವೇಳೆಗೆ ಮೃತಪಟ್ಟಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಘಟನೆ ಕುರಿತು ಕೊಡಗು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿಂದು ಮಣಿ ಮಾಹಿತಿ ನೀಡಿದ್ದು, ಪ್ರಕರಣ ದಾಖಲಿಸಿಕೊಂಡು ತನಿಖೆ ಆರಂಭಿಸಲಾಗಿದೆ ಎಂದು ಹೇಳಿದ್ದಾರೆ.

ಆನೆ ದಾಳಿ ಹೇಗೆ ನಡೆಯಿತು ಹಾಗೂ ಘಟನೆಗೆ ಕಾರಣವಾದ ಪರಿಸ್ಥಿತಿಗಳ ಬಗ್ಗೆ ಅಧಿಕಾರಿಗಳು ಪರಿಶೀಲನೆ ನಡೆಸುತ್ತಿದ್ದಾರೆಂದು ತಿಳಿಸಿದ್ದಾರೆ. ದುರ್ಘಟನೆ ಹಿನ್ನೆಲೆ ಕೊಡಗಿನಲ್ಲಿ ಮತ್ತೆ ಮಾನವ-ಪ್ರಾಣಿ ಸಂಘರ್ಷದ ಸಮಸ್ಯೆ ಚರ್ಚೆಗೆ ಬಂದಿದೆ.

ನಾಗರಹೊಳೆ ಅಭಯಾರಣ್ಯದ ಸಮೀಪದಲ್ಲಿರುವ ಕಾಫಿ ತೋಟಗಳು ಹಾಗೂ ನಿವಾಸ ಪ್ರದೇಶಗಳಿಗೆ ಕಾಡಾನೆಗಳು ಆಗಾಗ್ಗೆ ನುಗ್ಗುತ್ತಿರುವುದು ಸ್ಥಳೀಯರಲ್ಲಿ ಆತಂಕ ಹುಟ್ಟಿಸಿದೆ.

### ಮತ್ತೆ ಮಾನವ-ಪ್ರಾಣಿ ಸಂಘರ್ಷದ ಸಮಸ್ಯೆ ಚರ್ಚೆ

### ಸರಿಯಾಗಿ ಬೇಲಿ ಹಾಕಿ

ಕುಟುಂಬದ ಆಪ್ತ ಸ್ನೇಹಿತ ಎಂ.ಟಿ. ಕಾರ್ಯಪ್ಪ ಮಾತನಾಡಿ, ''ಕಾಡು ಪ್ರದೇಶಗಳನ್ನು ಸರಿಯಾಗಿ ಬೇಲಿ ಹಾಕಬೇಕು. ಆನೆಗಳಿಗೆ ಕಾಡಿನಲ್ಲೇ ಸಾಕಷ್ಟು ನೀರು ಮತ್ತು ಆಹಾರ ವ್ಯವಸ್ಥೆ ಮಾಡಿದರೆ ಅವು ಮಾನವ ವಸತಿ ಪ್ರದೇಶಗಳಿಗೆ ಬರುವುದಿಲ್ಲ. ಯೂಕಲಿಪ್ಟಸ್ ಮತ್ತು ತೇಗು ಮರಗಳಿಂದ ತುಂಬಿರುವ ಅರಣ್ಯ ಪ್ರದೇಶಗಳಲ್ಲಿ ಆನೆಗಳಿಗೆ ಆಹಾರ ಸಿಗುವುದಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

# ಜಿಲ್ಲೆಯಲ್ಲಿ ಶೇ.96ರಷ್ಟು ಮತದಾರರ ಮ್ಯಾಪಿಂಗ್ ಪೂರ್ಣ

## ಬಿ.ಎಲ್.ಒಗಳು ಜೂನ್ 30 ರಿಂದ ಜುಲೈ 29ರವರೆಗೆ ಮನೆ- ಮನೆ ಭೇಟಿ

• **ಉದಯವಾಹಿನಿ, ಮೈಸೂರು**

ಚುನಾವಣಾ ಆಯೋಗದ ನಿರ್ದೇಶನದಂತೆ ಜಿಲ್ಲೆಯಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್.ಐ.ಆರ್) ಪ್ರಕ್ರಿಯೆ ಕೈಗೊಳ್ಳಲಾಗುತ್ತಿದೆ. ಜಿಲ್ಲೆಯಲ್ಲಿ ಶೇ.96 ರಷ್ಟು ಮತದಾರರ ಮ್ಯಾಪಿಂಗ್ ಪೂರ್ಣಗೊಳಿಸಲಾಗಿದೆ ಎಂದು ಜಿಲ್ಲಾಧಿಕಾರಿ ಲಕ್ಷ್ಮಿಕಾಂತ ರೆಡ್ಡಿ ಜಿ ಅವರು ತಿಳಿಸಿದರು.

ಅವರು ಇಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ರಾಜಕೀಯ ಪಕ್ಷಗಳ ಮುಖಂಡರುಗಳ ಸಭೆ ನಡೆಸಿ ಮಾತನಾಡಿದರು.ಎಸ್.ಐಆರ್ ಅರ್ಹತಾ ದಿನಾಂಕವನ್ನು ಅಕ್ಟೋಬರ್ 1 ಕ್ಕೆ ನಿಗಧಿಪಡಿಸಲಾಗಿದೆ. ಸಿದ್ಧತೆ ಮಾಡಿಕೊಳ್ಳುವುದು, ತರಬೇತಿ ಹಾಗೂ ಮುದ್ರಣಕ್ಕೆ ಜೂನ್ 20 ರಿಂದ 29 ರವರಗೆ ದಿನಾಂಕ ನಿಗದಿಪಡಿಸಲಾಗಿದೆ. ಬಿ.ಎಲ್. ಒಗಳು ಜೂನ್ 30 ರಿಂದ ಜುಲೈ 29 ರವರೆಗೆ ಮನೆ- ಮನೆ ಭೇಟಿ ನೀಡಲಿದ್ದಾರೆ. ಜುಲೈ 29 ರಂದು ಮತಗಟ್ಟೆಗಳ ರಾಷನಲೈಜೇಷನ್ ಪ್ರಕ್ರಿಯೆ ನಡೆಸಲಾಗುವುದು. ಆಗಸ್ಟ್ 5 ರಂದು ಕರಡು ಮತದಾರರ ಪಟ್ಟಿ ಪ್ರಕಟಿಸಲಾಗುವುದು. ಆಗಸ್ಟ್ 5 ರಿಂದ ಸೆಪ್ಟೆಂಬರ್ 4 ರವರೆಗೆ ಹಕ್ಕು ಮತ್ತು ಆಕ್ಷೇಪಣೆಗಳನ್ನು ಸಲ್ಲಿಸಲು ಅವಕಾಶ



ಉದಯವಾಹಿನಿ ಚಿತ್ರ

ಕಲ್ಪಿಸಲಾಗುವುದು. ಹಕ್ಕು ಮತ್ತು ಆಕ್ಷೇಪಣೆಗಳನ್ನು ಆಗಸ್ಟ್ 5 ರಿಂದ ಅಕ್ಟೋಬರ್ 3 ರವರೆಗೆ ಇತ್ಯರ್ಥ ಪಡಿಸಲಾಗುವುದು. ಅಕ್ಟೋಬರ್ 7 ರಂದು ಅಂತಿಮ ಮತದಾರರ ಪಟ್ಟಿ ಪ್ರಕಟಿಸಲಾಗುವುದು ಎಂದು ವೇಳಪಟ್ಟಿ ವಿವರಿಸಿದರು. ಸಾರ್ವಜನಿಕರು ತಮಗೆ ನೀಡಲಾಗುವ ಎನ್ಯೂಮರೇಷನ್ ಫಾರಂ ನಲ್ಲಿ ನಿಖರ ಮಾಹಿತಿ ಭರ್ತಿ ಮಾಡಿ ಸಹಿ ಮಾಡಿ ನೀಡುವುದು. ಮರಣ ಹೊಂದಿರುವವರು, ವಲಸೆ ಹೋಗಿರುವವರ ವಿವರ ಭರ್ತಿ ಮಾಡಿ ನೀಡುವುದು ಹಾಗೂ ಇನ್ನಿತರೆ ತಪ್ಪು ಮಾಹಿತಿ ಒದಗಿಸುವುದು ಶಿಕ್ಷಾರ್ಹ ಅಪರಾಧವಾಗಿರುತ್ತದೆ ಎಂದು ಎಚ್ಚರಿಕೆ ನೀಡಿದರು. ಭಾರತ ದೇಶದ ಪ್ರಜೆಯಾಗಿರುವ ಅರ್ಹ ಮತದಾರರು ಮತದಾನದ ಹಕ್ಕಿನಿಂದ ವಂಚಿತರಾಗಬಾರದು ಎಂದು ಹೇಳಿದರು.

> ಬಿಎಲ್‌ಒಗಳು ಮನೆಗಳಿಗೆ ಕನಿಷ್ಠ ಮೂರು ಬಾರಿ ಭೇಟಿ ನೀಡಿ, ಎನೂಮರೇಷನ್ ಫಾರಂ ತಲುಪಿಸಿ, ಮತದಾರರಿಂದ ದೃಢೀಕರಿಸಿಕೊಂಡು ಸಹಿ ಪಡೆದು ವಾಪಸ್ ತರಲಿದ್ದಾರೆ. ಸಾರ್ವಜನಿಕರು ನಮೂನೆ ಸ್ವೀಕರಿಸಿ, ಪರಿಶೀಲಿಸಿ ಕಡ್ಡಾಯವಾಗಿ ಬಿಎಲ್‌ಒಗಳಿಗೆ ವಾಪಸ್ ನೀಡಬೇಕು. ಇಲ್ಲದಿದ್ದರೆ ಮತದಾರರ ಪಟ್ಟಿಯಿಂದ ಹೆಸರು ಕೈಬಿಟ್ಟು ಹೋಗುವ ಸಾಧ್ಯತೆ ಇರುತ್ತದೆ. ರಾಜಕೀಯ ಪಕ್ಷಗಳು ಈ ಬೃಹತ್ ಕಾರ್ಯಕ್ಕೆ ಕೈಜೋಡಿಸಬೇಕು ಎಂದು ಮನವಿ ಮಾಡಿದರು.
> -ಜಿಲ್ಲಾಧಿಕಾರಿ ಲಕ್ಷ್ಮಿಕಾಂತ ರೆಡ್ಡಿ ಜಿ

### ನೊಂದಣಿ ಫಾರಂನ್ನು ಭರ್ತಿ

ಜೂನ್ 30ರಿಂದ ಜುಲೈ 29ವರೆಗೆ ಬಿ.ಎಲ್.ಓಗಳು ಮನೆ-ಮನೆಗೆ ಭೇಟಿ ನೀಡಿ ಮತದಾರರಿಗೆ ನೊಂದಣಿ ಫಾರಂ ನೀಡಲಿದ್ದಾರೆ. ನೊಂದಣಿ ಫಾರಂನ್ನು ಭರ್ತಿ ಮಾಡಿದ ನಂತರ ಜುಲೈ 29 ರೊಳಗೆ ಪಡೆದು, ಆಗಸ್ಟ್ 5 ರಂದು ಕರಡು ಮತದಾರರ ಪಟ್ಟಿ ಪ್ರಕಟಿಸಲಾಗುವುದು ಎಂದರು

## ಮಿನಿ ನ್ಯೂಸ್

# ಗುಂಡ್ಲುಪೇಟೆ ಪುರಸಭೆಯಿಂದ ಪರಿಸರ ದಿನ ಅರ್ಥಪೂರ್ಣ ಆಚರಣೆ



ಉದಯವಾಹಿನಿ ಚಿತ್ರ

• **ಉದಯವಾಹಿನಿ, ಗುಂಡ್ಲುಪೇಟೆ**

ಪಟ್ಟಣದಲ್ಲಿ ವಿಶ್ವ ಪರಿಸರ ದಿನಾಚರಣೆಯ ಅಂಗವಾಗಿ ಪುರಸಭೆ ಹಾಗೂ ವಿವಿಧ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ಸಾರ್ವಜನಿಕರಲ್ಲಿ ಪರಿಸರ ಸಂರಕ್ಷಣೆ ಕುರಿತು ಅರಿವು ಮೂಡಿಸುವ ಹಿನ್ನೆಲೆ ಬೃಹತ್ ವಾಕಥಾನ್, ಮಾನವ ಸರಪಳಿ ಮತ್ತು ಸಸಿ ನಾಟಿ ಸೇರಿದಂತೆ ವೈವಿಧ್ಯಮಯ ಕಾರ್ಯಕ್ರಮಗಳನ್ನು ಆಯೋಜನೆ ಮಾಡುವ ಮೂಲಕ ಅರ್ಥಪೂರ್ಣವಾಗಿ ಆಚರಿಸಲಾಯಿತು.

ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ತಹಶೀಲ್ದಾರ್ ತನ್ಮಯ್ ಹಾಗೂ ಖ್ಯಾತ ವನ್ಯಜೀವಿ ಛಾಯಾಗ್ರಾಹಕ ಮಧು ಅವರು ಪುರಸಭೆಯ ಮುಖ್ಯಾಧಿಕಾರಿಗಳೊಂದಿಗೆ ಜಂಟಿಯಾಗಿ ಹಸಿರು ನಿಶಾನೆ ತೋರುವ ಮೂಲಕ ಪರಿಸರ ಜಾಗೃತಿ ವಾಕಥಾನ್ (ಕಾಲ್ನಡಿಗೆ ಜಾಥಾ) ಗೆ ಅಧಿಕೃತವಾಗಿ ಚಾಲನೆ ನೀಡಿದರು. ಜಾಗೃತಿ ನಡಿಗೆಯಲ್ಲಿ ಪುರಸಭೆಯ ಪೌರಕಾರ್ಮಿಕರು, ನೀರು ಸರಬರಾಜು ವಿಭಾಗದ ಸಿಬ್ಬಂದಿ ಹಾಗೂ ಸ್ಥಳೀಯ ಕನ್ನಡಪರ ಸಂಘಟನೆಯ ಪದಾಧಿಕಾರಿಗಳು ಉತ್ಸಾಹದಿಂದ ಪಾಲ್ಗೊಂಡಿದ್ದರು.

ಪಟ್ಟಣದ ಪ್ರಮುಖ ರಸ್ತೆಗಳ ಮೂಲಕ ಸಾಗಿದ ಕಾಲ್ನಡಿಗೆ ಜಾಥಾ ನೆಹರು ಬಸ್ ನಿಲ್ದಾಣವನ್ನು ತಲುಪಿತು. ಈ ಸಂದರ್ಭದಲ್ಲಿ ಬಸ್ ನಿಲ್ದಾಣದ ಆವರಣದಲ್ಲಿ ನೆರೆದಿದ್ದ ನೂರಾರು ಜನರೆಲ್ಲರೂ ಒಟ್ಟಾಗಿ ಸೇರಿ ಬೃಹತ್ ಮಾನವ ಸರಪಳಿ ನಿರ್ಮಿಸುವ ಮೂಲಕ ಪರಿಸರ ಸಂರಕ್ಷಣೆಯ ಮಹತ್ವದ ಕುರಿತು ಸಾರ್ವಜನಿಕರ ಗಮನ ಸೆಳೆದರು. ನೆಹರು ಸರ್ಕಲ್‌ನಿಂದ ಮುಂದುವರಿದ ಜಾಗೃತಿ ಜಾಥಾವು ಪಟ್ಟಣದ ಶೇಷಾದ್ರಿ ಪಾರ್ಕ್ ತಲುಪಿ ತಹಶೀಲ್ದಾರ್ ತನ್ಮಯ್, ಬಿಇಒ ಸ್ವಾಮಿ, ಎ.ಡಿ. ಸತೀಶ್ ಹಾಗೂ ಹಿಮವದ್ ಗೋಪಾಲಸ್ವಾಮಿ ಬೆಟ್ಟದ ಪ್ರಧಾನ ಅರ್ಚಕರು ಜಂಟಿಯಾಗಿ ಸಸಿಗಳನ್ನು ನೆಡುವ ಮೂಲಕ ಹಸಿರು ಆಂದೋಲನಕ್ಕೆ ಚಾಲನೆ ನೀಡಿದರು. ಇದೇ ವೇಳೆ ಮಾತನಾಡಿದ ಹಿಮವದ್ ಗೋಪಾಲಸ್ವಾಮಿ ಬೆಟ್ಟದ ಪ್ರಧಾನ ಅರ್ಚಕರು ಪರಿಸರ ಸಂರಕ್ಷಣೆ ನಮ್ಮ ಧರ್ಮವಾಗಬೇಕು ಎಂದು ಕರೆ ನೀಡಿದರು. ಅಲ್ಲದೆ, ಪ್ರಮುಖವಾಗಿ 4 ವಿಧದ ತ್ಯಾಜ್ಯಗಳಾದ ಹಸಿ ಕಸ, ಒಣ ಕಸ, ಹಾನಿಕಾರಕ ಕಸ ಮತ್ತು ಎಲೆಕ್ಟ್ರಾನಿಕ್ ತ್ಯಾಜ್ಯಗಳ ಬಗ್ಗೆ ಸಾರ್ವಜನಿಕರಿಗೆ ವಿವರವಾದ ಮಾಹಿತಿ ನೀಡಿ, ಕಸವನ್ನು ಮೂಲದಲ್ಲೇ ವಿಂಗಡಿಸುವುದರಿಂದ ಪರಿಸರ ಮಾಲಿನ್ಯವನ್ನು ಹೇಗೆ ತಡೆಯಬಹುದು ಎಂದು ಜಾಗೃತಿ ಮೂಡಿಸಿದರು. ಪುರಸಭಾ ಮುಖ್ಯಾಧಿಕಾರಿ ಸರವಣ ಮಾತನಾಡಿ ಕೇವಲ ಪುರಸಭೆ ಅಥವಾ ಸರ್ಕಾರ ಮಾತ್ರವೇ ಪರಿಸರವನ್ನು ರಕ್ಷಿಸಲು ಸಾಧ್ಯವಿಲ್ಲ, ಸಾರ್ವಜನಿಕರ ಸಕ್ರಿಯ ಪಾಲ್ಗೊಳ್ಳುವಿಕೆ ಅತ್ಯಗತ್ಯ ಎಂದು ಸಲಹೆ ನೀಡಿದರು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಗಿಡಗಳನ್ನು ನೆಟ್ಟು ನನ್ನ ಮರ ನನ್ನ ನೆರಳು ವಿನೂತನ ಸ್ಪರ್ಧೆಯಲ್ಲಿ ಭಾಗವಹಿಸಬೇಕಾಗಿ ವಿನಂತಿಸಿಕೊಂಡರು.

# ಗುಡಿಬಂಡೆ ತಾಲ್ಲೂಕು ಕಚೇರಿಗೆ ಜಿಲ್ಲಾಧಿಕಾರಿ ಅನಿರೀಕ್ಷಿತ ಭೇಟಿ

• **ಉದಯವಾಹಿನಿ, ಗುಡಿಬಂಡೆ**

ಚಿಕ್ಕಬಳ್ಳಾಪುರ ಜಿಲ್ಲಾಧಿಕಾರಿ ಜಿ. ಪ್ರಭು ಅವರು ಗುಡಿಬಂಡೆ ತಾಲ್ಲೂಕು ಕಚೇರಿಗೆ ಅನಿರೀಕ್ಷಿತವಾಗಿ ಭೇಟಿ ನೀಡಿ ಕಚೇರಿಯ ವಿವಿಧ ವಿಭಾಗಗಳ ಕಾರ್ಯನಿರ್ವಹಣೆ ಪರಿಶೀಲಿಸಿದರು. ಭೇಟಿ ವೇಳೆ ಸಾರ್ವಜನಿಕರಿಂದ ನೇರವಾಗಿ ಅಹವಾಲುಗಳನ್ನು ಸ್ವೀಕರಿಸಿ, ಸಮಸ್ಯೆಗಳ ಕುರಿತು ವಿವರವಾಗಿ ಮಾಹಿತಿ ಪಡೆದರು.

ತಾಲ್ಲೂಕು ಕಚೇರಿಗೆ ಆಗಮಿಸಿದ ಜಿಲ್ಲಾಧಿಕಾರಿಗಳು ಮೊದಲು ಟಪಾಲು ವಿಭಾಗ, ದಾಖಲೆ ಸಂಗ್ರಹ ಕೊಠಡಿ ಸೇರಿದಂತೆ ವಿವಿಧ ವಿಭಾಗಗಳನ್ನು ಪರಿಶೀಲಿಸಿ, ದಾಖಲೆಗಳ ನಿರ್ವಹಣೆ ಮತ್ತು ಆಡಳಿತಾತ್ಮಕ ಕಾರ್ಯಗಳ ಬಗ್ಗೆ ಅಧಿಕಾರಿಗಳೊಂದಿಗೆ ಚರ್ಚಿಸಿದರು. ಬಳಿಕ ಸಭಾಂಗಣದಲ್ಲಿ ಸಾರ್ವಜನಿಕರ ಅಹವಾಲು ಸ್ವೀಕಾರ ಕಾರ್ಯಕ್ರಮ ನಡೆಸಿದರು. ಸಾರ್ವಜನಿಕರು ಪೋಡಿ, ಬಗರ್ ಹುಕುಂ, ಜಮೀನುಗಳಿಗೆ ರಸ್ತೆ ಸಂಪರ್ಕ, ಸರ್ಕಾರಿ ಭೂಮಿ ಒತ್ತು ವರಿ ತೆರವು, ಜಮೀನು ದುರಸ್ತಿ ಸೇರಿದಂತೆ ಕಂದಾಯ ಇಲಾಖೆಗೆ ಸಂಬಂಧಿಸಿದ ಹಲವು ಸಮಸ್ಯೆಗಳನ್ನು ಜಿಲ್ಲಾಧಿಕಾರಿಗಳ ಗಮನಕ್ಕೆ ತಂದರು.

# ಕೊಳೆತ ಮಾವಿನ ರಾಶಿ ತೆರವು

• **ಉದಯವಾಹಿನಿ, ಚನ್ನಪಟ್ಟಣ**

ನಗರದ ಕುಡಿನೀರುಕಟ್ಟೆ ಬಳಿ ಬೆಂಗಳೂರು ಮೈಸೂರು ಹೆದ್ದಾರಿ ಬದಿಯಲ್ಲಿ ಸುರಿದಿದ್ದ ಕೊಳೆತ ಮಾವಿನ ಹಣ್ಣುಗಳ ರಾಶಿಯನ್ನು ನಗರಸಭೆ ಹಾಗೂ ಎಪಿಎಂಸಿ ವತಿಯಿಂದ ತೆರವು ಮಾಡಲಾಗಿದೆ. 'ಹೆದ್ದಾರಿ ಬದಿ ಕೊಳೆತ ಮಾವಿನಹಣ್ಣು' ವರದಿಯಿಂದ ಎಚ್ಚೆತ್ತುಕೊಂಡ ನಗರಸಭೆ ಹಾಗೂ ಎಪಿಎಂಸಿ ಅಧಿಕಾರಿಗಳು ಜೆಸಿಬಿ ಮೂಲಕ ಕೊಳೆತ ಮಾವಿನ ಹಣ್ಣುಗಳನ್ನು ಟ್ರ್ಯಾಕ್ಟರ್‌ಗೆ ತುಂಬಿ ಸಾಗಿಸಿದ್ದಾರೆ.

ಹೆದ್ದಾರಿ ಇಕ್ಕೆಲಗಳಲ್ಲಿ ರಾಶಿ ಕೊಳೆತ ಮಾವಿನ ಹಣ್ಣುಗಳನ್ನು ಸುರಿಯಲಾಗಿದೆ. ಇಲ್ಲಿನ ಗಬ್ಬು ನಾರುತ್ತಿರುವ ವಾತಾವರಣದಿಂದಾಗಿ ಸಾಂಕ್ರಾಮಿಕ ರೋಗದ ಭೀತಿ ಎದುರಾಗಿದೆ. ಹೆದ್ದಾರಿ ಬದಿ ಕೊಳೆತ ಮಾವಿನಹಣ್ಣು ಈ ಬಗ್ಗೆ ಎಪಿಎಂಸಿ ಹಾಗೂ ನಗರಸಭೆ ಅಧಿಕಾರಿಗಳು ನಿರ್ಲಕ್ಷ್ಯ ತೋರುತ್ತಿದ್ದಾರೆ ಎಂದು ನಾಗರಿಕರು ದೂರಿದ್ದರು.

# ಮರಿಗಳ ಜೊತೆ ತಾಯಿ ಚಿರತೆ ದಾಳಿ; ನಾಲ್ವರು ಗಂಭೀರ

• **ಉದಯವಾಹಿನಿ, ಹೊಳೆನರಸೀಪುರ**



ಮರಿ ಚಿರತೆಗಳೊಂದಿಗೆ ತಾಯಿ ಚಿರತೆ ದಾಳಿ ನಡೆಸಿದ ಪರಿಣಾಮ ನಾಲ್ವರು ಗಂಭೀರವಾಗಿ ಗಾಯಗೊಂಡ ಘಟನೆ ಹಾಸನ ಜಿಲ್ಲೆಯ ಹೊಳೆನರಸೀಪುರದಲ್ಲಿ ಶುಕ್ರವಾರ ಬೆಳಗ್ಗೆ ನಡೆದಿದೆ.ನವೀನ್ (40), ನಾಗರಾಜ್ (55), ಜಯಮ್ಮ (70) ಮತ್ತು ಕೆ.ಜಯಮ್ಮ (50) ಗಾಯಗೊಂಡವರು. ಹೊಳೆನರಸೀಪುರ ತಾಲ್ಲೂಕಿನ ಕಸಬಾ ಹೋಬಳಿಯ ಅಂಕವಳ್ಳಿಯಲ್ಲಿ ಈರೇಗೌಡ ಅವರ ಮಗ ನವೀನ ಹಾಗೂ ಪಾಪಣ್ಣ ಅವರ ಮಗ ನಾಗರಾಜ್(55) ಎಂಬವರು ಜಮೀನಿನಲ್ಲಿ ಕೆಲಸಕ್ಕೆಂದು ತೆರಳಿದಾಗ ಚಿರತೆಗಳು ದಾಳಿ ನಡೆಸಿವೆ. ನಾಗರಾಜ್ ಅವರ ಮುಖಕ್ಕೆ ತೀವ್ರ ಗಾಯವಾಗಿದ್ದು, ಪರಿಸ್ಥಿತಿ ಗಂಭೀರವಾಗಿದೆ. ನವೀನ್ ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಬಳಿಕ ಅಲ್ಲಿಂದ ಚಿರತೆಗಳು ಕಳ್ಳಿಮುದ್ದನಹಳ್ಳಿ ಗ್ರಾಮದ ಜಯಮ್ಮ ಮತ್ತು ಕೆ.ಜಯಮ್ಮ ಎಂಬವರ ಮೇಲೆ ದಾಳಿ ಮಾಡಿವೆ.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 09:00 ರಿಂದ 10:30 |
| ಗುಳಿಕ ಕಾಲ | ಬೆಳಿಗ್ಗೆ | 06:00 ರಿಂದ 07:30 |
| ಯಮಗಂಡ ಕಾಲ | ಮಧ್ಯಾಹ್ನ | 01:30 ರಿಂದ 03:00 |

**ಮೇಷ** ನಿಮ್ಮ ಪ್ರೀತಿಪಾತ್ರರ. ನೀವು ನಿಮ್ಮ ಮನೆಯ ಕಿರಿಯ ಸದಸ್ಯರೊಂದಿಗೆ ಸಮಯವನ್ನು ಕಳೆಯುವುದು ಕಲಿಯಬೇಕು. ನೀವು ಅದನ್ನು ಮಾಡದಿದ್ದರೆ, ನೀವು ಮನೆಯಲ್ಲಿ ಅಭಿಮಾನವನ್ನು ಬೆಳೆಸಲು ಸಾಧ್ಯವಾಗುವುದಿಲ್ಲ. ಇಂದು ಪರಿಸ್ಥಿತಿ ನೀವು ಬಯಸಿದಂತೆ ಇರದೇ ಇರಬಹುದು,

**ವೃಷಭ** ನಿಮ್ಮ ಮನಸ್ಸು ಒಳ್ಳೆಯ ವಿಷಯಗಳನ್ನು ಗ್ರಹಿಸುತ್ತದೆ. ಯಾವುದೇ ಸಮಯದಲ್ಲಿ ಹಣದ ಅಗತ್ಯವಿರುತ್ತದೆ ಆದ್ದರಿಂದ ಇಂದು ಸಾಧ್ಯವಾದಷ್ಟು ನಿಮ್ಮ ಹಣವನ್ನು ಸಂಗ್ರಹಿಸುವ ಬಗ್ಗೆ ಆಲೋಚಿಸಿ. ನಿಮ್ಮ ವಿಪರೀತ ಶಕ್ತಿ ಮತ್ತು ಪ್ರಚಂಡ ಉತ್ಸಾಹ ಅನುಕೂಲಕರ ಫಲಿತಾಂಶಗಳನ್ನು ತರುತ್ತದೆ.

**ಮಿಥುನ** ತೀರಾ ಖರ್ಚು ಮಾಡುವ ಮತ್ತು ಮನರಂಜನೆಗೆ ತುಂಬಾ ಖರ್ಚ ಮಾಡುವ ನಿಮ್ಮ ಪ್ರವೃತ್ತಿಗೆ ಕಡಿವಾಣ ಹಾಕಿ. ಶಿಶುವಿನ ಆರೋಗ್ಯ ಸ್ವಲ್ಪ ಚಿಂತೆಗೆ ಕಾರಣವಾಗಬಹುದು. ನಿಮ್ಮ ಅಚ್ಚುಮೆಚ್ಚಿನವರಿಂದ / ಪತಿ/ ಪತ್ನಿಯಿಂದ ಪಡೆಯುವ ದೂರವಾಣಿ ಕರೆ ನಿಮ್ಮ ದಿನವನ್ನು ಬೆಳಗಲಿದೆ.

**ಕರ್ಕಾಟಕ** ನಗು ನಿಮ್ಮ ಎಲ್ಲ ಸಮಸ್ಯೆಗಳಿಗೆ ಪರಿಹಾರವಾದ್ದರಿಂದ ನಕ್ಕುಬಿಡಿ. ಇಂದು ಯಾವುದೇ ಸಹಾಯವಿಲ್ಲದೆ, ನೀವು ಹಣವನ್ನು ಗಳಿಸುವಲ್ಲಿ ಸಾಮರ್ಥ್ಯರಾಗಿರುತ್ತೀರಿ. ಕುಟುಂಬದಲ್ಲಿ ನಿಮ್ಮ ಸರ್ವಾಧಿಕಾರಿ ಧೋರಣೆಯನ್ನು ಬದಲಾಯಿಸಿಕೊಳ್ಳಲು ಇದು ಒಳ್ಳೆಯ ಸಮಯ.

**ಸಿಂಹ** ಸಾಮಾಜಿಕ ಕಾರ್ಯಗಳಿಗೆ ಹಾಜರಾಗಲು ಅವಕಾಶಗಳಿರಬಹುದು ಹಾಗೂ ಇದು ನಿಮ್ಮನ್ನು ಪ್ರಭಾವಿ ವ್ಯಕ್ತಿಗಳ ಜೊತೆ ನಿಕಟ ಸಂಪರ್ಕ ಹೊಂದುವಂತೆ ಮಾಡಬಹುದು. ನಿಮ್ಮ ಉಪಸ್ಥಿತಿ ನಿಮ್ಮ ಪ್ರೀತಿಪಾತ್ರರಿಗೆ ಈ ವಿಶ್ವವನ್ನು ಒಂದು ಯೋಗ್ಯ ಸ್ಥಾನವನ್ನಾಗಿ ಮಾಡುತ್ತದೆ.

**ಕನ್ಯಾ** ನಿಮ್ಮ ಕುಟುಂಬದ ಸದಸ್ಯರು ನಿಮ್ಮ ಪ್ರಯತ್ನ ಮತ್ತು ಸಮರ್ಪಣೆಯನ್ನು ಪ್ರಶಂಸಿಸುತ್ತಾರೆ ತಮ್ಮ ಪ್ರೀತಿಪತ್ರರೊಡನೆ ಸಣ್ಣ ಪ್ರಯಾಣ ಕೈಗೊಳ್ಳುವವರು ಅತ್ಯಂತ ಸ್ಮರಣೀಯ ಸಮಯವನ್ನು ಹೊಂದುತ್ತಾರೆ. ನಿಮ್ಮ ಸಮಯದ ಮೌಲ್ಯವನ್ನು ಅರ್ಥಮಾಡಿಕೊಳ್ಳಿ,

**ತುಲಾ** ತಾತ್ಕಾಲಿಕವಾದ ಉದ್ವೇಗದಲ್ಲಿ ನಿರ್ಧಾರ ಕೈಗೊಳ್ಳಬೇಡಿ ಇದು ನಿಮ್ಮ ಮಕ್ಕಳ ಹಿತಾಸಕ್ತಿಗೆ ಹಾನಿ ಮಾಡಬಹುದು. ಆಲ್ಕೋಹಾಲ್ ಸಿಗರೇಟ್ ಮುಂತಾದವುಗಳಿಗೆ ಹಣವನ್ನು ಖರ್ಚು ಮಾಡಬಾರದು, ಅದನ್ನು ಮಾಡುವುದು ನಿಮ್ಮ ಆರೋಗ್ಯವನ್ನು ಹದಗೆಡಿಸುತ್ತದೆ.

**ವೃಶ್ಚಿಕ** ಸಂಜೆಯಲ್ಲಿ ವಿಶ್ರಾಂತಿ ತೆಗೆದುಕೊಳ್ಳಿ. ಸಂಶಯಾಸ್ಪದ ಹಣಕಾಸು ವ್ಯವಹಾರಗಳಲ್ಲಿ ಸಿಲುಕಿಕೊಳ್ಳದಂತೆ ಎಚ್ಚರಿಕೆ ವಹಿಸಿ. ಒಟ್ಟಾರೆ ಒಂದು ಲಾಭದಾಯಕ ದಿನವಾದರೂ ನೀವು ನಿರಾಸೆ ಭರವಸೆಯಿಡಬಹುದಾದ ಯಾರಾದರೂ ನಿಮ್ಮನ್ನು ನಿರಾಸೆಗೊಳಿಸುತ್ತಾರೆ.

**ಧನಸ್ಸು** ನೀವು ಸಾಕಷ್ಟು ವಿಶ್ರಾಂತಿ ತೆಗೆದುಕೊಳ್ಳುತ್ತಿರದಿದ್ದಲ್ಲಿ ನಿಮಗೆ ತುಂಬಾ ದಣಿವಾದಂತೆನಿಸುತ್ತದೆ ಮತ್ತು ನಿಮಗೆ ಅಧಿಕ ವಿಶ್ರಾಂತಿ ಬೇಕಾಗುತ್ತದೆ. ಬಾಕಿಯಿರುವ ವಿಷಯಗಳು ರಹಸ್ಯಮಯವಾಗುತ್ತವೆ ಮತ್ತು ವೆಚ್ಚಗಳು ನಿಮ್ಮ ಮನಸ್ಸನ್ನು ಆವರಿಸಿಕೊಳ್ಳುತ್ತವೆ. ನಿಮ್ಮ ಸಾಮಾಜಿಕ ಜೀವನವನ್ನು ನಿರ್ಲಕ್ಷಿಸಬೇಡಿ.

**ಮಕರ** ಆರೋಗ್ಯವು ಇತರರೊಂದಿಗೆ ಸಂತೋಷವನ್ನು ಹಂಚಿಕೊಳ್ಳುವ ಮೂಲಕ ಅರಳುತ್ತದೆ. ನೀವು ಹಣಕಾಸಿನ ಲಾಭ ತರುವ ಅದ್ಭುತವಾದ ಹೊಸ ಕಲ್ಪನೆಗಳನ್ನು ಪ್ರಸ್ತುತಪಡಿಸುತ್ತೀರಿ. ನಿಮ್ಮ ಮನೆಯ ಕರ್ತವ್ಯಗಳನ್ನು ನೀವು ನಿರ್ಲಕ್ಷಿಸಿದ್ದಲ್ಲಿ ನಿಮ್ಮ ಜೊತೆಗಿರುವ ಯಾರಾದರೂ ಸಿಟ್ಟಾಗಬಹುದು.

**ಕುಂಭ** ನಿಮ್ಮಲ್ಲಿ ಇಂದು ಚುರುಕುತನವನ್ನು ನೋಡಬಹುದು. ನಿಮ್ಮ ಆರೋಗ್ಯವು ಇಂದು ನಿಮ್ಮನ್ನು ಸಂಪೂರ್ಣವಾಗಿ ಬೆಂಬಲಿಸುತ್ತದೆ. ನೀವು ತ್ವರಿತ ಹಣ ಪಡೆಯುವ ಬಯಕೆ ಹೊಂದಿರುತ್ತೀರಿ. ನಿಮ್ಮಲ್ಲಿ ಕೆಲವು ಆಭರಣ ಅಥವಾ ಗೃಹಬಳಕೆಯ ಸಾಧನಗಳನ್ನು ಖರೀದಿಸುವ ಸಾಧ್ಯತೆಗಳಿವೆ.

**ಮೀನ** ನಿಮ್ಮ ನೀಡುವ ವರ್ತನೆ ಪರೋಕ್ಷವಾಗಿ ನಿಮಗೆ ಆಶೀರ್ವಾದವೇ ಆಗುತ್ತದೆ, ಏಕೆಂದರೆ ನೀವು ಅನುಮಾನ, ನಿರಾಸೆ, ವಿಶ್ವಾಸರಾಹಿತ್ಯ ಅಹಂಭಾವ ಮತ್ತು ಅಸೂಯೆಯಂಥ ಅನೇಕ ದುರ್ಗುಣಗಳಿಂದ ಮುಕ್ತಿ ಹೊಂದುವ ಸಾಧ್ಯತೆಗಳಿವೆ. ಸಮಯ ಮತ್ತು ಹಣದ ಕಾತರ ನೀವು ಮಾಡಬೇಕು.

## ಹಿಜಾಬ್ ವಿರೋಧಿಸಿ ಪ್ರತಿಭಟನೆ: ವಿದ್ಯಾರ್ಥಿಗಳಿಗೆ ಕೇಸರಿ ಶಾಲು ವಿತರಿಸಲು ಯತ್ನಿಸಿದ ಯತ್ನಾಳ್, ಬೆಂಬಲಿಗರು ಪೊಲೀಸ್ ವಶಕ್ಕೆ

• ಉದಯವಾಹಿನಿ, ವಿಜಯಪುರ:



ಉದಯವಾಹಿನಿ ಚಿತ್ರ

ಶಾಲಾ ಮತ್ತು ಕಾಲೇಜು ವಿದ್ಯಾರ್ಥಿಗಳಿಗೆ ಹಿಜಾಬ್ ಧರಿಸಲು ಅವಕಾಶ ನೀಡಿದ ಕರ್ನಾಟಕ ಸರ್ಕಾರದ ಹೊಸ ಆದೇಶವನ್ನು ವಿರೋಧಿಸಿ ಶುಕ್ರವಾರ ಪ್ರತಿಭಟನೆ ನಡೆಸುತ್ತಿದ್ದ ಬಿಜೆಪಿ ಉಚ್ಚಾಟಿತ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಮತ್ತು ಅವರ ಬೆಂಬಲಿಗರನ್ನು ಪೊಲೀಸರು ವಶಕ್ಕೆ ಪಡೆದರು. ಶಾಲಾ, ಕಾಲೇಜುಗಳಲ್ಲಿ ಹಿಜಾಬ್‌ಗೆ ಅನುಮತಿ ನೀಡಿದ ರಾಜ್ಯ ಸರ್ಕಾರದ ವಿರುದ್ಧ ಪ್ರತಿಭಟನೆ ನಡೆಸಿದ ಯತ್ನಾಳ್ ಮತ್ತು ಅವರ ಬೆಂಬಲಿಗರು, ನಗರದ ದರ್ಬಾರ್ ಕಾಲೇಜು ಬಳಿ ವಿದ್ಯಾರ್ಥಿಗಳಿಗೆ ಕೇಸರಿ ಶಾಲು ವಿತರಿಸಲು ಯತ್ನಿಸಿದ ನಂತರ ಅವರನ್ನು ಪೊಲೀಸ್ ವಶಕ್ಕೆ ಪಡೆಯಲಾಗಿದೆ. ಯತ್ನಾಳ್ ತಮ್ಮ ಬೆಂಬಲಿಗರೊಂದಿಗೆ ವಿದ್ಯಾರ್ಥಿಗಳಿಗೆ ಕೇಸರಿ ಶಾಲು ವಿತರಿಸಲು ದರ್ಬಾರ್ ಶಿಕ್ಷಣ ಸಂಸ್ಥೆಯ ಆವರಣ ತಲುಪಿದ ನಂತರ ಅಧಿಕಾರಿಗಳೊಂದಿಗೆ ವಾಗ್ವಾದ ನಡೆಸಿದರು. ಆದರೆ, ಪೊಲೀಸರು ಮಧ್ಯಪ್ರವೇಶಿಸಿ ಕ್ರಮವನ್ನು ತಡೆದರು. ನಂತರ ಯತ್ನಾಳ್ ಬೆಂಬಲಿಗರು ಮತ್ತು ಪೊಲೀಸ್ ಸಿಬ್ಬಂದಿ ನಡುವೆ ವಾಗ್ವಾದ ನಡೆಯಿತು.

ಪರಿಸ್ಥಿತಿ ಸ್ವಲ್ಪ ಸಮಯದವರೆಗೆ ಉದ್ವಿಗ್ನಗೊಂಡಿದ್ದು, ಬೆಂಬಲಿಗರು ಪೊಲೀಸ್ ಇಲಾಖೆಯ ವಿರುದ್ಧ ಘೋಷಣೆಗಳನ್ನು ಕೂಗಿದರು. ಯತ್ನಾಳ್ ಸ್ಥಳಕ್ಕೆ ಬಂದಾಗ, ಕೇಸರಿ ಶಾಲು ವಿತರಿಸುವ ಮೊದಲು ಅವರನ್ನು ಮತ್ತು ಅವರ ಹಲವಾರು ಬೆಂಬಲಿಗರನ್ನು ಬಂಧಿಸಲಾಯಿತು ಎಂದು ಅಧಿಕಾರಿಗಳು ತಿಳಿಸಿದ್ದಾರೆ. ನಂತರ ಅವರನ್ನು ಪೊಲೀಸ್ ವಾಹನದಲ್ಲಿ ಕರೆದೊಯ್ಯಲಾಯಿತು. ಹೆಚ್ಚುವರಿ ಪಡೆಗಳನ್ನು ಪ್ರದೇಶದಲ್ಲಿ ನಿಯೋಜಿಸಿದ ನಂತರ ಪರಿಸ್ಥಿತಿಯನ್ನು ನಿಯಂತ್ರಣಕ್ಕೆ ತರಲಾಯಿತು ಎಂದು ಪೊಲೀಸರು ತಿಳಿಸಿದ್ದಾರೆ.

## ಮುಳ್ಳಿನ ಹಾಸಿಗೆಯಲ್ಲಿ ಮಲಗಿದ್ದಾರೆ, ಇದು ಭೀಷ್ಮನ ಕೊನೆಯ ದಿನದಂತೆ

### ಪುತ್ತೂರಿನಲ್ಲಿ ಕಾರ್ಯಕ್ರಮವೊಂದರಲ್ಲಿ ಭಾಗವಹಿಸಿ ಮಾತನಾಡಿದ ಮಾಜಿ ಸಿಎಂ ಡಿ.ವಿ.ಸದಾನಂದ ಗೌಡ,

• ಉದಯವಾಹಿನಿ, ಪುತ್ತೂರು:


ಉದಯವಾಹಿನಿ ಚಿತ್ರ

ರಾಜಕಾರಣದಲ್ಲಿ ಶುದ್ಧೀಕರಣ ಪ್ರಯತ್ನ

ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿ ಆಗಿರುವ ಸಮಯ ಸರಿ ಅಂತ ನನಗೆ ಅನಿಸುತ್ತಿಲ್ಲ. ಮೂರು ವರ್ಷ ನಡೆದು ಬಂದ ಹಾದಿಯನ್ನು ಮೀರಿ ಹೋದರೆ ಅವರು ಯಶಸ್ವಿಯಾಗುತ್ತಾರೆ. ಯಾಕೆಂದರೆ ಈಗ ಅವರು ಮುಳ್ಳಿನ ಹಾಸಿಗೆಯಲ್ಲಿ ಮಲಗಿದ್ದಾರೆ ಎಂದು ಮಾಜಿ ಮುಖ್ಯಮಂತ್ರಿ ಡಿ.ವಿ.ಸದಾನಂದ ಗೌಡ ಹೇಳಿದ್ದಾರೆ. ಪುತ್ತೂರಿನ ಎವಿಜಿ ಇಂಗ್ಲಿಷ್ ಮೀಡಿಯಂ ಸ್ಕೂಲ್ ಪ್ರಾರಂಭೋತ್ಸವ ಕಾರ್ಯಕ್ರಮಕ್ಕೆ ಇಂದು ಆಗಮಿಸಿದ ಅವರು ಮಾಧ್ಯಮದ ಜೊತೆ ಮಾತನಾಡಿದರು.

ಚುನಾವಣಾ ವಿಚಾರದಲ್ಲಿ ನಾನು ಸ್ಪರ್ಧಿಯಲ್ಲ. ನಾನೊಬ್ಬ ಸಂತೃಪ್ತಿ ರಾಜಕಾರಣಿ. ಆದರೆ ರಾಜ್ಯಸಭಾ ಚುನಾವಣೆಯಲ್ಲಿ ಅಪೇಕ್ಷಿತ. ಹಾಗೆಂದು ಲಾಬಿ ಮಾಡುವುದಿಲ್ಲ. ಮೊನ್ನೆ ಕೋರ್ ಕಮಿಟಿ ಮೀಟಿಂಗ್‌ನಲ್ಲಿ ಎಲ್ಲಾ 13 ಮಂದಿ ನನ್ನ ಹೆಸರನ್ನೇ ಉಲ್ಲೇಖಿಸಿದ್ದಾರೆ. ರಾಷ್ಟ್ರೀಯ ನಾಯಕರ ತೀರ್ಮಾನಕ್ಕೆ ನಾನು ಬದ್ಧ. ರಾಜ್ಯ ಅಧ್ಯಕ್ಷರ ಬದಲಾವಣೆ ಕುರಿತು ಕೇಂದ್ರದ ತೀರ್ಮಾನ ಅಂತಿಮ ಎಂದು ಡಿವಿಎಸ್ ತಿಳಿಸಿದರು.

ರಾಜಕಾರಣದಲ್ಲಿ ಶುದ್ಧೀಕರಣ ನಡೆಯುತ್ತಿದೆ. ಶುದ್ಧೀಕರಣ ಮಾಡುವ ಪ್ರಯತ್ನದಲ್ಲಿ ಸದಾನಂದ ಗೌಡ ಯಶಸ್ವಿಯಾಗಿದ್ದಾನೆ. ನಾನು ರಾಜ್ಯದ ಮುಖ್ಯಮಂತ್ರಿಯಾಗಿ, ಪಕ್ಷದ ರಾಜ್ಯಾಧ್ಯಕ್ಷನಾಗಿ, ಸಚಿವನಾಗಿ ಎಲ್ಲವನ್ನೂ ಮಾಡಿದವನು ಎಂದರು. ಇನ್ನೊಂದೆಡೆ, ಧಾರವಾಡದಲ್ಲಿ ಮಾತನಾಡಿದ ವಿಪಕ್ಷ ಉಪನಾಯಕ ಅರವಿಂದ್ ಬೆಲ್ಲದ ಅವರು, ಸಿದ್ದರಾಮಯ್ಯ ಸಿಎಂ ಇದ್ದಾಗ ಬೇರೆಯವರು ಆಟ ಆಡ್ತಿದ್ದರು. ಈಗ ಡಿಕೆಶಿ ಸಿಎಂ ಆದಮೇಲೆ ಸಿದ್ದರಾಮಯ್ಯ ಹಾಗೂ ಬೇರೆಯವರು ಆಟ ಆಡ್ತಿದ್ದಾರೆ. ಈ ಆಟ ನಿರಂತರ ಎಂದು ಟೀಕಿಸಿದ್ದಾರೆ.

ಜನರ ಬಗ್ಗೆ ಹಾಗೂ ರಾಜ್ಯದ ಬಗ್ಗೆ ಇವರಿಗೆ ಯಾವುದೇ ಕಾಳಜಿ ಇಲ್ಲ. ಬರಗಾಲ ಬರುವ ಲಕ್ಷಣಗಳು ಕಾಣುತ್ತಿದೆ. ಸಿಎಂ ಆದವರು ಮಂತ್ರಿಯಾದರು ಈ ಬಗ್ಗೆ ಕಾಳಜಿವಹಿಸಬೇಕು. ಆದರೆ ಅಧಿಕಾರದಾಸೆಗೆ ನಿಂತಿದ್ದಾರೆ. ಮಧ್ಯಂತರ ಚುನಾವಣೆ ಆಗುವುದಿಲ್ಲ. ಆದರೆ ಇವರೇ ಅಧಿಕಾರದ ಆಸೆಗೆ ಹೊಡೆದಾಡುತ್ತಾರೆ ಎಂದರು. ಗೃಹ ಇಲಾಖೆ ಅಂದರೆ ಅದು ಜವಾಬ್ದಾರಿಯುತ ಇಲಾಖೆ. ಎಲ್ಲರನ್ನೂ ಸರಿಸಮಾನವಾಗಿ ಕಾಣಬೇಕು. ನಿಮಗೆ ಯಾರೋ ಮೀಡಿಯಾ ಅಥವಾ ಅಕ್ಕಪಕ್ಕದವರು ಹೇಳ್ತಾರೆ ಅಂತ ಏನೇನೋ ನಿರ್ಧಾರ ತೆಗೆದುಕೊಳ್ಳಬಾರದು. ಹಳದಿ ಕಣ್ಣಿನಿಂದ ಯಾವುದೋ ಒಂದು ಸಂಸ್ಥೆಯನ್ನು ನೋಡಬಾರದು. ನೀವು ಬಂದು STT ಏನು ಕೆಲಸ ಮಾಡುತ್ತಿದೆ ಅನ್ನೋದನ್ನು ನೋಡಿ, ಆ ರೀತಿಯ ಸಂಸ್ಥೆಗಳಿಗೆ ಸಹಾಯ ಸೇರಿದಂತೆ ಸಂಸ್ಥೆ ಕಟ್ಟುವ ಕೆಲಸ ಮಾಡಿ. STT ರಾಷ್ಟ್ರ ಕಟ್ಟುವ ಕೆಲಸ ಮಾಡುತ್ತದೆ. ನಮ್ಮ ವೈರಿಯಲ್ಲಿ ಸಹ ಒಳ್ಳೆಯ ಗುಣವನ್ನು ನೋಡಿ ಕಲಿಯಬೇಕು ಅಂತ ದೊಡ್ಡೋರು ಹೇಳ್ತಾರೆ. ನಿಮಗೆ STT ಮೇಲೆ ವಿರೋಧ ಇರಬಹುದು. ಆದರೆ ಅದು ಏನು ಕೆಲಸ ಮಾಡುತ್ತದೆ ಅನ್ನೋದನ್ನು ನೋಡಿ ಎಂದು ಸಲಹೆ ನೀಡಿದರು.

> **ಈ ಹಿಂದೆ ಭ್ರಷ್ಟಾಚಾರ, ಸ್ವಜನಪಕ್ಷಪಾತ, ಅಭಿವೃದ್ಧಿ ಕುಂಠಿತ, ಗುಂಪು ರಾಜಕೀಯವನ್ನು ಕಂಡಿದ್ದೇವೆ. ಈಗಾಗಲೇ ರಾಮಲಿಂಗಾರೆಡ್ಡಿ ರಾಜೀನಾಮೆ ಕೊಟ್ಟಿರುವುದು ನೋಡಿದರೆ ಮುಖ್ಯಮಂತ್ರಿಯವರು ಮುಳ್ಳಿನ ಹಾಸಿಗೆಯಲ್ಲಿ ಮಲಗಿದ್ದಾರೆ. ಇದು ಭೀಷ್ಮನ ಕೊನೆಯ ದಿನದಂತೆ ಆಗುತ್ತದೆ ಎಂದು ನಾನು ಭಾವಿಸಿದ್ದೇನೆ. ಒಬ್ಬ ಒಕ್ಕಲಿಗ ಸಮಾಜದ ವ್ಯಕ್ತಿ ಮುಖ್ಯಮಂತ್ರಿ ಆಗಿರುವುದು ನಮಗೆ ಗೌರವ ಇದೆ. ಆದರೆ ಅವರ ಯೋಚನೆಗಳನ್ನು ಯಶಸ್ವಿಯಾಗಿ ಪೂರೈಸಲು ಈಗಿನ ದಿನದಲ್ಲಿ ಆಗುವುದಿಲ್ಲ ಎಂದರು.**
> -ಮಾಜಿ ಸಿ ಎಂ ಸದಾನಂದ ಗೌಡ

## 3 ಕೋಟಿ ವೆಚ್ಚದ ಸೇತುವೆ ಕಾಮಗಾರಿಗೆ ಗುದ್ದಲಿ ಪೂಜೆ

• ಉದಯವಾಹಿನಿ, ಬೀದರ್


ಉದಯವಾಹಿನಿ ಚಿತ್ರ

ಬೀದರ್ ದಕ್ಷಿಣ ಕ್ಷೇತ್ರದ ಚಿಟ್ಟಾವಾಡಿ-ಚಿಟ್ಟಾ ಗ್ರಾಮದ ಮುಖ್ಯ ರಸ್ತೆಯಲ್ಲಿ ಸುಮಾರು 3 ಕೋಟಿ ವೆಚ್ಚದಲ್ಲಿ ನಿರ್ಮಾಣವಾಗಲಿರುವ ನೂತನ ಸೇತುವೆ ಕಾಮಗಾರಿಗೆ ಗುದ್ದಲಿ ಪೂಜೆ ನೆರವೇರಿಸಿ ಚಾಲನೆ ನೀಡಲಾಯಿತು. ಈ ಸೇತುವೆ ನಿರ್ಮಾಣವು ಗ್ರಾಮೀಣ ಭಾಗದ ಅಭಿವೃದ್ಧಿಗೆ ಹೊಸ ಮೈಲಿಗಲ್ಲಾಗಲಿದ್ದು, ಸ್ಥಳೀಯ ಜನರ ಬಹುದಿನಗಳ ಕನಸನ್ನು ನನಸಾಗಿಸುವ ಮಹತ್ವದ ಯೋಜನೆಯಾಗಿದೆ. ವರ್ಷಗಳಿಂದ ಮಳೆಗಾಲದಲ್ಲಿ ಈ ಭಾಗದ ಜನರು ಸಂಚಾರಕ್ಕೆ ತೀವ್ರ ತೊಂದರೆ ಅನುಭವಿಸುತ್ತಿದ್ದರು. ರಸ್ತೆ ಸಂಪರ್ಕ ಕಡಿತಗೊಂಡು ರೈತರು ತಮ್ಮ ಕೃಷಿ ಚಟುವಟಿಕೆಗಳಿಗೆ, ವಿದ್ಯಾರ್ಥಿಗಳು ಶಾಲಾ-ಕಾಲೇಜುಗಳಿಗೆ ಹಾಗೂ ಸಾರ್ವಜನಿಕರು ತಮ್ಮ ದೈನಂದಿನ ಕೆಲಸಗಳಿಗೆ ತೆರಳಲು ಪರದಾಡುವ ಪರಿಸ್ಥಿತಿ ನಿರ್ಮಾಣವಾಗುತ್ತಿತ್ತು.

ಈ ಹಿನ್ನೆಲೆಯಲ್ಲಿ ಗ್ರಾಮಸ್ಥರು ಸೇತುವೆ ನಿರ್ಮಾಣಕ್ಕೆ ಬೇಡಿಕೆ ಸಲ್ಲಿಸಿದ್ದರು. ಈಗ ಸುಮಾರು 3 ಕೋಟಿ ವೆಚ್ಚದಲ್ಲಿ ನಿರ್ಮಾಣಗೊಳ್ಳಲಿರುವ ಸುಸಜ್ಜಿತ ಸೇತುವೆಯು ಚಿಟ್ಟಾವಾಡಿ, ಚಿಟ್ಟಾ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಜನರಿಗೆ ಉತ್ತಮ ಸಂಚಾರ ವ್ಯವಸ್ಥೆಯನ್ನು ಕಲ್ಪಿಸಲಿದೆ.

ವಿಶೇಷವಾಗಿ ಮಳೆಗಾಲದಲ್ಲಿ ಉಂಟಾಗುತ್ತಿದ್ದ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ದೊರೆಯಲಿದ್ದು, ರೈತರು ತಮ್ಮ ಕೃಷಿ ಉತ್ಪನ್ನಗಳನ್ನು ಸುಲಭವಾಗಿ ಮಾರುಕಟ್ಟೆಗೆ ಸಾಗಿಸಲು ಅನುಕೂಲವಾಗಲಿದೆ. ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರು ಸುರಕ್ಷಿತವಾಗಿ ಸಂಚರಿಸಲು ಸಹ ನೆರವಾಗಲಿದೆ.

> **ಜನರ ಅಗತ್ಯತೆಗಳಿಗೆ ಸ್ಪಂದಿಸಿ ಕ್ಷೇತ್ರದ ಅಭಿವೃದ್ಧಿಗೆ ನಿರಂತರವಾಗಿ ಆದ್ಯತೆ ನೀಡಲಾಗುತ್ತಿದೆ. ರಸ್ತೆ, ಸೇತುವೆ, ಕುಡಿಯುವ ನೀರು, ಶಿಕ್ಷಣ ಹಾಗೂ ಆರೋಗ್ಯ ಕ್ಷೇತ್ರಗಳಲ್ಲಿ ಮೂಲಸೌಕರ್ಯ ಅಭಿವೃದ್ಧಿಗೆ ಸರ್ಕಾರದ ಅನುದಾನವನ್ನು ಸಮರ್ಪಕವಾಗಿ ಬಳಸಿಕೊಂಡು ಜನರಿಗೆ ಉತ್ತಮ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ. ಚಿಟ್ಟಾವಾಡಿ-ಚಿಟ್ಟಾ ಸೇತುವೆ ನಿರ್ಮಾಣವು ಈ ಭಾಗದ ಅಭಿವೃದ್ಧಿಗೆ ಹೊಸ ದಿಕ್ಕು ನೀಡಲಿದೆ ಎಂದು ಹೇಳಿದರು.**
> -ಶಾಸಕ ಡಾ. ಶೈಲೇಂದ್ರ, ಬೆಲ್ದಾಳೆ

## ತಂಬಾಕು ಉತ್ಪನ್ನ ಮಾರಾಟ ಮಾಡುವ ಅಂಗಡಿಗಳ ಮೇಲೆ ದಾಳಿ

• ಉದಯವಾಹಿನಿ, ಕಲಬುರಗಿ


ಉದಯವಾಹಿನಿ ಚಿತ್ರ

ಕಲಬುರಗಿ ಗ್ರಾಮೀಣ ಭಾಗವಾದ ಫರಹತಾಬಾದ್ ಪ್ರದೇಶದಲ್ಲಿ ಕಾನೂನು ಬಾಹಿರ ತಂಬಾಕು ಉತ್ಪನ್ನ ಮಾರಾಟ ಮಾಡುವ ಅಂಗಡಿಗಳಿಗೆ ಆರೋಗ್ಯ ಮತ್ತು ಪೊಲೀಸ್ ಇಲಾಖೆ ಮೇಲೆ ದಾಳಿ ನಡೆಸಲಾಯಿತು. 2003 ಕಟ್ಟುನಿಟ್ಟಿನ ಅನುಷ್ಠಾನ ಮಾಡುವ ಹಿನ್ನೆಲೆಯಲ್ಲಿ ಆರೋಗ್ಯ ಮತ್ತು ಪೊಲೀಸ್ ಇಲಾಖೆ ಜಂಟಿ ಕಾರ್ಯಾಚರಣೆ ನಡೆಸಿ 26 ಅಂಗಡಿಗಳ ಮೇಲೆ ದಾಳಿ ಮಾಡಿ 2,660 ದಂಡ ವಿಧಿಸಲಾಯಿತು. ಜಿಲ್ಲಾಧಿಕಾರಿಗಳ ಸಭಾ ನಡವಳಿಕೆ ಆದೇಶದ ಮೇರೆಗೆ, ಕಲಬುರಗಿ ಜಿಲ್ಲೆಯಲ್ಲಿ ತಂಬಾಕು ನಿಯಂತ್ರಣ ಕಾಯ್ದೆ-2003 ಅನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಪ್ರಾಥಮಿಕ ಆರೋಗ್ಯ ಕೇಂದ್ರ, ಫರಹತಾಬಾದ್ ವ್ಯಾಪ್ತಿಯಲ್ಲಿ ಆರೋಗ್ಯ ಇಲಾಖೆ ಮತ್ತು ಪೊಲೀಸ್ ಇಲಾಖೆ ಜಂಟಿ ಕಾರ್ಯಾಚರಣೆ ನಡೆಸಲಾಯಿತು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಾದ ಡಾ. ಶರಣಬಸಪ್ಪ ಖ್ಯಾತನಾಳ ರವರ ನಿರ್ದೇಶನದಲ್ಲಿ ಜಿಲ್ಲಾ ಸರ್ವೇಕ್ಷಣಾಧಿಕಾರಿ ( ಡಿ ಎಸ್ ಓ ) ಡಾ. ರಾಕೇಶ ಕಾಂಬಳೆ. ಮತ್ತು ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಮಾರುತಿ ಕಾಂಬಳೆ ಅವರ ಸಲಹೆ ಮೇರೆಗೆ ಫರಹತಾಬಾದ್ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ.ಸಂತೋಷ್ ಪಾಟೀಲ ಸಹಕಾರದೊಂದಿಗೆ ನಡೆದ ಈ ದಾಳಿಯಲ್ಲಿ ಶಾಲಾ-ಕಾಲೇಜುಗಳ 100 ಗಜದೊಳಗೆ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಕಾನೂನುಬಾಹಿರವಾಗಿ ತಂಬಾಕು ಉತ್ಪನ್ನ ಮಾರಾಟ ಮಾಡುತ್ತಿದ್ದ. 26 ಅಂಗಡಿ-ಮುಂಗಟ್ಟುಗಳ ಮೇಲೆ ದಾಳಿ ನಡೆಸಿ, ಒಟ್ಟು 2,660 ದಂಡ ವಸೂಲಿ ಮಾಡಲಾಯಿತು.

## ಅರಿಯಡ್ಕ ಶಾಲೆಯಲ್ಲಿ ವನಮಹೋತ್ಸವ ಕಾರ್ಯಕ್ರಮ

• ಉದಯವಾಹಿನಿ, ಪುತ್ತೂರು



ವನಮಹೋತ್ಸವ ದಿನದ ಅಂಗವಾಗಿ ಸ.ಹಿ.ಪ್ರಾ ಶಾಲೆ ಅರಿಯಡ್ಕ ಇಲ್ಲಿ ವನಮಹೋತ್ಸವ ನಡೆಯಿತು. ಶಾಲೆಯ ಮುಖ್ಯೋಪಾಧ್ಯಾಯಿನಿ ಶ್ರೀಮತಿ ಯುಮುನಾ ರವರು ಗಿಡ ನೆಡುವ ಮೂಲಕ ವನ ಮಹೋತ್ಸವ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಉಪವಲಯ ಅರಣ್ಯಾಧಿಕಾರಿ ಮದನ್ ಬಿ.ಕೆ, ಗಸ್ತು ಅರಣ್ಯ ಪಾಲಕರಾದ ದಿವೀಶ್ ಕೆ. ಎಸ್ ಡಿ ಎಂ ಸಿ ಅಧ್ಯಕ್ಷರಾದ ಸತೀಶ್ ಎಸ್, ಹಳೆ ವಿದ್ಯಾರ್ಥಿ ಮಹಮ್ಮದ್ ಬೊಳ್ಳಾಡಿ, ಹರೀಶ್ ಪುತ್ತೂರು, ಸಹ ಶಿಕ್ಷಕರಾದ ಶ್ರೀಮತಿ ಮಾಲಾತಿ, ಶ್ರೀಮತಿ ಶ್ವೇತಾ, ಹಾಗೂ ಶ್ರೀಮತಿ ತೇಜಾಶ್ರೀ, ಮತ್ತು ಶಾಲೆಯ ವಿದ್ಯಾರ್ಥಿಗಳು, ಅಕ್ಷರ ದಾಸೋಹ ಸಿಬ್ಬಂದಿಗಳು ಉಪಸ್ಥಿತರಿದ್ದರು.

## ವನಮಹೋತ್ಸವ ಕಾರ್ಯಕ್ರಮ

• ಉದಯವಾಹಿನಿ, ಸುಳ್ಯ:

ವಿಶ್ವ ಪರಿಸರ ದಿನದ ಅಂಗವಾಗಿ ಸ.ಉ.ಹಿ.ಪ್ರಾ ಶಾಲೆ ಕೊಡಿಯಾಲ ಇಲ್ಲಿ ವನಮಹೋತ್ಸವ ನಡೆಯಿತು. ಶಾಲೆಯ ಎಸ್ ಡಿ ಎಂ ಸಿ ಸದಸ್ಯರಾದ ವಿಶ್ವನಾಥರವರು ಗಿಡ ನೆಡುವ ಮೂಲಕ ವನ ಮಹೋತ್ಸವ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಶಾಲೆಯ ಮುಖ್ಯೋಪಾಧ್ಯಾರಾದ ಶರಣಪ್ಪ ಧೋಣಿ, ವಿದ್ಯಾಭಿಮಾನಿ ಇಸಾಕ್, ಶಾಲೆಯ ಶಿಕ್ಷಕರಾದ ಶ್ರೀಮತಿ ಸುಜಾತ, ಗೌತಮಿ, ಅಕ್ಷರ ದಾಸೋಹ ಸಿಬ್ಬಂದಿ ಶ್ರೀಮತಿ ರೇವತಿ, ಹಾಗೂ ಶಾಲೆಯ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.


ಉದಯವಾಹಿನಿ ಚಿತ್ರ

## ಕೊಳಗಲ್ಲು ಗ್ರಾಮದಲ್ಲಿ ಪೊಲೀಸರ ಮೇಲೆ ಮಾರಣಾಂತಿಕ ಹಲ್ಲೆ ಆರೋಪ

• ಉದಯವಾಹಿನಿ, ಬಳ್ಳಾರಿ

ಆರೋಪಿಯನ್ನು ಬಂಧಿಸಲು ತೆರಳಿದ್ದ ಪೊಲೀಸ್ ಸಿಬ್ಬಂದಿ ಮೇಲೆ ರಾಡು, ದೊಣ್ಣೆಗಳಿಂದ ದಾಳಿ ಮಾಡಿ ಗಾಯಗೊಳಿಸಿರುವ ಘಟನೆ ತಾಲ್ಲೂಕಿನ ಕೊಳಗಲ್ಲು ಗ್ರಾಮದಲ್ಲಿ ನಡೆದಿದೆ. ಕಳೆದ ಒಂದು ತಿಂಗಳ ಹಿಂದೆ ಕೊಳಗಲ್ಲು ಗ್ರಾಮದ ಕೆರೆಯಿಂದ ಅಕ್ರಮವಾಗಿ ಮಣ್ಣು ಸಾಗಿಸಲಾಗುತ್ತಿದೆ ಎಂದು ಆರೋಪಿಸಿದ ಗ್ರಾಮ ಪಂಚಾಯ್ತಿ ಮಾಜಿ ಅಧ್ಯಕ್ಷ ಹುಲಿಯಪ್ಪನವರ ಮೇಲೂ ಹಲ್ಲೆ ನಡೆದಿತ್ತು. ಈ ಬಗ್ಗೆ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ನಂತರ ಎರಡೂ ಕಡೆಯವರು ಪರಸ್ಪರ ದೂರು ದಾಖಲಿಸಿಕೊಂಡಿದ್ದು, ಪ್ರಕರಣದಲ್ಲಿ ಕೆಲವರ ವಿರುದ್ಧ ಅಟ್ರಾಸಿಟಿ ಪ್ರಕರಣ ದಾಖಲಾಗಿತ್ತು. ಪ್ರಕರಣದ ತನಿಖೆಯನ್ನು ನಾಗರಿಕ ಹಕ್ಕು ಜಾರಿ ನಿರ್ದೇಶನಾಲಯದ ಪೊಲೀಸರು ಕೈಗೆತ್ತಿಕೊಂಡಿದ್ದರು. ಈ ಪ್ರಕರಣದ ಆರೋಪಿ ಅನಿಲ್ನನ್ನು ಬಂಧಿಸುವ ಉದ್ದೇಶದಿಂದ ನಿನ್ನೆ ನಾಗರಿಕ ಹಕ್ಕು ಜಾರಿ ನಿರ್ದೇಶನಾಲಯದ ಪೊಲೀಸ್ ಸಿಬ್ಬಂದಿಗಳಾದ ವೀರೇಶ್ ಬಾಬು ಹಾಗೂ ಪಾಂಡು ಅವರು ಕೊಳಗಲ್ಲು ಗ್ರಾಮಕ್ಕೆ ತೆರಳಿದ್ದರು. ಈ ವೇಳೆ ಗ್ರಾಮದ ಭೀಮ ಸೇರಿದಂತೆ ಹಲವರು ಆರೋಪಿ ಭೀಮನನ್ನು ತಾವೇ ಠಾಣೆಗೆ ಕರೆತರುವುದಾಗಿ ಹೇಳಿದ್ದಾರೆ. ಮಹಿಳೆಯರು ಹಾಗೂ ಪುರುಷರು ಸೇರಿ ಪೊಲೀಸರ ಕಾರ್ಯಾಚರಣೆಗೆ ಅಡ್ಡಿಪಡಿಸಿದ್ದಾರೆ. ಪೊಲೀಸ್ ಪೇದೆ ವೀರೇಶ್ ಬಾಬು ಅವರ ಮೇಲೆ ಹಲ್ಲೆ ನಡೆಸಲಾಗಿದೆ ತಕ್ಷಣ ಅವರನ್ನು ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ಕೊಡಿಸಿದ್ದಾರೆ.

## ಪರಿಸರ ಮಾಲಿನ್ಯಕ್ಕೆ ಕಡಿವಾಣ ಹಾಕಿ ನ್ಯಾಯಾಧೀಶ ಜಿ.ಡಿ. ಮಹಾವರ್ಕರ್

• ಉದಯವಾಹಿನಿ, ಚಿತ್ರದುರ್ಗ



ಉದಯವಾಹಿನಿ ಚಿತ್ರ

ಆಧುನಿಕ ಜೀವನಶೈಲಿಗೆ ಒಗ್ಗಿಕೊಂಡಿರುವ ನಾವು ಸ್ವಚ್ಛಂದ ಜೀವನ ನಡೆಸಲು ಪ್ರಯತ್ನಿಸುತ್ತಿದ್ದೇವೆಯೇ ಹೊರತು, ಅದರಿಂದ ಪರಿಸರದ ಮೇಲಾಗುತ್ತಿರುವ ಹಾನಿಯ ಬಗ್ಗೆ ಯೋಚಿಸುತ್ತಿಲ್ಲ. ನಮ್ಮ ಸ್ವಾರ್ಥಕ್ಕಾಗಿ ಪರಿಸರ ಹಾಳುಗೆಡವುತ್ತಿರುವುದು ಆತಂಕಕಾರಿ ಸಂಗತಿ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಜಿ.ಡಿ. ಮಹಾವರ್ಕರ್ ಕಳವಳ ವ್ಯಕ್ತಪಡಿಸಿದರು. ನಗರದ ಜಿಲ್ಲಾ ನ್ಯಾಯಾಲಯದ ಆವರಣದಲ್ಲಿ ಶುಕ್ರವಾರ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ವಕೀಲರ ಸಂಘ, ಅರಣ್ಯ ಇಲಾಖೆ ಹಾಗೂ ತೋಟಗಾರಿಕೆ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ 'ವಿಶ್ವ ಪರಿಸರ ದಿನಾಚರಣೆ' ಅಂಗವಾಗಿ ಸಸಿ ನೆಡುವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

1ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ವೀರಣ್ಣ ಸೋಮಶೇಖರ್ ಮಾತನಾಡಿ, ಪರಿಸರ ರಕ್ಷಣೆ ಪ್ರತಿಯೊಬ್ಬರ ಆದ್ಯ ಕರ್ತವ್ಯವಾಗಿದೆ ಪ್ರತಿಯೊಂದು ಹುಟ್ಟುಹಬ್ಬ ಅಥವಾ ವಿಶೇಷ ಕಾರ್ಯಕ್ರಮದ ನೆನಪಿಗೆ ಒಂದು ಸಸಿ ನೆಡುವ ಮೂಲಕ ಅದನ್ನು ಪೋಷಿಸಿ ಬೆಳೆಸಿದರೆ ಪರಿಸರ ಕಾಪಾಡಲು ತುಂಬಾ ಅನುಕೂಲವಾಗುತ್ತದೆ. ಈ ನಿಟ್ಟಿನಲ್ಲಿ ನಾವೆಲ್ಲರೂ ಆಲೋಚಿಸಬೇಕಾಗಿದೆ ಎಂದರು. ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಡಿ.ಜೆ.ಸುದೀನ್ ಕುಮಾರ್ ಉಪ ಅರಣ್ಯ ಸಂರಕ್ಷಣಾಧಿಕಾರಿ ಗೋಪ್ಯನಾಯಕ್ ವಕೀಲರ ಸಂಘದ ಅಧ್ಯಕ್ಷ ಹೆಚ್.ಎಸ್. ಮಹೇಶ್ವರಪ್ಪ, 2ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಗಂಗಾಧರ್ ಚನ್ನಬಸಪ್ಪ ಹಡಪದ್, ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಸಿಜೆಎಂ ಡಿ.ಮಮತ, 1ನೇ ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜೆಎಂಎಫ್‌ಸಿ ಎಸ್. ಶಕುಂತಲಾ, 2ನೇ ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜೆಎಂಎಫ್‌ಸಿ ಆರ್.ನಟೇಶ್, 1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಹಾಗೂ ಜೆಎಂಎಫ್‌ಸಿ ಕೆ.ಜಿ.ಸತೀಶ್, 2ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಹಾಗೂ ಜೆಎಂಎಫ್‌ಸಿ ಪೂಜಾ ಬೆಳಕೆರಿ, 3ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಹಾಗೂ ಜೆಎಂಎಫ್‌ಸಿ ನಿಖಿತಾ ಎಸ್ ಅಕ್ಕಿ, ವಲಯ ಅರಣ್ಯಾಧಿಕಾರಿ ಆರ್.ವಸಂತ ಕುಮಾರ್, ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕ ಬಿ.ದೇವರಾಜ್, ವಕೀಲರ ಸಂಘದ ಕಾರ್ಯದರ್ಶಿ

## ನಾಗರಿಕನು ಕನಿಷ್ಠ ಒಂದು ಗಿಡ ನೆಟ್ಟು ಪೋಷಣೆ ಮಾಡಿದರೆ ಪರಿಸರ ಉಳಿಯುತ್ತದೆ: ನಿಖಿಲೇಶ್ ಪಾಟೀಲ

• ಉದಯವಾಹಿನಿ, ಬಸವನಬಾಗೇವಾಡಿ :


ಉದಯವಾಹಿನಿ ಚಿತ್ರ

ಹಸಿರೇ ಉಸಿರು. ಪ್ರತಿಯೊಬ್ಬ ನಾಗರಿಕನು ಕನಿಷ್ಠ ಒಂದು ಗಿಡ ನೆಟ್ಟು ಪೋಷಣೆ ಮಾಡಿದರೆ ಪರಿಸರ ಉಳಿಯುತ್ತದೆ. ಮನಗೂಳಿ ಪಟ್ಟಣವನ್ನು ಹಸಿರು ಪಟ್ಟಣವನ್ನಾಗಿ ಮಾಡುವುದು ನಮ್ಮೆಲ್ಲರ ಜವಾಬ್ದಾರಿ. ನೆಟ್ಟ ಗಿಡಗಳನ್ನು ಸಂರಕ್ಷಿಸುವ ಹೊಣೆ ಪಂಚಾಯಿತಿಯದ್ದು ಎಂದು ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ನಿಖಿಲೇಶ್ ಪಾಟೀಲ್ ತಿಳಿಸಿದರು.

ಅವರು ಶುಕ್ರವಾರ ತಾಲ್ಲೂಕಿನ ಮನಗೂಳಿ ಪಟ್ಟಣ ಪಂಚಾಯಿತಿಯ ವತಿಯಿಂದ ವಿಶ್ವ ಪರಿಸರ ದಿನಾಚರಣೆ ಸಂದರ್ಭದಲ್ಲಿ ಮಾತನಾಡಿದರು.

ಪಟ್ಟಣದ ವಾರ್ಡ್ ನಂ. 9 ರ ಉದ್ಯಾನವನ, ಪೊಲೀಸ್ ಠಾಣೆ ಆವರಣ, ಹೊಸ ಬಸ್ ನಿಲ್ದಾಣದ ಸುತ್ತಮುತ್ತ ಹಾಗೂ ಆರೋಗ್ಯ ಇಲಾಖೆಯ ಕಚೇರಿ ಆವರಣದಲ್ಲಿ ಒಟ್ಟು ಸುಮಾರು 150 ವಿವಿಧ ಜಾತಿಯ ಗಿಡಗಳನ್ನು ನೆಡುವ ಮೂಲಕ ಪರಿಸರ ಸಂರಕ್ಷಣೆಯ ಸಂದೇಶ ಸಾರಲಾಯಿತು. ಪಪಂ ಅಧ್ಯಕ್ಷ ಶೇಖಪ್ಪಗೌಡ ಬಿರಾದಾರ್, ಸದಸ್ಯರುಗಳಾದ ಭಾಗ್ಯರಾಜ್ ಶ್ರೀಶೈಲ ಸೊನ್ನದ, ಪ್ರದೀಪ್ ಜಾನಕರ, ಶಂಕರ್ ಶಿವಮತ, ಪ್ರಕಾಶ್ ಮನಗೂಳಿ, ಸಲೀಂ ಮಕಾಂದಾರ್, ರಾಜಶೇಖರ್ ವಾಲೀಕಾರ್ ತಿಪ್ಪಣ್ಣ ಕ್ಯಾತನವರ, ವಿಜಯಕುಮಾರ್ ರಜಪೂತ, ರಮೇಶ್ ತೊರವಿ, ಸಚಿನಗೌಡ ಪಾಟೀಲ್, ಪ್ರವೀಣ ಕರಿಶಂಕರಿ , ಹನಮಂತ ಬಿರಳದಿನ್ನಿ, ಸಂತೋಷ್ ಜಾಂಬರೆ, ಯಲ್ಲಪ್ಪ ಉಮನಾಬಾದಿ, ಸಿಬ್ಬಂದಿ ವರ್ಗದವರು, ಊರಿನ ಪ್ರಮುಖರು ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಪಾಲ್ಗೊಂಡು ಗಿಡ ನೆಡುವ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

ಕಾರ್ಯಕ್ರಮದಲ್ಲಿ ಸಾರ್ವಜನಿಕರಿಗೆ ಉಚಿತವಾಗಿ ಸಸಿಗಳನ್ನು ವಿತರಿಸಲಾಯಿತು.

## ಕೃತಕ ಅಭಾವ ಸೃಷ್ಟಿಸಿದರೆ ಕಠಿಣ ಕ್ರಮ: ಸಿ.ಎನ್. ಶ್ರೀಧರ

### ಆಧಾರದ ಮೇಲೆ ಆದ್ಯತೆಯ ಕ್ರಮದಲ್ಲಿ ಇಂಧನ ಪೂರೈಕೆ ಆಗಬೇಕು. ಎಲ್ಲರಿಗೂ ಸಮಾನ ಅವಕಾಶ ದೊರೆಯುವಂತೆ ಇರಬೇಕು

• ಉದಯವಾಹಿನಿ, ಗದಗ,


ಉದಯವಾಹಿನಿ ಚಿತ್ರ

ಜಿಲ್ಲೆಯಲ್ಲಿ ಪೆಟ್ರೋಲ್ ಹಾಗೂ ಡೀಸೆಲ್ ಪೂರೈಕೆಯಲ್ಲಾಗುವ ವ್ಯತ್ಯೆಯವನ್ನು ಸಂಬಂಧಿಸಿದವರು ಸಮರ್ಪಕವಾಗಿ ನಿರ್ವಹಿಸಬೇಕು. ಸಾರ್ವಜನಿಕರು ವದಂತಿಗಳಿಗೆ ಕಿವಿಗೊಟ್ಟು ಆತಂಕದಿಂದ ಇಂಧನ ಸಂಗ್ರಹಿಸುವ ಅಗತ್ಯವಿಲ್ಲ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಹೇಳಿದರು. ಜಿಲ್ಲಾಡಳಿತ ಭವನದ ಕೋರ್ಟ್ ಹಾಲ್‌ನಲ್ಲಿ ಜರುಗಿದ ಪೆಟ್ರೋಲ್ ಬಂಕ್ ಮಾಲೀಕರು, ತೈಲ ಕಂಪನಿಗಳ ಪ್ರತಿನಿಧಿಗಳು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಇತ್ತೀಚೆಗೆ ಇಂಧನ ಕೊರತೆ ಕುರಿತು ಸಾರ್ವಜನಿಕರಲ್ಲಿ ಗೊಂದಲ ಉಂಟಾಗಿರುವುದು ಹಾಗೂ ಕೆಲವು ಬಂಕ್‌ಗಳಲ್ಲಿ ಜನದಟ್ಟಣೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಸಭೆ ಕರೆಯಲಾಗಿತ್ತು.

> **ಜಿಲ್ಲಾಡಳಿತ ಪೆಟ್ರೋಲ್ ಬಂಕ್‌ಗಳಿಗೆ ಇಂಧನ ಸರಬರಾಜಿನಲ್ಲಿ ಅಗತ್ಯ ಸಹಕಾರ ನೀಡಲು ಸಿದ್ಧವಿದ್ದು, ಬಂಕ್ ಮಾಲೀಕರು ಸಹ ಸರ್ಕಾರದೊಂದಿಗೆ ಸಮನ್ವಯದಿಂದ ಕಾರ್ಯನಿರ್ವಹಿಸಿ ಸಾರ್ವಜನಿಕರಿಗೆ ಯಾವುದೇ ತೊಂದರೆ ಆಗದಂತೆ ಇಂಧನ ವಿತರಣೆಯನ್ನು ಸಮರ್ಪಕವಾಗಿ ನಿರ್ವಹಿಸಬೇಕು ಎಂದು ಸೂಚಿಸಿದರು**
> - ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ

ತೈಲ ಕಂಪನಿಗಳು ಸಮಯಕ್ಕೆ ಸರಿಯಾಗಿ ಇಂಧನ ಪೂರೈಸುವಂತೆ ಕ್ರಮವಹಿಸಬೇಕು. ಪೆಟ್ರೋಲ್ ಬಂಕ್‌ಗಳಲ್ಲಿ ಸಾಕಷ್ಟು ದಾಸ್ತಾನು ಇದ್ದರೂ ಸಾರ್ವಜನಿಕರಿಗೆ ಇಂಧನ ನೀಡದೆ ಬಂಕ್ ಮುಚ್ಚುವುದು ಅಥವಾ ''ಇಂಧನ ಲಭ್ಯವಿಲ್ಲ'' ಎಂಬ ಫಲಕ ಹಾಕಿ ಕೃತಕ ಅಭಾವ ಸೃಷ್ಟಿಸುವುದನ್ನು ಯಾವುದೇ ಕಾರಣಕ್ಕೂ ಸಹಿಸಲಾಗುವುದಿಲ್ಲ ಎಂದು ಜಿಲ್ಲಾಧಿಕಾರಿಗಳು ಎಚ್ಚರಿಕೆ ನೀಡಿದರು. ಇಲಾಖೆಯ ಆಟೋಮೇಷನ್ ವ್ಯವಸ್ಥೆಯ ಮೂಲಕ ಬಂಕ್ ದಾಸ್ತಾನು ಸ್ಥಿತಿಯನ್ನು ಆನ್‌ಲೈನ್‌ನಲ್ಲೇ ಪರಿಶೀಲಿಸಲು ಅವಕಾಶವಿದ್ದು, ನಿಯಮ ಉಲ್ಲಂಘಿಸುವ ಡೀಲರ್‌ಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದರು. ಇಂಧನ ಕೊರತೆಯಂತಹ ಪರಿಸ್ಥಿತಿಯನ್ನು ಸಮರ್ಥವಾಗಿ ನಿಭಾಯಿಸುವುದು ಎಲ್ಲರ ಜವಾಬ್ದಾರಿಯಾಗಿದ್ದು, ಇಂಡೆಂಟ್ ಆಧಾರದ ಮೇಲೆ ಆದ್ಯತೆಯ ಕ್ರಮದಲ್ಲಿ ಇಂಧನ ಪೂರೈಕೆ ಆಗಬೇಕು. ಎಲ್ಲರಿಗೂ ಸಮಾನ ಅವಕಾಶ ದೊರೆಯುವಂತೆ ವಿತರಣಾ ವ್ಯವಸ್ಥೆ ಇರಬೇಕು ಎಂದು ಹೇಳಿದರು.

> **ಸಭೆಯಲ್ಲಿ ಭಾಗವಹಿಸಿದ್ದ ಪೆಟ್ರೋಲ್ ಬಂಕ್ ಮಾಲೀಕರು ಮತ್ತು ಪ್ರತಿನಿಧಿಗಳು ತಮ್ಮ ಸಮಸ್ಯೆಗಳು ಹಾಗೂ ಬೇಡಿಕೆಗಳನ್ನು ಜಿಲ್ಲಾಧಿಕಾರಿಗಳ ಗಮನಕ್ಕೆ ತಂದರು. ವಿಶೇಷವಾಗಿ ಹುಬ್ಬಳ್ಳಿಯಿಂದ ಇಂಧನ ಟ್ಯಾಂಕರ್‌ಗಳು ಬರುವಾಗ ಸಂಚಾರ ದಟ್ಟಣೆಯಿಂದ ಉಂಟಾಗುವ ತೊಂದರೆಗಳನ್ನು ನಿವಾರಿಸಲು ಕ್ರಮ ಕೈಗೊಳ್ಳುವಂತೆ ಮನವಿ ಮಾಡಿದರು**

ಕ್ಯಾನ್ ಹಾಗೂ ಬ್ಯಾರೆಲ್‌ಗಳಲ್ಲಿ ಇಂಧನ ಮಾರಾಟ ಮಾಡುವುದನ್ನು ನಿರ್ಬಂಧಿಸಲಾಗಿದೆ ಎಂದು ಸ್ಪಷ್ಟಪಡಿಸಿದ ಜಿಲ್ಲಾಧಿಕಾರಿಗಳು, ಆಸ್ಪತ್ರೆಗಳು, ಎಟಿಎಂ ಕೇಂದ್ರಗಳು, ಮೊಬೈಲ್ ಟವರ್‌ಗಳು ಹಾಗೂ ಇತರೆ ಅಗತ್ಯ ಸೇವೆಗಳ ಜನರೇಟರ್‌ಗಳಿಗೆ ಡೀಸೆಲ್ ಅನಿವಾರ್ಯವಾಗಿದ್ದಲ್ಲಿ ಮಾತ್ರ ಸಂಬಂಧಪಟ್ಟವರು ಸ್ಥಳೀಯ ತಹಶೀಲ್ದಾರ್ ಅಥವಾ ಜಿಲ್ಲಾಡಳಿತದಿಂದ ಅನುಮತಿ ಪತ್ರ ಪಡೆದುಕೊಳ್ಳಬೇಕು. ಆಹಾರ ಇಲಾಖೆ ಅಥವಾ ಕಂದಾಯ ಇಲಾಖೆಯ ಅನುಮೋದನೆ ಪಡೆದವರಿಗೆ ಮಾತ್ರ ಕ್ಯಾನ್ ಅಥವಾ ಬ್ಯಾರೆಲ್ ಮೂಲಕ ಇಂಧನ ವಿತರಿಸಬೇಕು ಎಂದು ತಿಳಿಸಿದರು. ಸರ್ಕಾರದ ನಿಯಮಾವಳಿಗಳ ಅನುಸಾರವೇ ಇಂಧನ ವಿತರಣೆ ನಡೆಯಬೇಕು. ಪರಿಸ್ಥಿತಿಯನ್ನು ಅರ್ಥೈಸಿಕೊಂಡು ಬಂಕ್ ಮಾಲೀಕರು ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸಬೇಕು. ನಿಯಮಗಳನ್ನು ಪಾಲಿಸದೆ ಸಾರ್ವಜನಿಕರಿಗೆ ತೊಂದರೆ ಉಂಟುಮಾಡುವ ಬಂಕ್‌ಗಳ ವಿರುದ್ಧ ಸರ್ಕಾರ ಅಗತ್ಯ ಕ್ರಮ ಕೈಗೊಳ್ಳುವ ಸಾಧ್ಯತೆಯಿದೆ ಎಂದು ಅವರು ಎಚ್ಚರಿಕೆ ನೀಡಿದರು. ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಉಪಸ್ಥಿತರಿದ್ದರು.

> **ದೈನಂದಿನ ವಾಹನ ಸವಾರರಿಗೆ ಎಂದಿನಂತೆ ಯಾವುದೇ ಅಡೆತಡೆಯಿಲ್ಲದೆ ಇಂಧನ ಪೂರೈಸಬೇಕು. ಬಂಕ್‌ಗಳಲ್ಲಿ ಜನಸಂದಣಿ ಹೆಚ್ಚಾದ ಸಂದರ್ಭದಲ್ಲೂ ಸುರಕ್ಷತಾ ಕ್ರಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಿ ಯಾವುದೇ ಅವಘಡ ಸಂಭವಿಸದಂತೆ ಮುನ್ನೆಚ್ಚರಿಕೆ ವಹಿಸಬೇಕು ಎಂದು ಸೂಚಿಸಿದರು.**
> -ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ